25 March 2026 Wednesday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಬದುಕಿನಲ್ಲಿ ನಾವು ಸಂಗ್ರಹಿಸ ಬೇಕಾಗಿದ್ದು ಸಂತೋಷದ ಕ್ಷಣಗಳನ್ನೇ ಹೊರತು ದುಬಾರಿ ಮಾತುಗಳನ್ನಲ್ಲ!
-ಸ್ನೇಹಾ ಆನಂದ್

info.varthaman@gmail.com


ಮೃತಪಟ್ಟಿರುವ 6624 ಗೃಹಲಕ್ಷ್ಮಿ ಫಲಾನುಭವಿಗಳ ಕೈಬಿಡಿ ಪುಟ ಸಂ. 2


ರಸ್ತೆ ಅಪಘಾತ ತಡೆಗೆ ಕ್ರಮವಹಿಸಿ: ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಪುಟ ಸಂ. 3


2030ರೊಳಗೆ ಟಿಬಿ ಮುಕ್ತ ಭಾರತ: ಆರೋಗ್ಯಾಧಿಕಾರಿ ಡಾ.ಆಲೀಂ ಪಾಷಾ ಆಶಯ ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 130 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಅನ್ಯಧರ್ಮಕ್ಕೆ ಮತಾಂತರ ಆದವರಿಗೆ ಪರಿಶಿಷ್ಟ ಸ್ಥಾನಮಾನ ಸಿಗಲ್ಲ: ಸುಪ್ರೀಂ

## ಹಿಂದೂ, ಸಿಖ್, ಬೌದ್ಧ ಧರ್ಮಕ್ಕಷ್ಟೇ ಸೀಮಿತ: ಸುಪ್ರೀಂ ಕೋರ್ಟ್ ಐತಿಹಾಸಿಕ ತೀರ್ಪು

**ನವದೆಹಲಿ:** ಪರಿಶಿಷ್ಟ ಜಾತಿ ಸ್ಥಾನಮಾನ ಕುರಿತು ಸುಪ್ರೀಂ ಕೋರ್ಟ್ ಮಂಗಳವಾರ ಐತಿಹಾಸಿಕ ತೀರ್ಪು ನೀಡಿದೆ. ಹಿಂದೂ, ಸಿಖ್, ಬೌದ್ಧ ಧರ್ಮ ಹೊರತುಪಡಿಸಿ ಬೇರೆ ಧರ್ಮಗಳಿಗೆ ಮತಾಂತರ ಗೊಂಡವರು ಪರಿಶಿಷ್ಟ ಜಾತಿ ಸ್ಥಾನಮಾನ ಪಡೆಯಲು ಅರ್ಹರಲ್ಲ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ.

ಆಂಧ್ರಪ್ರದೇಶ ಹೈಕೋರ್ಟ್ 2025ರ ಮೇ ತಿಂಗಳಲ್ಲಿ ನೀಡಿದ್ದ ತೀರ್ಪನ್ನು ಪ್ರಶ್ನಿಸಿ ಪಾದ್ರಿ ಒನ್ ಚಿಂತದ ಆನಂದ್ ಎಂಬುವವರು ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ಪಿ.ಕೆ.ಮಿಶ್ರಾ ಮತ್ತು ಮನಮೋಹನ್ ಅವರಿದ್ದ ದ್ವಿಸದಸ್ಯ ಪೀಠ ಈ ತೀರ್ಪು ಪ್ರಕಟಿಸಿದೆ. ಬೇರೆ ಧರ್ಮವನ್ನ ಪ್ರತಿಪಾದಿಸುವ ಯಾರನ್ನೂ ಪರಿಶಿಷ್ಟ ಜಾತಿ ಎಂದು ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಪೀಠ ತಿಳಿಸಿದೆ.

ಹಿಂದೂ ಧರ್ಮ, ಸಿಖ್ ಅಥವಾ ಬೌದ್ಧ ಧರ್ಮವನ್ನ ಪ್ರತಿಪಾದಿಸುವ ಪರಿಶಿಷ್ಟ ಜಾತಿ (ಎಸ್‌ಸಿ) ವ್ಯಕ್ತಿ ಬೇರೆ ಧರ್ಮಕ್ಕೆ ಮತಾಂತರಗೊಂಡರೆ ಅವರ ಪರಿಶಿಷ್ಟ ಜಾತಿ ಸ್ಥಾನಮಾನ ತಕ್ಷಣವೇ ಮತ್ತು ಸಂಪೂರ್ಣವಾಗಿ ರದ್ದುಗೊಳ್ಳಲಿದೆ. 1950ರ ಸಂವಿಧಾನ (ಪರಿಶಿಷ್ಟ ಜಾತಿಗಳು) ಆದೇಶ ಇದನ್ನ ಸ್ಪಷ್ಟಪಡಿಸಿದೆ. ಈ ಆದೇಶದ



ಅಡಿಯಲ್ಲಿ ಅನ್ಯಧರ್ಮಕ್ಕೆ ಮತಾಂತರ ಆದರೆ ಮೀಸಲಾತಿ ನಿಷೇಧ ಸಂಪೂರ್ಣವಾಗಿ ಜಾರಿಯಲ್ಲಿದೆ. 1950ರ ಆದೇಶದ ಷರತ್ತು 3ರಲ್ಲಿ ನಿರ್ದಿಷ್ಟಪಡಿಸಿದ ಧರ್ಮಗಳನ್ನು ಹೊರತುಪಡಿಸಿ ಯಾವುದೇ ಧರ್ಮವನ್ನ ಅಳವಡಿಸಿಕೊಳ್ಳುವುದರಿಂದ ಜನ್ಮ ಸ್ಥಾನಮಾನವನ್ನ ಲೆಕ್ಕಿಸದೆ, ಪರಿಶಿಷ್ಟ ಜಾತಿ ಸ್ಥಾನಮಾನವನ್ನ ತಕ್ಷಣವೇ ಆತ ಕಳೆದುಕೊಳ್ಳುತ್ತಾನೆ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

### ಸಾಂವಿಧಾನಿಕ ಸ್ಥಾನವೇನು?

ಸಂವಿಧಾನ (ಪರಿಶಿಷ್ಟ ಜಾತಿಗಳು) ಆದೇಶ, 1950 ಭಾರತದ ರಾಷ್ಟ್ರಪತಿಗಳು ಸಂವಿಧಾನದ 341(1) ನೇ ವಿಧಿಯಡಿ ಹೊರಡಿಸಿದ ಪ್ರಮುಖ ಆದೇಶವಾಗಿದೆ. ಇದು ಹಿಂದೂ, ಸಿಖ್ ಅಥವಾ ಬೌದ್ಧ ಧರ್ಮಕ್ಕೆ ಸೇರಿದ ಸಮುದಾಯಗಳನ್ನು ಪುಟ 2ಕ್ಕೆ

### ಸುಪ್ರೀಂ ತೀರ್ಪಿನ ಹಿನ್ನೆಲೆ

ಅಕ್ಕಲ ರಾಮಿರೆಡ್ಡಿ ಮತ್ತು ಇತರರು ತಮಗೆ ಜಾತಿ ನಿಂದನೆ ಮಾಡಿದ್ದಾರೆಂದು ಆರೋಪಿಸಿ ಪಾದ್ರಿ ಆನಂದ್ ಅವರು ಎಸ್‌ಸಿ/ ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯಡಿ ದೂರು ದಾಖಲಿಸಿದ್ದರು. ಪ್ರಕರಣ ಸಂಬಂಧ ಆರೋಪಿಗಳ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಪ್ರಕರಣವನ್ನ ರದ್ದುಗೊಳಿಸುವಂತೆ ಕೋರಿ ರಾಮಿರೆಡ್ಡಿ ಆಂಧ್ರಪ್ರದೇಶ ಹೈಕೋರ್ಟ್ ಮೆಟ್ಟಿಲೇರಿದ್ದರು.ಆನಂದ್ ಅವರು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡ ನಂತರ ತಮ್ಮ ಎಸ್‌ಸಿ ಸ್ಥಾನಮಾನ ಕಳೆದುಕೊಂಡಿದ್ದಾರೆ. ಆದ್ದರಿಂದ ಅವರು ಎಸ್‌ಸಿ/ ಎಸ್‌ಟಿ ಕಾಯ್ದೆಯಡಿ ರಕ್ಷಣೆ ಪಡೆಯಲು ಸಾಧ್ಯವಿಲ್ಲ ಎಂಬ ಆಧಾರದ ಮೇಲೆ ಹೈಕೋರ್ಟ್ ನ್ಯಾಯಮೂರ್ತಿ ಎನ್. ಹರಿನಾಥ್ ಎಫ್‌ಐಆರ್ ಅನ್ನು ರದ್ದುಗೊಳಿಸಿದ್ದರು. ಇದರ ವಿರುದ್ಧ ಆನಂದ್ ಅವರು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಸುಪ್ರೀಂ ಕೋರ್ಟ್ ಆಂಧ್ರ ಹೈಕೋರ್ಟ್ನ ತೀರ್ಪನ್ನು ಎತ್ತಿಹಿಡಿದಿದೆ.

# ಏ.1ರಿಂದ ಅರಣ್ಯ ಸಿಬ್ಬಂದಿ ಮುಷ್ಕರ

## ನೇರ ವೇತನ ಪಾವತಿಗೆ ಹಂಗಾಮಿ ನೌಕರರ ಆಗ್ರಹ

**ಬೆಂಗಳೂರು:** ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಏಪ್ರಿಲ್ 1ರಿಂದ ವನ್ಯಜೀವಿ ವಿಭಾಗದ ಹಂಗಾಮಿ ನೌಕರರು ಮುಷ್ಕರ ನಡೆಸಲು ನಿರ್ಧರಿಸಿದ್ದಾರೆ.

ದಿನಗೂಲಿ ಹೊರಗುತ್ತಿಗೆ ನೌಕರರ ಸಂಘದ ಉಪಾಧ್ಯಕ್ಷ ಎಸ್.ಎಸ್.ಹರೀಶ್ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಹೊರಗುತ್ತಿಗೆ ರದ್ದುಪಡಿಸಿ ಅರಣ್ಯ ಇಲಾಖೆಯಿಂದಲೇ ವೇತನ ಪಾವತಿಸುವುದೂ ಸೇರಿದಂತೆ ತಮ್ಮ ಬೇಡಿಕೆ ಈಡೇರಿಸುವರೆಗೆ ಮುಷ್ಕರ ನಡೆಯಲಿದೆ. ರಾಜ್ಯದಲ್ಲಿ ಸುಮಾರು 6,000 ತಾತ್ಕಾಲಿಕ ಸಿಬ್ಬಂದಿ ಇದ್ದಾರೆ. ಇವರಲ್ಲಿ 4,000ಕ್ಕೂ ಹೆಚ್ಚು ಮಂದಿ ಮುಷ್ಕರದಲ್ಲಿ ಭಾಗವಹಿಸಲು ಸಮ್ಮತಿಸಿದ್ದಾರೆ. ವಾಚರ್‌ಗಳು, ಗಾರ್ಡ್‌ಗಳು, ಡ್ರೈವರ್‌ಗಳು ಸೇರಿದಂತೆ ಅರಣ್ಯದ ಸಿಬ್ಬಂದಿ ಮುಷ್ಕರದಲ್ಲಿ ಪಾಲ್ಗೊಳ್ಳಲಿದ್ದಾರೆಂದು ತಿಳಿಸಿದರು.

ಮಂಗಳವಾರ ನಡೆಯಬೇಕಿದ್ದ ವಿಡಿಯೋ ಕಾನ್ಫರೆನ್ಸ್‌ಲ್ಲೂ ಭಾಗವಹಿಸಲು ಸಿಬ್ಬಂದಿ ನಿರಾಕರಿಸಿದ್ದು, ನಮ್ಮ ಸಮಸ್ಯೆಗಳನ್ನು ಪರಿ



ಹರಿಸಲು ಅಧಿಕಾರಿಗಳು ನೇರವಾಗಿ ಸಭೆ ನಡೆಸಬೇಕು. ಕೇವಲ ಆನ್‌ಲೈನ್ ಚರ್ಚೆ ಯಿಂದ ಸಮಸ್ಯೆ ಬಗೆಹರಿಯುವುದಿಲ್ಲ ಎಂದು ಹೇಳಿದರು.

ಈ ಮುಷ್ಕರದಿಂದ ಅರಣ್ಯ ಪ್ರದೇಶಗಳಲ್ಲಿ ಗಸ್ತು ತಿರುಗುವಿಕೆ ಮತ್ತು ದಿನ ನಿತ್ಯದ ಕಾರ್ಯಗಳಿಗೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ವಿಶೇಷವಾಗಿ ಬೇಸಿಗೆ ವೇಳೆ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಗಳಿರುವ ಹಿನ್ನೆಲೆಯಲ್ಲಿ ಬೆಂಕಿ ತಡೆ ಹಾಗೂ ನಿಯಂತ್ರಣ ಕಾರ್ಯಗಳಿಗೆ ಹೆಚ್ಚಿನ ಸಿಬ್ಬಂದಿ ಅಗತ್ಯವಿದೆ. ಜೊತೆಗೆ ಮಾನವ–ಪ್ರಾಣಿ ಸಂಘರ್ಷ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆ, ಪರಿಸ್ಥಿತಿ ಮತ್ತಷ್ಟು ಸಂಕೀರ್ಣವಾಗುವ ಭೀತಿ ಇದೆ.

### ಸಿಬ್ಬಂದಿ ಬೇಡಿಕೆಗಳೇನು?

ಸಿಬ್ಬಂದಿಯ ಪ್ರಮುಖ ಬೇಡಿಕೆಗಳಲ್ಲಿ ವೇತನವನ್ನು ಮಧ್ಯವರ್ತಿಗಳ ಮೂಲಕ ನೀಡುವುದನ್ನು ನಿಲ್ಲಿಸಿ ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು ಎಂಬುದು ಪ್ರಮುಖವಾಗಿದೆ. ಮಧ್ಯವರ್ತಿಗಳ ಮೂಲಕ ವೇತನ ನೀಡುವ ವ್ಯವಸ್ಥೆಯಿಂದ ಒಂದು ತಿಂಗಳವರೆಗೂ ವಿಳಂಬವಾಗುತ್ತಿರುವುದಾಗಿ ಆರೋಪಿಸಿದ್ದಾರೆ.


ಅರಣ್ಯ ಇಲಾಖೆಯಲ್ಲಿ 10 ವರ್ಷ ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ತಾತ್ಕಾಲಿಕ ಸಿಬ್ಬಂದಿಗೆ ಶಾಶ್ವತ ನೌಕರರ ಸಮಾನ ಸೌಲಭ್ಯಗಳು ಮತ್ತು ಪರಿಹಾರ ಹಣ ನೀಡಬೇಕೆಂದೂ ಬೇಡಿಕೆ ಇಟ್ಟಿದ್ದಾರೆ. 2017ರವರೆಗೆ ನೇರವಾಗಿ ವೇತನ ಜಮಾ ಮಾಡಲಾಗುತ್ತಿತ್ತು. ಆದರೆ, ಬಳಿಕ ಈ ವ್ಯವಸ್ಥೆ ಬದಲಾಗಿದ್ದು, ಇದನ್ನು ಮತ್ತೆ ಪುಟ 2ಕ್ಕೆ

# ಮಕ್ಕಳಲ್ಲಿ ಮೊಬೈಲ್ ಗೀಳು ತಡೆಗೆ ಕರಡು ನೀತಿ ಪ್ರಕಟ

**ಬೆಂಗಳೂರು:** ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವ ಡಿಜಿಟಲ್ ಗೀಳನ್ನು ನಿಯಂತ್ರಿಸಲು ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಜವಾಬ್ದಾರಿಯುತ ಡಿಜಿಟಲ್ ಬಳಕೆಗೆ ಸಂಬಂಧಿಸಿದ ಕರಡು ನೀತಿಯನ್ನು ಬಿಡುಗಡೆ ಮಾಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಘೋಷಣೆ ನಂತರ ಈ ಕರಡು ನೀತಿ ರೂಪುಗೊಂಡಿದೆ. 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಗೆ ನಿರ್ಬಂಧ ವಿಧಿಸುವ ದಿಕ್ಕಿನಲ್ಲಿ ಸರ್ಕಾರ ನಿರ್ಧಾರ ಕೈಗೊಳ್ಳಲು ಮುಂದಾಗಿದೆ.

ಈ ಕರಡು ನೀತಿ ಪ್ರಕಾರ, ಶಾಲಾ ಕೆಲಸ ಹೊರತುಪಡಿಸಿ ವಿದ್ಯಾರ್ಥಿಗಳು ದಿನಕ್ಕೆ ಗರಿಷ್ಠ 1 ಗಂಟೆ ಮಾತ್ರ ಮೊಬೈಲ್ ಬಳಸಬಹುದು ಎಂದು ಶಿಫಾರಸು ಮಾಡಲಾಗಿದೆ. ಜೊತೆಗೆ, ನಿದ್ರೆಗೆ 1 ಗಂಟೆ ಮೊದಲು ಎಲ್ಲಾ ಡಿಜಿಟಲ್ ಸಾಧನಗಳನ್ನು ನಿಲ್ಲಿಸುವ ಟೆಕ್ ಕರ್ಫ್ಯೂ ಜಾರಿಗೊಳಿಸುವಂತೆ ಸೂಚಿಸಲಾಗಿದೆ.



ಪ್ರತಿ ಶಾಲೆ ತನ್ನದೇ ಆದ ಡಿಜಿಟಲ್ ಬಳಕೆ ನೀತಿ ರೂಪಿಸಿ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು ಮತ್ತು ಡಿಜಿಟಲ್ ವೆಲ್ನೆಸ್ ಸಮಿತಿ ಸ್ಥಾಪಿಸಬೇಕು. ಈ ಸಮಿತಿಯಲ್ಲಿ ಪ್ರಾಂಶುಪಾಲರು, ಶಿಕ್ಷಕರು, ಮಾನಸಿಕ ಆರೋಗ್ಯ ತಜ್ಞರು, ಪೋಷಕರ ಪ್ರತಿನಿಧಿಗಳು, ವಿದ್ಯಾರ್ಥಿಗಳು ಮತ್ತು ಸೈಬರ್ ಕ್ರೈಂ ಪೊಲೀಸ್ ಅಧಿಕಾರಿಗಳು ಇರಬೇಕಾಗಿದೆ. ನೀತಿಯನ್ನು ರೂಪಿಸುವಲ್ಲಿ ಆರೋಗ್ಯ ಪುಟ 2ಕ್ಕೆ

# ಚಿನ್ನದ ಬೆಲೆ ಭಾರೀ ಇಳಿಕೆ

**ಬೆಂಗಳೂರು:** ಕೊಲ್ಲಿ ರಾಷ್ಟ್ರಗಳ ಯುದ್ಧದ ಬಿಸಿ ನಡುವೆಯೂ ಬಂಗಾರ ಪ್ರಿಯರಿಗೆ ಗುಡ್‌ನ್ಯೂಸ್ ಸಿಕ್ಕಿದೆ. ಸತತ ಏರುಗತಿಯಲ್ಲಿ ಸಾಗುತ್ತಿದ್ದ ಚಿನ್ನದ ಬೆಲೆ ಈಗ ಕುಸಿತದತ್ತ ಸಾಗಿದೆ. ಹೀಗೆ ಸಾಗಿದರೆ 10 ಗ್ರಾಂಗೆ 1 ಲಕ್ಷ ರೂ. ಸನಿಹಕ್ಕೆ ಬರುವಹಾಗಿದೆ.

ಯುದ್ಧದ ಪರಿಣಾಮದಿಂದ 24 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂ ಗೆ 30 ಸಾವಿರ ರೂ. ವರೆಗೆ ಇಳಿಕೆ ಕಂಡಿದೆ. 22 ಕ್ಯಾರೆಟ್ ಚಿನ್ನವೂ 25 ಸಾವಿರದಷ್ಟು ಇಳಿಕೆಯಾಗಿದೆ.

**ಚಿನ್ನದ ದರ ಇಂದು ಎಷ್ಟು**

- 24 ಕ್ಯಾರೆಟ್ ಚಿನ್ನದ ದರ 1,40,0350 ರೂ.
- 22 ಕ್ಯಾರೆಟ್ ಚಿನ್ನದ ದರ 1,28,650 ರೂ
- 22 ಕ್ಯಾರೆಟ್ ಚಿನ್ನ 10 ಗ್ರಾಂಗೆ 12,700 ರೂ ಇಳಿಕೆ
- 24 ಕ್ಯಾರೆಟ್ 10 ಗ್ರಾಂಗೆ 2,940 ರೂ. ಇಳಿಕೆ



# ಇಂಗ್ಲಿಷ್ ಮಾಧ್ಯಮ: ಶಾಸಕರ ವಾಗ್ವಾದ

## ಇಂಗ್ಲಿಷ್ ಪರ ಶಿವಲಿಂಗೇಗೌಡ, ವಿರೋಧಿಸಿ ರಾಯರೆಡ್ಡಿ ವಾಕ್ಸಮರ

**ಬೆಂಗಳೂರು:** ರಾಜ್ಯದ ಎಲ್ಲಾ ಶಾಲೆಗಳಲ್ಲಿ ಲಾಂಗ್ವೇಜ್ ಲ್ಯಾಬ್ ತೆರೆಯಿರಿ. ಕನ್ನಡದ ಜೊತೆಗೆ ಎಲ್ಲ ಭಾಷೆಗಳನ್ನ ಕಲಿಯುವಂತೆ ಆಗಬೇಕು. ಲಾಂಗ್ವೇಜ್ ಲ್ಯಾಬ್ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸಿ ಎಂದು ಸ್ಪೀಕರ್ ಖಾದರ್ ಸರ್ಕಾರಕ್ಕೆ ಸಲಹೆ ನೀಡಿದರು.

ವಿಧಾನಸಭೆಯಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಶಿಕ್ಷಕರ ವರ್ಗಾವಣೆ ನಿಯಂತ್ರಣ ವಿಧೇಯಕ ಅಂಗೀಕಾರ ಚರ್ಚೆ ವೇಳೆ ಭಾಷೆ ಬಗ್ಗೆ ವಾಗ್ವಾದ ನಡೆಯಿತು. ಬಿಲ್ ಚರ್ಚೆ ವೇಳೆ ಸರ್ಕಾರದ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಲ್ಲಿ ಇಂಗ್ಲೀಷ್ ಮಾಧ್ಯಮ ಬೇಕು ಎಂದು ವಿಧಾನಸಭೆಯಲ್ಲಿ ಶಾಸಕ ಶಿವಲಿಂಗೇಗೌಡ ಒತ್ತಾಯಿಸಿದರು. ನಮ್ಮ ಮಕ್ಕಳು ಇಂಗ್ಲೀಷ್ ಕಲಿಯಬೇಕು. ಅವರು ಅಮೆರಿಕಗೆ ಹೋಗಬೇಕು. ನಮ್ಮ ಮಕ್ಕಳು ಇಲ್ಲಿಯೇ ಇರಬೇಕಾ? ಅವರು ದೇಶ ಸುತ್ತಿ ಬರಲಿ. ಇಂಗ್ಲಿಷ್ ಬೇಕೇಬೇಕು. ಸರ್ಕಾರಿ ಶಾಲೆ ಮಕ್ಕಳು ಸಹ ಇಂಗ್ಲಿಷ್ ಓದಬೇಕು ಎಂದು ಶಿವಲಿಂಗೇಗೌಡ ಒತ್ತಾಯಿಸಿದರು.

ಆಗ ಶಾಸಕ ಬಸವರಾಜ ರಾಯರೆಡ್ಡಿ ಆಕ್ಷೇಪ ವ್ಯಕ್ತಪಡಿಸಿದರು. ಇಂಗ್ಲೀಷ್ ಬರೋರು ಮಾತ್ರ ಮೇಧಾವಿ ಅಲ್ಲ. ನಾವೆಲ್ಲಾ ಪಿಯುಸಿ ತನಕ ಕನ್ನಡ ಓದಿದ್ದೇವೆ ಎಂದರು. ಆಗ ಶಿವಲಿಂ



ಗೇಗೌಡ ಕಿಡಿಕಾರಿದರು. ಇಬ್ಬರ ನಡುವೆ ವಾಕ್ಸಮರ ನಡೆಯಿತು. ಹಳ್ಳಿ ಮಕ್ಕಳು ಆರ್ಥಿಕ ಶಕ್ತಿ ಇಲ್ಲದ ಮಕ್ಕಳು, ಇಂಗ್ಲಿಷ್ ಓದಬೇಕು. ಪ್ರಪಂಚ ವೈಜ್ಞಾನಿಕವಾಗಿ ಬೆಳೆದಿದೆ ಅಂತಾ ತಿರುಗೇಟು ನೀಡಿದರು. ಇದೇ ವೇಳೆ ಸ್ಪೀಕರ್ ಮಧ್ಯಪ್ರವೇಶ ಮಾಡಿ ರಾಯರೆಡ್ಡಿ ನಿಮ್ಮ ಮಕ್ಕಳು ಎಲ್ಲಿ ಓದಿದ್ದು? ನೀವು ಇಂಗ್ಲೀಷ್ ಮಾತಾಡಲ್ವಾ ಎಂದು ಟಾಂಗ್ ಕೊಟ್ಟರು.

ಇನ್ನು ಇದೇ ವೇಳೆ ಆಡಳಿತ ಪಕ್ಷದ ಇಬ್ಬರು ಸದಸ್ಯರ ಮಾತಿನ ಚಕಮಕಿಗೆ ಬಿಜೆಪಿ ಸದಸ್ಯರು ಪುಟ 2ಕ್ಕೆ

### ಕೈ ವಿರುದ್ಧ ಬಂಡಾಯ: 23 ಮುಸ್ಲಿಂ ಮುಖಂಡರ ನಾಮಪತ್ರ

**ದಾವಣಗೆರೆ:** ಸಮರ್ಥ್ ಶಾಮನೂರು ಅವರಿಗೆ ಟಿಕೆಟ್ ನೀಡಿದ್ದಕ್ಕೆ ಕಾಂಗ್ರೆಸ್ ವಿರುದ್ಧ ಅಲ್ಪಸಂಖ್ಯಾತ ನಾಯಕರು ಸಮರ ಸಾರಿದ್ದಾರೆ. 23 ಮಂದಿ ಮುಸ್ಲಿಂ ನಾಯಕರು ನಾಮಪತ್ರ ಸಲ್ಲಿಕೆ ಮಾಡುವ ಮೂಲಕ ಬಂಡಾಯದ ಬಿಸಿ ಮುಟ್ಟಿಸಿದ್ದಾರೆ.

ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾದ ದಾವಣಗೆರೆ ದಕ್ಷಿಣ ಕ್ಷೇತ್ರದ ಟಿಕೆಟ್ ನಮಗೆ ನಮ್ಮ ಸಮುದಾಯ ನಾಯಕರಿಗೆ ನೀಡಬೇಕೆಂದು ಮುಸ್ಲಿಂ ನಾಯಕರು ಪಟ್ಟು ಹಿಡಿದಿದ್ದರು. ಆದರೆ ಕಾಂಗ್ರೆಸ್ ಹೈಕಮಾಂಡ್ ಮುಸ್ಲಿಮರ ಬೇಡಿಕೆಗೆ ಸ್ಪಂದಿಸದೇ ಎಸ್‌ಎಸ್ ಮಲ್ಲಿಕಾರ್ಜುನ್ ಪುತ್ರ ಸಮರ್ಥ್‌ಗೆ ಟಿಕೆಟ್ ನೀಡಿತ್ತು. ಇದನ್ನು ವಿರೋಧಿಸಿ ಕಾಂಗ್ರೆಸ್‌ಗೆ ಬಿಸಿ ಮುಟ್ಟಿಸಲು ಮುಸ್ಲಿಂ ಮುಖಂಡರು ಮುಂದಾಗಿದ್ದಾರೆ.

# ರಾಜ್ಯದ ಜಿಪಂ, ತಾಪಂಗಳು ಕೇಂದ್ರ ಅನುದಾನಕ್ಕೆ ಅನರ್ಹ

**ನವದೆಹಲಿ:** ಕರ್ನಾಟಕದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳು 15ನೇ ಹಣಕಾಸು ಆಯೋಗದ 2025–26ನೇ ಸಾಲಿನ ಅನುದಾನ ಪಡೆ ಯಲು ಅನರ್ಹವಾಗಿವೆ ಎಂದು ಕೇಂದ್ರ ಪಂಚಾ ಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ತಿಳಿಸಿದರು.

ಲೋಕಸಭೆಯಲ್ಲಿ ಮಂಗಳವಾರ ಪ್ರಶ್ನೋತ್ತರ ಅವಧಿಯಲ್ಲಿ ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಪ್ರಶ್ನೆಗೆ ಲಿಖಿತ ಉತ್ತರ



ನೀಡಿದ ಅವರು, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ 2021ರ ಫೆಬ್ರುವರಿಯಿಂದ ಚುನಾವಣೆ ನಡೆಸದಿರುವುದೇ ಇದಕ್ಕೆ ಕಾರಣ ಎಂದು ಹೇಳಿದರು.

2020–21ರಿಂದ 2024–25ರ ವರೆಗಿನ ಹಣಕಾಸು ಆಯೋಗದ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಅನುದಾನದ ಎಲ್ಲ ಕಂತುಗಳನ್ನು ರಾಜ್ಯದ ಅರ್ಹ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾಗಿದೆ. ಆದರೆ, 2025–26ನೇ ಸಾಲಿನ ಪುಟ 2ಕ್ಕೆ



### ರಂಗೋಲಿಯಲ್ಲಿ ಅರಳಿದ ಸಂಸದ ಯದುವೀರ್

**ಮೈಸೂರು:** ಅರಮನೆ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗದ ಆವರಣದಲ್ಲಿ ಕಲಾವಿದರೊಬ್ಬರು ಬೃಹತ್ ರಂಗೋಲಿಯಲ್ಲಿ ಸಂಸದ ಯದುವೀರ್ ಒಡೆಯರ್ ಅವರ ಭಾವಚಿತ್ರವನ್ನು ಬಿಡಿಸುವ ಮೂಲಕ ಅವರಿಗೆ ವಿಶೇಷವಾಗಿ ಹುಟ್ಟುಹಬ್ಬದ ಶುಭಾಶಯ ಕೋರಿ ಗಮನ ಸೆಳೆದರು

# ಎಲ್ಲ ಮೂಲಗಳಿಂದ ಇಂಧನ ಖರೀದಿಗೆ ಪ್ರಯತ್ನ: ಮೋದಿ

**ನವದೆಹಲಿ:** ಪಶ್ಚಿಮ ಏಷ್ಯಾ ಯುದ್ಧವು ಜಾಗತಿಕವಾಗಿ ಗಂಭೀರ ಇಂಧನ ಬಿಕ್ಕಟ್ಟು ಸೃಷ್ಟಿಸಿರುವುದರಿಂದ ಕೇಂದ್ರ ಸರ್ಕಾರ ಸಾಧ್ಯವಿರುವ ಎಲ್ಲ ಮೂಲಗಳಿಂದ ಇಂಧನ ಖರೀದಿಸಲು ಯತ್ನಿಸುತ್ತಿದೆ. ಮುಂದಿನ ದಿನಗಳಲ್ಲೂ ಪ್ರಯತ್ನ ಮುಂದುವರಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ರಾಜ್ಯಸಭೆಯಲ್ಲಿ ಮಂಗಳವಾರ ಹೇಳಿಕೆ ನೀಡಿದ ಪ್ರಧಾನಿ ಮೋದಿ, ಪಶ್ಚಿಮ ಏಷ್ಯಾದಲ್ಲಿನ ಯುದ್ಧವು ಅತ್ಯಂತ ಕಳವಳಕಾರಿಯಾಗಿದೆ. ರಾಜತಾಂತ್ರಿಕ ಮಾತುಕತೆಯ ಮೂಲಕ ಈ ಪ್ರದೇಶದಲ್ಲಿ ಶಾಂತಿ ನೆಲೆಸಲು ಸಾಧ್ಯ ಎಂದು ಅವರು ಹೇಳಿದರು.

ಯುದ್ಧದ ತೀವ್ರತೆಯನ್ನು ಕಡಿಮೆ ಮಾಡುವುದು ಮತ್ತು ಹಾರ್ಮುಜ್ ಜಲಸಂಧಿ ಸಂಚಾರಕ್ಕೆ ಮುಕ್ತವಾಗಿಸುವುದು ದೇಶದ ಗುರಿಯಾಗಿದೆ. ಬಿಕ್ಕಟ್ಟನ್ನು ಶಾಂತಿಯುತವಾಗಿ ಪರಿಹರಿಸುವ ಯತ್ನವನ್ನು ಪ್ರೋತ್ಸಾಹಿಸಲಾಗುವುದು. ಪಶ್ಚಿಮ ಏಷ್ಯಾ ಬಿಕ್ಕಟ್ಟು ದೀರ್ಘಕಾಲದವರೆಗೆ ಮುಂದುವರಿದರೆ ಗಂಭೀರ ಪರಿಣಾಮಗಳನ್ನು



ಎದುರಿಸಬೇಕಾಗುತ್ತದೆ. ಲಭ್ಯವಿರುವ ಎಲ್ಲ ಮೂಲಗಳಿಂದ ಅನಿಲ ಮತ್ತು ಕಚ್ಚಾ ತೈಲ ಖರೀಸಲು ಯತ್ನಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಇಂಧನ ಭದ್ರತೆಗಾಗಿ ಭಾರತದ ಪ್ರಯತ್ನಗಳ ಕುರಿತು ಮಾತನಾಡಿದ ಪ್ರಧಾನಿ ಮೋದಿ, ಕಾರ್ಯತಂತ್ರದ ಯೋಜನೆ ಭಾಗವಾಗಿ ಕಳೆದ 11 ವರ್ಷಗಳಲ್ಲಿ 53 ಲಕ್ಷ ಮೆಟ್ರಿಕ್ ಟನ್ ತೈಲ ನಿಕ್ಷೇಪವನ್ನು ರಚಿಸಲಾಗಿದೆ. ಇದನ್ನು 65 ಲಕ್ಷ ಮೆಟ್ರಿಕ್ ಟನ್‌ಗೆ ಪುಟ 2ಕ್ಕೆ

# ಡಾ.ಸಮೀಕ್ಷಾ ಸಾವಿಗೆ ನ್ಯಾಯ: ಸಚಿವ ಈಶ್ವರ್ ಖಂಡ್ರೆ ಭರವಸೆ

**ಬೆಂಗಳೂರು:** ಶಿವಮೊಗ್ಗದ ತ್ಯಾವರೆಕೊಪ್ಪ ಮೃಗಾಲಯದಲ್ಲಿ ನೀರಾನೆ ದಾಳಿಯಿಂದ ಮೃತಪಟ್ಟ ಯುವ ಪಶುವೈದ್ಯೆ ಡಾ.ಸಮೀಕ್ಷಾ ರೆಡ್ಡಿ ಸಾವಿಗೆ ನ್ಯಾಯ ದೊರಕಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಕುಟುಂಬದವರಿಗೆ ಭರವಸೆ ನೀಡಿದರು.

ಆನೇಕಲ್ ಸಮೀಪದ ಸಹಲವಾರದಲ್ಲಿರುವ ಡಾ.ಸಮೀಕ್ಷಾ ರೆಡ್ಡಿ ನಿವಾಸಕ್ಕೆ ತೆರಳಿದ್ದ ಸಚಿವರು ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಇದು ಅತ್ಯಂತ ನೋವಿನ ಸಂಗತಿ. ಸರ್ಕಾರ ಈ ನೋವಿನ ಸಂದರ್ಭದಲ್ಲಿ ಕುಟುಂಬದೊಂದಿಗೆ ನಿಲ್ಲುತ್ತದೆ. ವನ್ಯಜೀವಿ ಚಿಕಿತ್ಸೆ ವೇಳೆ ಹುತಾತ್ಮರಾದ ಯುವ ವೈದ್ಯೆಯ ಹೆಸರಲ್ಲಿ ಸ್ಮಾರಕ ನಿರ್ಮಿಸಬೇಕು ಎಂಬ ಅವರ ತಂದೆ ಧ್ರುವಕುಮಾರ್ ಮತ್ತು ತಾಯಿ ಶೈಲಜಾ ರೆಡ್ಡಿ ಅವರ ಬೇಡಿಕೆಯನ್ನು ಪರಿಶೀಲಿಸುವುದಾಗಿ ತಿಳಿಸಿದರು.



ಮೃಗಾಲಯದಲ್ಲಿ ವನ್ಯಜೀವಿಗಳಿಗೆ ಪಶುವೈದ್ಯರು ಚಿಕಿತ್ಸೆ ನೀಡುವುದಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದಲ್ಲಿ ಯಾವುದೇ ಲಿಖಿತ ಪ್ರಮಾಣಿತ ಮಾನದಂಡ ಇಲ್ಲ. ಈ ನಿಟ್ಟಿನಲ್ಲಿ ಮಹಿಳಾ ಪಶುವೈದ್ಯರಿಗೆ ಹಾಗೂ ವೈದ್ಯರಿಗೆ ಸುರಕ್ಷತೆ ಕಲ್ಪಿಸುವುದೂ ಸೇರಿದಂತೆ ಕೂಡಲೇ ಸೂಕ್ತ ಎಸ್.ಓ.ಪಿ. ರೂಪಿಸುವಂತೆ ಹಾಗೂ ಕಟ್ಟುನಿಟ್ಟಾಗಿ ಪಾಲನೆ ಮಾಡುವಂತೆ ಸೂಚನೆ ನೀಡಿರುವುದಾಗಿ ತಿಳಿಸಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಪುಟ 2ಕ್ಕೆ

# ವಯನಾಡು ಸಂತ್ರಸ್ತರಿಗೆ ಮತ್ತೆ 10 ಕೋಟಿ: ಬಿಜೆಪಿ, ಜೆಡಿಎಸ್ ಕಿಡಿ

**ಬೆಂಗಳೂರು:** ವಯನಾಡು ಭೂಕುಸಿತ ಸಂತ್ರಸ್ತರಿಗೆ ರಾಜ್ಯ ಸರ್ಕಾರ ಕೇರಳ ವಿಧಾನಸಭಾ ಚುನಾವಣೆಯ ಈ ಸಂದರ್ಭದಲ್ಲಿಯೇ 10 ಕೋಟಿ ರೂ. ಹೆಚ್ಚುವರಿ ಅನುದಾನ ನೀಡಿರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ.

ನಮ್ಮ ರಾಜ್ಯದ ಅತಿಥಿ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ನೀರು ಗಂಟಿಗಳಿಗೆ ಸಂಬಳ ಕೊಡಲು ಯೋಗ್ಯತೆ ಇಲ್ಲದ ಲೂಟಿಕೋರ ಕಾಂಗ್ರೆಸ್ ಸರ್ಕಾರ, ವಯನಾಡು ಭೂಕುಸಿತ ಸಂತ್ರಸ್ತರಿಗೆ 10 ಕೋಟಿ ರೂಪಾಯಿ ಹೆಚ್ಚುವರಿ ಅನುದಾನ ನೀಡುವ ಮೂಲಕ ಕನ್ನಡಿಗರಿಗೆ ದ್ರೋಹ ಬಗೆದಿದೆ ಎಂದು ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ.




ಕುರ್ಚಿ ಉಳಿಸಿಕೊಳ್ಳಲು ಹರಸಾಹಸ ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಹೈಕಮಾಂಡ್ ಮೆಚ್ಚಿಸಲು ಕನ್ನಡಿಗರ ತೆರಿಗೆ ದುಡ್ಡನ್ನು, ಪ್ರಿಯಾಂಕ್ ಗಾಂಧಿ ಪ್ರತಿನಿಧಿಸುವ ವಯನಾಡು ಲೋಕಸಭಾ ಕ್ಷೇತ್ರಕ್ಕೆ ನೀಡುವ ಪುಟ 2ಕ್ಕೆ

# 6624 ಫಲಾನುಭವಿಗಳ ಕೈಬಿಡಿ

## ಗೃಹಲಕ್ಷ್ಮಿ ಯೋಜನೆ । ಗೃಹಜ್ಯೋತಿ ಯೋಜನೆಗೆ 378 ಕೋಟಿ ರೂ ವೆಚ್ಚ

ರಾಮನಗರ: ಗೃಹಲಕ್ಷ್ಮಿ ಯೋಜನೆಯಡಿ ಮೃತಪಟ್ಟಿರುವ 1777 ಫಲಾನುಭವಿಗಳ ಹೆಸರುಗಳನ್ನು ಯೋಜನೆಯಿಂದ ಕೈ ಬಿಡಲಾಗಿದೆ. ಮೃತ ಪಟ್ಟಿರುವ ಉಳಿದ 4847 ಫಲಾನುಭವಿಗಳ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಶೀಘ್ರ ಅಗತ್ಯ ಕ್ರಮ ವಹಿಸುವಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಕೆ.ರಾಜು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಭವನದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು 6624 ಫಲಾನುಭವಿಗಳು ಮೃತಪಟ್ಟಿದ್ದಾರೆ ಎಂದು ಅಂಕಿ–ಅಂಶಗಳು ಹೇಳುತ್ತಿವೆ. ಮೃತಪಟ್ಟಿರುವ ಉಳಿದ ಫಲಾನುಭವಿಗಳ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಿ ಎಂದು ಅವರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ದಿನೇಶ್ ಅವರಿಗೆ ಸೂಚಿಸಿದರು.

ಈ ವಿಚಾರದಲ್ಲಿ ಮಾತನಾಡಿದ ಉಪನಿರ್ದೇಶಕ ದಿನೇಶ್, ಯೋಜನೆಯಡಿ ನೋಂದಣಿಯಾಗಿ ಫಲಾನುಭವಿಯಾಗಿ ತದನಂತರ ವಯೋಸಹಜವಾಗಿ ಹಾಗು ಇತರ ಕಾರಣಗಳಿಂದ ಮೃತರಾಗಿದ್ದಾರೆ. ಈ ಪೈಕಿ ಚನ್ನಪಟ್ಟಣ ತಾಲ್ಲೂಕಿನಲ್ಲಿ 1,700 ಫಲಾನುಭವಿಗಳು ಮರಣ ಹೊಂದಿದ್ದು, ಅದರಲ್ಲಿ 425 ಫಲಾನುಭವಿಗಳನ್ನು ಕೈಬಿಡಲಾಗಿದೆ. 1,275 ಫಲಾನುಭವಿಗಳು ಬಾಕಿ ಉಳಿದಿದ್ದಾರೆ. ಕನಕಪುರ ತಾಲ್ಲೂಕಿನಲ್ಲಿ 1,660 ಫಲಾನುಭವಿಗಳು ಮರಣ ಹೊಂದಿದ್ದು, ಅದರಲ್ಲಿ 418 ಫಲಾನುಭವಿಗಳನ್ನು ಕೈಬಿಡಲಾಗಿದ್ದು, 1,242 ಫಲಾನುಭವಿಗಳು ಬಾಕಿ ಉಳಿದಿದ್ದಾರೆ. ಹಾರೋಹಳ್ಳಿ ತಾಲ್ಲೂಕಿನಲ್ಲಿ 398 ಫಲಾನುಭವಿಗಳು ಮರಣ ಹೊಂದಿದ್ದು, ಅದರಲ್ಲಿ 96 ಫಲಾನುಭವಿಗಳನ್ನು ಕೈಬಿಡಲಾಗಿದ್ದು, 302 ಫಲಾನುಭವಿಗಳು ಬಾಕಿ ಉಳಿದಿದ್ದಾರೆ. ಮಾಗಡಿ ತಾಲ್ಲೂಕಿನಲ್ಲಿ 1,375 ಫಲಾನುಭವಿಗಳು ಮರಣ ಹೊಂದಿದ್ದು, ಅದರಲ್ಲಿ 332 ಫಲಾನುಭವಿಗಳನ್ನು ಕೈಬಿಡಲಾಗಿದ್ದು, 1,043 ಫಲಾನುಭವಿಗಳು ಬಾಕಿ ಉಳಿದಿದ್ದಾರೆ. ರಾಮನಗರ ತಾಲ್ಲೂಕಿನಲ್ಲಿ 1,491 ಫಲಾನುಭವಿಗಳು ಮರಣ ಹೊಂದಿದ್ದು, ಅದರಲ್ಲಿ 506 ಫಲಾನುಭವಿಗಳನ್ನು ಕೈಬಿಡಲಾಗಿದ್ದು, 985 ಫಲಾನುಭವಿಗಳು ಬಾಕಿ ಉಳಿದಿದ್ದಾರೆ ಎಂದು ಸಭೆಗೆ ಮಾಹಿತಿ ಕೊಟ್ಟರು.




### ಬಸ್‌ಸೌಕರ್ಯ ಕಲ್ಪಿಸಲು ಅಧಿಕಾರಿಗಳಿಗೆ ಸೂಚನೆ

**ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಇದುವರೆಗೂ 11,05,61,882 ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ ಅವರ ಪ್ರಯಾಣ ದರದ ಮೊತ್ತ 324,99,17,043 ರೂಪಾಯಿಗಳಾಗಿವೆ. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಜಿಲ್ಲೆಯಲ್ಲಿ ಅವಶ್ಯವಿರುವ ಗ್ರಾಮಗಳಿಗೆ ಬಸ್ ಸೌಕರ್ಯ ಕಲ್ಪಿಸುವಂತೆ ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳಿಗೆ ಸೂಚಿಸಿದ ಅವರು ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನ ಮಾಡಲು ಜಿಲ್ಲೆಯ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಹಾಗೂ ಇಲಾಖೆಗಳು ಶ್ರಮಿಸಬೇಕು, ಯೋಜನೆಗೆ ಅರ್ಹರಿರುವ ಯಾವುದೇ ಫಲಾನುಭವಿಯು ಗ್ಯಾರಂಟಿ ಯೋಜನೆಯಿಂದ ಹೊರಗುಳಿಯಬಾರದು ಹಾಗೂ ಈ ಯೋಜನೆಯ ಯಶಸ್ಸಿಗೆ ಎಲ್ಲಾ ಅಧಿಕಾರಿಗಳು ಸಹಕರಿಸಬೇಕು ಎಂದವರು ಹೇಳಿದರು.**

ಜಿಲ್ಲೆಯಲ್ಲಿದ್ದಾರೆ 2.81 ಲಕ್ಷ ಫಲಾನುಭವಿಗಳು

ಜಿಲ್ಲೆಯ 2,94,399 ಅರ್ಹ ಫಲಾನುಭವಿಗಳ ಪೈಕಿ 2,81,726 (95.70%) ಫಲಾನುಭವಿಗಳು ನೋಂದಣಿಯಾಗಿದ್ದು, ಉಳಿದ 12,673 (4.30%) ಫಲಾನುಭವಿಗಳ ನೋಂದಣಿಗೆ ಬಾಕಿ ಇರುತ್ತದೆ. 27 ಕಂತುಗಳಲ್ಲಿ ಅಂದರೆ 2025ರ ಡಿಸೆಂಬರ್ ಮಾಹೆಯವರೆಗೆ 2,68,612 ಫಲಾನುಭವಿಗಳಿಗೆ 1427,16,26,000 ರೂ.ಗಳನ್ನು ಪಾವತಿಸಲಾಗಿದೆ. 2026ರ ಜನವರಿ ಮಾಹೆಯ 28ನೇ ಕಂತನ್ನು ಇನ್ನೆರಡು ದಿನಗಳಲ್ಲಿ ಪಾವತಿಸಲಾಗುವುದು ಎಂದರು.

### ಗೃಹ ಜ್ಯೋತಿಗೆ 378 ಕೋಟಿ ರೂ ವೆಚ್ಚ

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,33,452 ಮಂದಿ ನೋಂದಾಯಿಸಿಕೊಂಡಿದ್ದು, ಈ ಯೋಜನೆ ಪ್ರಾರಂಭವಾದಾಗಿನಿಂದ ಇದುವರೆಗೂ ಒಟ್ಟಾರೆ 378.46 ಕೋಟಿ ರೂಗಳನ್ನು ವೆಚ್ಚ ಮಾಡಲಾಗಿದೆ. ರೈತರ ಜಮೀನಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಾಗ ವಿಳಂಬ ತೋರದೆ ಬೆಸ್ಕಾಂ ಅಧಿಕಾರಿಗಳು ಉತ್ತಮ ಸೇವೆ ನೀಡಬೇಕೆಂದು ಸೂಚಿಸಿದರು.

ಸಭೆಯಲ್ಲಿ ಸಮಿತಿಯ ಉಪಾಧ್ಯಕ್ಷರಾದ ಮಹದೇಶ್, ಎಸ್.ಸಿ. ಶೇಖರ್, ಸಿದ್ದೇಗೌಡ, ಸದಸ್ಯರು ಹಾಗೂ ರಾಮನಗರ ತಾಲ್ಲೂಕು ಅಧ್ಯಕ್ಷರಾದ ರಾಜು ವಿ.ಎಚ್., ಮಾಗಡಿ ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಿವಣ್ಣ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯರಾದ ಶಿವಮಾದಯ್ಯ, ಎಂ. ಮಹದೇವ್, ಕಾಳಮ್ಮ, ವನಜಾ ಎಸ್.ಜಿ, ಶೋಭಾ ಸೇರಿದಂತೆ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಧನರಾಜ್ ಹಾಗೂ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಯುವನಿಧಿ: 3799 ಫಲಾನುಭವಿಗಳು

**ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ 2024ರ ಜನವರಿ ಮಾಹೆಯಿಂದ 2025ರ ಡಿಸೆಂಬರ್ ಮಾಹೆಯವರೆಗೆ ಒಟ್ಟು ಅರ್ಹ 3,799 ಡಿಪ್ಲೋಮಾ ಹಾಗೂ ಪದವೀಧರರ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ ಮೂಲಕ ಒಟ್ಟು 11,19,75,000 ರೂ.ಗಳನ್ನು ಪಾವತಿಸಲಾಗಿದೆ ಎಂದು ತಿಳಿಸಿದರು.**

### ಬಿಪಿಎಲ್ ನಿಂದ ಎಪಿಎಲ್‌ಗೆ ಪರಿವರ್ತನೆ

**ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಶಿಲ್ಪ ಮಾತನಾಡಿ, ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ 15,053 ಬಿಪಿಎಲ್ ಪಡಿತರ ಚೀಟಿಗಳ ಪೈಕಿ 12,216 ಪಡಿತರ ಚೀಟಿಗಳನ್ನು ಎಪಿಎಲ್ ಪಡಿತರ ಚೀಟಿಗಳನ್ನಾಗಿ ಪರಿವರ್ತನೆ ಮಾಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರು ಪಡಿತರ ಚೀಟಿಗಳನ್ನು ಪರಿವರ್ತಿಸುವ ಸಂದರ್ಭದಲ್ಲಿ ಅಧಿಕಾರಿಗಳು ಕೂಲಕುಂಷವಾಗಿ ಪರಿಶೀಲಿಸಬೇಕು ಅರ್ಹ ಫಲಾನುಭವಿಗಳು ಅನ್ನಭಾಗ್ಯ ಯೋಜನೆಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ವಹಿಸಬೇಕು ಎಂದು ನಿರ್ದೇಶಿಸಿದರು.**

## ನಾಳೆ ಬಜೆಟ್ ಅಧಿವೇಶನ ಮುಕ್ತಾಯ

ಬೆಂಗಳೂರು: ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಉಪಚುನಾವಣೆ ಹಿನ್ನೆಲೆಯಲ್ಲಿ ವಿಧಾನಸಭೆ ಬಜೆಟ್ ಅಧಿವೇಶನವನ್ನು ಒಂದು ದಿನ ಮೊದಲು ಮಾ. 26ರಂದು ಮುಕ್ತಾಯ ಗೊಳಿಸಲಾಗುತ್ತಿದೆ.

ವಿಧಾನಸಭೆ ಕಲಾಪ ಸಲಹಾ ಸಮಿತಿ ಸಭೆ ನಂತರ ಸ್ಪೀಕರ್ ಯು.ಟಿ ಖಾದರ್ ಮಂಗಳವಾರ ಸದನದಲ್ಲಿ ಈ ವಿಷಯ ಪ್ರಕಟಿಸಿದರು. ರಾಜ್ಯ ವಿಧಾನಮಂಡಲದ ಬಜೆಟ್ ಅಧಿವೇಶನ ಮಾರ್ಚ್ 27ರಂದು ಮುಕ್ತಾಯಗೊಳ್ಳಬೇಕಿತ್ತು. ಬಜೆಟ್ ಮೇಲಿನ ಚರ್ಚೆಗೆ ಮಾರ್ಚ್ 26ರಂದು ಸಿಎಂ ಉತ್ತರ ನೀಡುವರು. ನಂತರ ಧನವಿನಿಯೋಗ ವಿಧೇಯಕವನ್ನು ಚರ್ಚೆಗೆ ತೆಗೆದುಕೊಂಡು ಅಂಗೀಕರಿಸಲಾಗುವುದು ಎಂದು ಸ್ಪೀಕರ್ ತಿಳಿಸಿದರು.

## ಇರಾನ್ ಸಂಘರ್ಷದಲ್ಲಿ ಪಾಕಿಸ್ತಾನ ಮಧ್ಯಸ್ಥಿಕೆ?

ವಾಷಿಂಗ್ಟನ್: ಇರಾನ್ ಮತ್ತು ಅಮೆರಿಕ ನಡುವೆ ನಡೆಯುತ್ತಿರುವ ಯುದ್ಧ ಕೊನೆಗೊಳಿಸಲು ಪಾಕಿಸ್ತಾನ ಮಧ್ಯಸ್ಥಿಕೆ ವಹಿಸುತ್ತಾ ಎಂಬ ಪ್ರಶ್ನೆ ಎದ್ದಿದೆ. ಪಾಕಿಸ್ತಾನದ ಮೂಲಕ ಇರಾನ್ ಜೊತೆ ಮಾತುಕತೆ ನಡೆಸಲು ಅಮೆರಿಕ ಮುಂದಾಗಿದೆ. ಈ ವಾರದಲ್ಲೇ ಅಮೆರಿಕ ಮತ್ತು ಇರಾನ್ ಹಿರಿಯ ಅಧಿಕಾರಿಗಳ ಮಧ್ಯೆ ಪಾಕಿಸ್ತಾನದಲ್ಲಿ ಮಾತುಕತೆ ನಡೆಯಲಿದೆ ಎಂದು ಇಸ್ರೇಲ್ ಮೂಲ ಉಲ್ಲೇಖಿಸಿ ಮಾಧ್ಯಮ ಸುದ್ದಿ ಪ್ರಕಟಿಸಿದೆ.

ಮಾತುಕತೆಗಳು ಕಾರ್ಯರೂಪಕ್ಕೆ ಬಂದರೆ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅಮೆರಿಕದ ಪರವಾಗಿ ಹಾಜರಾಗುವ ಸಾಧ್ಯತೆಯಿದೆ. ಪಾಕಿಸ್ತಾನ, ಟರ್ಕಿ ಮತ್ತು ಈಜಿಪ್ಟ್ ಪಶ್ಚಿಮ ಏಷ್ಯಾ ಸಂಘರ್ಷವನ್ನು ಶಮನಗೊಳಿಸಲು ಎರಡೂ ಕಡೆಯವರನ್ನು ಮನವೊಲಿಸಿ ಮಾತುಕತೆ ನಡೆಸಲು ಸಕ್ರಿಯವಾಗಿ ಕೆಲಸ ಮಾಡುತ್ತಿವೆ. ಅಮೆರಿಕ ಮತ್ತು ಇರಾನ್ ನಡುವೆ ರಾಜತಾಂತ್ರಿಕ ಸಂಪರ್ಕ ಸಹ ನಡೆಯುತ್ತಿದೆ. ಅಮೆರಿಕದ ರಾಯಭಾರಿ ಸ್ಟೀವ್ ವಿಟ್ಕಾಫ್ ಮತ್ತು ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಅವರೊಂದಿಗೆ ಪ್ರತ್ಯೇಕ ಮಾತುಕತೆ ನಡೆಸಿದ್ದಾರೆ.

## ಮಿಲಿಟರಿ ವಿಮಾನ ಪತನ: 66 ಜನರು ಸಾವು

ಬೊಗೋಟಾ: 125 ಜನರನ್ನು ಹೊತ್ತೊಯ್ಯುತ್ತಿದ್ದ ಮಿಲಿಟರಿ ವಿಮಾನ ಟೇಕಾಫ್ ಆದ ಕೆಲ ಸಮಯದಲ್ಲಿ ಪತನಗೊಂಡು ಕನಿಷ್ಠ 66 ಜನರು ಸಾವನ್ನಪ್ಪಿದ ಘಟನೆ ಕೊಲಂಬಿಯಾದಲ್ಲಿ ನಡೆದಿದೆ. ಲಾಕ್‌ಹೀಡ್ ಮಾರ್ಟಿನ್ ನಿರ್ಮಿತ ಹರ್ಕ್ಯುಲಸ್ ಸಿ–130 ವಿಮಾನ ಪೆರುವಿನ ಗಡಿಯಲ್ಲಿರುವ ಪ್ವೋರ್ಟೊ ಲೆಗುಯಿಜಾಮೊದಿಂದ ಹಾರುತ್ತಿದ್ದಾಗ ಈ ಅಪಘಾತ ಸಂಭವಿಸಿದೆ ಎಂದು ಕೊಲಂಬಿಯಾ ರಕ್ಷಣಾ ಸಚಿವ ಪೆಡ್ರೊ ಸ್ಯಾಂಚೆಜ್ ತಿಳಿಸಿದ್ದಾರೆ.

ಮೊದಲ ಪುಟದಿಂದ

### ಕೇಂದ್ರ ಅನುದಾನಕ್ಕೆ ಅನರ್ಹ

ಎರಡು ಕಂತುಗಳನ್ನು ರಾಜ್ಯಕ್ಕೆ ಕೊಟ್ಟಿಲ್ಲ. ಕೇಂದ್ರ ಬಿಡುಗಡೆ ಮಾಡಿರುವ ಮೊತ್ತವನ್ನು ಸಕಾಲಕ್ಕೆ ಪಂಚಾಯಿತಿಗಳಿಗೆ ರಾಜ್ಯ ಸರ್ಕಾರ ವರ್ಗಾವಣೆ ಮಾಡಿರಲಿಲ್ಲ. ಜತೆಗೆ, ವಿಳಂಬದ ದಂಡವನ್ನೂ ಪಾವತಿಸಿರಲಿಲ್ಲ ಎಂದು ಅವರು ತಿಳಿಸಿದರು.

### ಸಾಂವಿಧಾನಿಕ ಸ್ಥಾನವೇನು?

ಪರಿಶಿಷ್ಟ ಜಾತಿಗಳೆಂದು ಗುರುತಿಸಿ, ಅವರಿಗೆ ಮೀಸಲಾತಿ ಹಾಗೂ ವಿಶೇಷ ಸೌಲಭ್ಯಗಳನ್ನು ಕಲ್ಪಿಸುತ್ತದೆ. ಈ ಪಟ್ಟಿಯನ್ನು ತಿದ್ದುಪಡಿಗಳ ಮೂಲಕ ಕಾಲಕಾಲಕ್ಕೆ ಮಾರ್ಪಡಿಸಲಾಗಿದೆ. ಈ ಹಿನ್ನೆಲೆಯಲ್ಲಿ ಹಿಂದೂ, ಸಿಖ್, ಬೌದ್ಧ ಧರ್ಮದ ಹೊರತಾಗಿ ಇತರ ಧರ್ಮವನ್ನು ಅನುಸರಿಸುವ ಯಾವುದೇ ವ್ಯಕ್ತಿಯು ಪರಿಶಿಷ್ಟ ಜಾತಿಯ ಸದಸ್ಯರಾಗಲು ಸಾಧ್ಯವಿಲ್ಲ. ಬೇರೆ ಯಾವುದೇ ಧರ್ಮಕ್ಕೆ ಮತಾಂತರ ಹೊಂದುವುದರಿಂದ ಪರಿಶಿಷ್ಟ ಜಾತಿ (ಎಸ್‌ಸಿ) ಸ್ಥಾನಮಾನ ರದ್ದಾಗುತ್ತದೆ. ಹೀಗಾಗಿ ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡ ದಲಿತ ವ್ಯಕ್ತಿಗೆ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ ಅನ್ವಯಿಸಲು ಸಾಧ್ಯವಿಲ್ಲ ಎಂದಿದೆ ಸುಪ್ರೀಂ ತಿಳಿಸಿದೆ.

### ಮೊಬೈಲ್ ಗೀಳು ತಡೆಗೆ ಕರಡು ನೀತಿ ಪ್ರಕಟ

ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಿಮ್ಹಾನ್ಸ್, ಶಿಕ್ಷಣ ಇಲಾಖೆ, ವಿವಿಧ ಶಿಕ್ಷಣ ಸಂಸ್ಥೆಗಳ ತಜ್ಞರು, ಪೋಷಕರು ಹಾಗೂ ಸೈಬರ್ ಕ್ರೈಂ ಇಲಾಖೆ ಭಾಗವಹಿಸಿವೆ. ಈ ನೀತಿಯಡಿಯಲ್ಲಿ, ಶಾಲೆಗಳು ಸೈಬರ್ ಬುಲಿಯಿಂಗ್ ಮತ್ತು ಡಿಜಿಟಲ್ ದುರುಪಯೋಗ ತಡೆಯಲು ವಿಶೇಷ ಪ್ರೋಟೋಕಾಲ್ ರೂಪಿಸಬೇಕು. ಶಿಕ್ಷಕರಿಗೆ ವಿದ್ಯಾರ್ಥಿಗಳ ಡಿಜಿಟಲ್ ಬಳಕೆಯನ್ನು ನಿಯಂತ್ರಿಸುವುದು ಮತ್ತು ಸುರಕ್ಷಿತ ಬಳಕೆಯ ಬಗ್ಗೆ ಮಾರ್ಗದರ್ಶನ ನೀಡುವುದು ಪ್ರಮುಖ ಜವಾಬ್ದಾರಿಯಾಗಲಿದೆ. ಶಿಕ್ಷಕರಿಗೆ ವಿಶೇಷ ತರಬೇತಿ ನೀಡುವುದರಿಂದ, ವಿದ್ಯಾರ್ಥಿಗಳಲ್ಲಿ ಮೊಬೈಲ್ ಗೀಳಿನ ಲಕ್ಷಣಗಳನ್ನು ಗುರುತಿಸಲು ಸಹಾಯವಾಗುತ್ತದೆ ಎಂದು ಸೂಚಿಸಲಾಗಿದೆ.

### ಸಿಬ್ಬಂದಿ ಬೇಡಿಕೆಗಳೇನು?

ಜಾರಿಗೆ ತರಬೇಕೆಂದು ಸಿಬ್ಬಂದಿ ಆಗ್ರಹಿಸಿದ್ದಾರೆ. ಹಿಂದೆ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಆಗಿನ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅರಣ್ಯ ಕಾರ್ಯದರ್ಶಿ ಮತ್ತು ಕೊಡಗು ಶಾಸಕ ಎ. ಎಸ್.ಪೊನ್ನಣ್ಣ ಅವರು ನಮ್ಮನ್ನು ಭೇಟಿ ಮಾಡಿ ನೇರ ವೇತನ ಪಾವತಿಯ ಭರವಸೆ ನೀಡಿದ್ದರು. ಆದರೂ ಅದು ಇನ್ನೂ ಜಾರಿಗೆ ಬಂದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

### ಇಂಗ್ಲಿಷ್ ಮಾಧ್ಯಮ: ವಾಗ್ವಾದ

ವ್ಯಂಗ್ಯವಾಡಿದರು. ಅವರಿಬ್ಬರಿಗೆ ಯಾವುದು ಬೇಕು ಮೊದಲು ಮುಗಿಸಿ ಎಂದು ಕಾಲೆಳೆದರು. ಶಿವಲಿಂಗೇಗೌಡ ಅವರದ್ದು ಬಾಂಬೆ ಇಂಗ್ಲೀಷ್ ಒಂದು ಇದೆ ಎಂದು ವಿಪಕ್ಷ ನಾಯಕ ಅಶೋಕ್ ಲೇವಡಿ ಮಾಡಿದರು. ಶಿವಲಿಂಗೇಗೌಡರ ಕನ್ನಡವೂ ಇರಲಿ, ರಾಯರೆಡ್ಡಿ ಅವರ ಇಂಗ್ಲಿಷ್ ಸಹ ಇರಲಿ ಎಂದು ಸುನೀಲ್ ಕುಮಾರ್ ಹಾಸ್ಯ ಮಾಡಿದರು. ಆಗ ಅಂತಿಮವಾಗಿ ಸ್ಪೀಕರ್ ಕನ್ನಡ ಭಾಷೆ ನಮ್ಮ ಮಾತೃ ಭಾಷೆ. ಅದರ ಜೊತೆಗೆ ಅಗತ್ಯ ಇರುವ ಭಾಷೆಗಳನ್ನ ಕಲಿಯಲು ಲಾಂಗ್ವೇಜ್ ಲ್ಯಾಬ್ ತೆರೆಯಲು ಚಿಂತಿಸಿ ಎಂದು ಸಲಹೆ ನೀಡಿದರು.

### ಇಂಧನ ಖರೀದಿಗೆ ಪ್ರಯತ್ನ: ಮೋದಿ

ಹೆಚ್ಚಿಸಲು ಕೆಲಸಗಳು ನಡೆಯುತ್ತಿವೆ. ಇದಲ್ಲದೆ ಹಡುಗುಗಳನ್ನು ತಯಾರಿಸಲು ?70,000 ಕೋಟಿಗಳ ಯೋಜನೆಯನ್ನು ಪ್ರಾರಂಭಿಸಲಾಗಿದೆ ಎಂದು ಹೇಳಿದರು ಲೋಕಸಭೆಯಲ್ಲಿ ಸೋಮವಾರ ಮಾತನಾಡಿದ್ದ ಪ್ರಧಾನಿ ಮೋದಿ, ಕೊಲ್ಲಿ ರಾಷ್ಟಗಳಿಂದ ಭಾರಿ ಪ್ರಮಾಣದಲ್ಲಿ ಕಚ್ಚಾ ತೈಲ ಹಾಗೂ ಅನಿಲ ಆಮದು ಮಾಡಿಕೊಳ್ಳುವುದರಿಂದ ಅನಿರೀಕ್ಷಿತ ಸವಾಲುಗಳು ಎದುರಾಗಿವೆ ಎಂದು ಹೇಳಿದ್ದರು.

### ಡಾ.ಸಮೀಕ್ಷಾ ಸಾವಿಗೆ ನ್ಯಾಯ

ಮಾತನಾಡಿದ ಅವರು, ಮಗಳ ನೋವಿನ ನಡುವೆಯೂ ಕುಟುಂಬದ ಸದಸ್ಯರು ಸಾಮಾಜಿಕ ಕಾಳಜಿ ತೋರಿದ್ದಾರೆ. ಹಲವು ಸಲಹೆ ನೀಡಿದ್ದಾರೆ. ಈ ಸಂದರ್ಭ ಪಶುವೈದ್ಯರು ಕೂಡ ತಮ್ಮ ಸಮಸ್ಯೆಗಳನ್ನೂ ತಿಳಿಸಿದ್ದಾರೆ. ಪರಿಹರಿಸಲು ಕ್ರಮ ವಹಿಸಲಾಗುವುದು ಎಂದರು.

### ಬಿಜೆಪಿ, ಜೆಡಿಎಸ್ ಕಿಡಿ

ಮೂಲಕ ಬೇಕಾಬಿಟ್ಟಿ ಪೋಲು ಮಾಡುತ್ತಿದ್ದಾರೆ ಎಂದು ಬಿಜೆಪಿ ಪೋಸ್ಟ್ ಮಾಡಿ ಕಿಡಿಕಾರಿದೆ.

**ಜೆಡಿಎಸ್ ಆಕ್ರೋಶ**

ರಾಜ್ಯದಲ್ಲಿ ಲಕ್ಷಾಂತರ ಜನರು ಸೂರಿಗಾಗಿ ಕಣ್ಣೀರು ಹಾಕುತ್ತಿದ್ದರೆ ಕಾಂಗ್ರೆಸ್ ಸರ್ಕಾರಕ್ಕೆ ಮಾತ್ರ ವಯನಾಡಿನ ಪುನರ್ವಸತಿಯ ಚಿಂತೆ. ಕನ್ನಡಿಗರಿಗೆ ಸುಣ್ಣ, ಕೇರಳಿಗರಿಗೆ ಬೆಣ್ಣೆ ಪ್ರಿಯಾಂಕಾ ಗಾಂಧಿ ಪ್ರತಿನಿಧಿಸುವ ವಯನಾಡಿಗೆ ಹೆಚ್ಚುವರಿ 10 ಕೋಟಿ ರೂ. ಕನ್ನಡಿಗರ ಬೆವರಿನ ತೆರಿಗೆ ಹಣವನ್ನು ನೀಡುವುದು ಎಷ್ಟು ಸರಿ ಸಿದ್ದರಾಮಯ್ಯನವರೇ? ಎಂದು ಜೆಡಿಎಸ್ ಪ್ರಶ್ನಿಸಿದೆ.

## ಏ.1ರಿಂದ ಬೇಸಿಗೆ ಶಿಬಿರ

ಮೈಸೂರು: ರೋಲ್ ಅಂಡ್ ಡೈಸ್ ಸಂಸ್ಥೆ ವತಿಯಿಂದ ಬೇಸಿಗೆ ರಜಾ ದಿನಗಳ ಹಿನ್ನೆಲೆ ಮಕ್ಕಳು ಮನೆಯಲ್ಲೇ ಇದ್ದು, ಪಾಲ್ಗೊಳ್ಳಬಹುದಾದ ವಿಶಿಷ್ಟ ರೀತಿಯ ಯುಎನ್ ಕ್ಯಾಂಪ್ ಶಿಬಿರ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಮುಖ್ಯಸ್ಥೆ ಎಸ್.ಎನ್. ತನುಶ್ರೀ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು ಮಕ್ಕಳ ವಯೋಮಿತಿ ಆಧರಿಸಿದ 14 ರಿಂದ 21 ದಿನಗಳ ಮಾರ್ಗದಶಿತ್ವದ ಕಾರ್ಯಕ್ರಮವಾಗಿದೆ. ಇದರಲ್ಲಿ ಮಕ್ಕಳಿಗೆ ಪ್ರತಿದಿನ ಸರಳ ಮತ್ತು ಆಸಕ್ತಿದಾಯಕ ಚಟುವಟಿಕೆ ನೀಡಲಾಗುತ್ತದೆ. ಮಕ್ಕಳು ಈ ಚಟುವಟಿಕೆಗಳಲ್ಲಿ ಪ್ರತಿದಿನ ತಮ್ಮ ಕುಟುಂಬದವರೊಂದಿಗೆ ಪಾಲ್ಗೊಳ್ಳಬಹುದಾಗಿದೆ. 8 ರಿಂದ 14 ವರ್ಷ ಹಾಗೂ 4 ರಿಂದ 8 ವರ್ಷದೊಳಗಿನ ಮಕ್ಕಳಿಗೆ ಪ್ರತ್ಯೇಕ ರೀತಿಯ ಚಟುವಟಿಕೆ ಇರಲಿವೆ. ಏ.1 ರಿಂದ ಶಿಬಿರ ಪ್ರಾರಂಭವಾಗಲಿದ್ದು, ಹೆಚ್ಚಿನ ಮಾಹಿತಿಗೆ ತಮ್ಮನ್ನುದೂ.80889 32576ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದರು. ಗೀತಾಶ್ರೀ, ಶಶಿಶೇಖರ್ ಇದ್ದರು.




## ಯೋಜನೆ ವಿರುದ್ಧ ಹೋರಾಟಕ್ಕೆ ಭಗತ್ ಸಿಂಗ್ ಸ್ಫೂರ್ತಿ

ಚನ್ನಪಟ್ಟಣ: ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ನೆಪದಲ್ಲಿ ಸರ್ಕಾರಿ ಶಾಲೆಗಳ ವಿಲೀನದ ವಿರುದ್ಧ ಕಳೆದ 120 ದಿನಗಳಿಂದ ನಿರಂತ ಹೋರಾಟ ನಡೆಯುತ್ತಿದ್ದು, ಇದಕ್ಕೆ ಭಗತ್ ಸಿಂಗ್ ಅವರ ಪರಮೋಚ್ಚ ಬದಲಿದಾನ ಸ್ಫೂರ್ತಿ ನೀಡಿದೆ ಎಂದು ಎ.ಐ.ಡಿ.ಎಸ್.ಒ ಸಂಘಟನೆಯ ರಾಜ್ಯ ಉಪಾಧ್ಯಕ್ಷೆ ಅಪೂರ್ವ ಹೇಳಿದರು.

ಚನ್ನಪಟ್ಟಣ ತಾಲ್ಲೂಕಿನ ಹೊಂಗನೂರು ಯೋಜನೆಯಡಿಯಲ್ಲಿ ವಿಲೀನಗೊಳ್ಳುತ್ತಿರುವ ಶಾಲೆಗಳಲ್ಲಿ "ಸಾರ್ವಜನಿಕ ಶಿಕ್ಷಣ ಉಳಿಸಿ", "ಬಡವರ ಮನೆ ಬೆಳಗಲು ಸರ್ಕಾರಿ ಶಾಲೆ ಉಳಿಸಿ" "ಭಗತ್ ಸಿಂಗ್ ಅವರು ಕನಸಿನ ಭಾರತವ ಕಟ್ಟಿ" ಎಂಬ ಘೋಷವಾಕ್ಯಗಳೊಂದಿಗೆ ನಡೆದ ಪ್ರತಿಜ್ಞಾ ದಿನದ ವೇಳೆ ಅವರು ಮಾತನಾಡಿದರು.ರಾಜ್ಯಾದ್ಯಂತ ವಿಲೀನಗೊಳ್ಳುತ್ತಿರುವ ಎಲ್ಲಾ ಶಾಲೆಗಳಲ್ಲಿ ಪ್ರತಿಜ್ಞಾದಿನವನ್ನು ಆಚರಿಸಲಾಗಿದೆ. ಮ್ಯಗ್ನೆಟ್ ಯೋಜನೆಯು ಹಳ್ಳಿಗಳ ಶಾಲೆಗಳನ್ನು ಮುಚ್ಚುವ ಮೂಲಕ ರೈತ, ಕಾರ್ಮಿಕ ಹಾಗೂ ಬಡ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುವಂತಾಗುತ್ತದೆ ಎಂದರು. ಶಿಕ್ಷಣವನ್ನು ಕೇವಲ ಆಡಳಿತಾತ್ಮಕವಾಗಿ ನೋಡುವ ಸರ್ಕಾರದ ಧೋರಣೆಯು, ಭಗತ್ ಸಿಂಗ್ ಅವರು ಕಂಡ ಶೋ?ಣೆಮುಕ್ತ ಸಮಾಜದ ಕನಸಿಗೆ ವಿರುದ್ಧವಾಗಿದೆ. ಮೂರು ದಿನಗಳ ಕಾಲ ನಡೆದ ಈ ಆಂದೋಲನದಲ್ಲಿ ಪ್ರತಿ ಹಳ್ಳಿಯ ಶಾಲೆಯೂ ಪ್ರತಿರೋಧದ ಕೇಂದ್ರವಾಗಿದೆ. ಸರ್ಕಾರವು ಈ ಜನವಿರೋಧಿ ನೀತಿಯನ್ನು ಹಿಂಪಡೆಯುವವರೆಗೆ ಹೋರಾಟವನ್ನು ತೀವ್ರಗೊಳಿಸಲು ನಿರ್ಧರಿಸಲಾಗಿದೆ. ಪೈಲೆಟ್ ಪ್ರಾಜೆಕ್ಟ್ ಆಗಿರುವ ಹೊಂಗನೂರು ಕೆಪಿಎಸ್ ಮ್ಯಾಗ್ನೆಟ್ ಯೋಜನೆಯನ್ನು ಹಿಮ್ಮೆಟ್ಟಿಸುವವರೆಗೂ ನಮ್ಮ ಹೋರಾಟ ಜಾರಿಯಲ್ಲಿರುತ್ತದೆ ಎಂದರು. ಚನ್ನಪಟ್ಟಣದ ಸಂತೆಮೊಗೇನಹಳ್ಳಿ, ಸುಣ್ಣಘಟ್ಟ, ಹೊಡಿಕೆ ಹೊಸಹಳ್ಳಿ, ಕನ್ನಿದೊಡ್ಡಿ, ಅಮ್ಮಳ್ಳಿದೊಡ್ಡಿ ಸರ್ಕಾರಿ ಶಾಲೆಗಳಲ್ಲಿ, ಕೆಪಿಎಸ್ ಮ್ಯಾಗ್ನೆಟ್ ಯೋಜನೆ ರದ್ದಾಗುವವರೆಗೂ ಹೋರಾಡುತ್ತೇವೆ ಎಂದು ವಿದ್ಯಾರ್ಥಿಗಳು ಹಾಗೂ ನೆರೆದ ಪೋ?ಕರು ಪ್ರತಿಜ್ಞೆ ಮಾಡಿದರು.




**ಮಹಿಳಾ ರತ್ನ ರಮಾಬಾಯಿ ಡಾ.ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಪ್ರದಾನ**

## ಮೈಸೂರು ಕನ್ನಡ ವೇದಿಕೆಯಿಂದ ಸಾಧಕರಿಗೆ ಸನ್ಮಾನ

ಮೈಸೂರು: ಮೈಸೂರು ಕನ್ನಡ ವೇದಿಕೆ ವತಿಯಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಿನ್ನೆಲೆ ಸಾಧಕ ಮಹಿಳೆಯರಿಗೆ ಮಹಿಳಾ ರತ್ನ ರಮಾಬಾಯಿ ಡಾ.ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಸಮಾರಂಭದಲ್ಲಿ ಹಿರಿಯ ಸರ್ಕಾರಿ ಅಧಿಕಾರಿ ಬಿ.ಎನ್.ವೀಣಾ ಮಾತನಾಡಿ, ಮನುಷ್ಯ ಹೆಚ್ಚು ಬುದ್ಧಿವಂತನಾದಷ್ಟೇ ವಿಜ್ಞಾನದ ಬೆಳವಣಿಗೆಗಳನ್ನು ಕೆಟ್ಟ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿದ್ದಾನೆ ಎನಿಸುತ್ತದೆ. ಈ ಕಾರಣದಿಂದಲೇ ಇಂದಿನ ಯುದ್ಧಗಳು ಮೊದಲಿಗಿಂತ ಹೆಚ್ಚು ವಿನಾಶಕಾರಿಯಾಗುತ್ತಿವೆ. ಇತಿಹಾಸವನ್ನು ತಿಳಿಯದವನು ಇತಿಹಾಸ ಸೃಷ್ಟಿಸಲಾರ ಎಂಬ ಮಾತು ಸದಾ ಸೂಕ್ತವಾಗಿದೆ. ಇದನ್ನು ಎಂದಿಗೂ ಮರೆಯಬಾರದು. ಇದೇ ವೇಳೆ ಪ್ರತಿಯೊಬ್ಬ ಪುರುಷನ ಸಾಧನೆ ಹಿಂದೆಯೋ ಓರ್ವ ಮಹಿಳೆ ಇದ್ದೇ ಇರುತ್ತಾಳೆ. ಅಂಬೇಡ್ಕರ್ ಪತ್ನಿ ರಮಾಬಾಯಿ ಹೆಚ್ಚು ಓದಿದವರಲ್ಲ. ಆದರೆ, ಅಂಬೇಡ್ಕರ್ ಸಾಧನೆಗೆ ಅವರ ಕೊಡುಗೆಯೂ ಅಪಾರವಾದುದಾಗಿದೆ. ಇಡೀ ಕುಟುಂಬ ನಿರ್ವಹಿಸುತ್ತ ಅದರ ಹೊರೆ ಅಂಬೇಡ್ಕರ್ ಅವರ ಮೇಲೆ ಬೀಳದಂತೆ ನೋಡಿಕೊಂಡರೆಂದರು. ಅವರು ನೀಡಿದ ಸಹಕಾರ ಸಹಾ ಅಂಬೇಡ್ಕರ್ ಅತ್ಯುತ್ತಮ ಸಂವಿಧಾನ ರಚಿಸಲು ಸಾಧ್ಯವಾಯಿತು. ಅದರ ಪರಿಣಾಮವಾಗಿ ಇಂದು ಬಹಳಷ್ಟು ಮಹಿಳೆಯರು ಶೋಷಣೆಯಿಂದ ಹೊರ ಬಂದು, ಅದರ ವಿರುದ್ಧ ಹೋರಾಡುವಂತಾಗಿದೆ ಎಂದು ವಿವರಿಸಿದರು.



ಕಾರ್ಯಕ್ರಮದಲ್ಲಿ ಕಮಲಾ ನಟರಾಜ್(ಗ್ರಾ.ಪಂ. ಮಾಜಿ ಅಧ್ಯಕ್ಷೆ), ಭಾನವಿ ಹೆಚ್.ಅರುಣ್ ಕುಮಾರ್ (ಪೊಲೀಸ್ ಇಲಾಖೆ), ಸುಶೀಲ(ಶಿಕ್ಷಣ ಕ್ಷೇತ್ರ), ಲಕ್ಷ್ಮಿ(ಪೌರಬಂಧು), ಚಾಂದಿನಿ(ಕೃಷಿ ಕ್ಷೇತ್ರ), ಮಹದೇವಮ್ಮ ರಮೇಶ್(ಹೋರಾಟಗಾರ್ತಿ), ಭಾಗ್ಯಲಕ್ಷ್ಮಿ (ಭರತನಾಟ್ಯ ಕಲಾವಿದೆ), ಮಮತಶ್ರೀ (ಮಹಿಳಾ ಉದ್ಯಮಿ), ಗೌತಮಿ ರಮೇಶ್(ವಕೀಲೆ), ವಿ.ಪಿ.ಸುಶೀಲ(ಸಮಾಜ ಸೇವೆ) ಅವರಿಗೆ ಮಹಿಳಾ ರತ್ನ ರಮಾಬಾಯಿ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್ ಪ್ರಧಾನ ಭಾಷಣ ಮಾಡಿದರು. ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷೆ ಕೆ.ಪುಷ್ಪವಲ್ಲಿ ಉದ್ಘಾಟಿಸಿದರು. ರೈತ ಪರ್ವ ರಾಜ್ಯಾಧ್ಯಕ್ಷ ಅರುಣ್‌ಕುಮಾರ್, ಸಮಾಜಸೇವಕ ಕೆ.ರಘುರಾಂ ವಾಜಪೇಯಿ, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್. ಬಾಲಕೃಷ್ಣ, ಮನೋಹರ್, ನಾಲಾಬೀದಿ ರವಿ ಇನ್ನಿತರರು ಇದ್ದರು.

## ನಾನಾ ಸೇವಾ ಕಾರ್ಯಗಳ ಮೂಲಕ ಯಧುವೀರ್ ಹುಟ್ಟುಹಬ್ಬ

ಮೈಸೂರು: ಯದುವೀರ್ ಬ್ರಿಗೇಡ್, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ, ಡಾ.ಅಗರವಾಲ್ಸ್ ಕಣ್ಣಿನ ಆಸ್ಪತ್ರೆ, ಲಯನ್ಸ್ ಕ್ಲಬ್ ಆಫ್ ಮೈಸೂರು, ವಿ ಫಾರ್ ಸೇವಾ ಚಾರಿಟಬಲ್ ಟ್ರಸ್ಟ್, ಫಾರೂಖ್ ಅಕಾಡೆಮಿ ಆಫ್ ಮೆಡಿಕಲ್ ಎಜುಕೇಷನ್ ಅಂಡ್ ರಿಸರ್ಚ್ ಸೆಂಟರ್ ಸಹಯೋಗದಲ್ಲಿ ಉಚಿತ ರಕ್ತದಾನ ಶಿಬಿರ, ಉಚಿತ ಆರೋಗ್ಯ ಹಾಗೂ ಕಣ್ಣಿನ ತಪಾಸಣಾ ಶಿಬಿರವನ್ನು ನಡೆಸಲಾಯಿತು.

ಶಿಬಿರದಲ್ಲಿ 80ಕ್ಕೂ ಹೆಚ್ಚು ಮಂದಿ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿದರು. 150ಕ್ಕೂ ಹೆಚ್ಚು ಮಂದಿ ಆರೋಗ್ಯ ತಪಾಸಣೆ ಹಾಗೂ ಕಣ್ಣಿನ ತಪಾಸಣೆಯಲ್ಲಿ ಭಾಗವಹಿಸಿ ಶಿಬಿರದ ಪ್ರಯೋಜನ ಪಡೆದುಕೊಂಡರು. ಈ ವೇಳೆ ಮಾತನಾಡಿದ ಲಯನ್ಸ್ ಜೀವಧಾರ ರಕ್ತನಿಧಿ ಕೇಂದ್ರ ಗಿರೀಶ್ ಮಾತನಾಡಿ, ಸಂಸದ ಹಾಗೂ ರಾಜವಂಶಸ್ಥರಾದ ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ ಜನ್ಮ ದಿನವನ್ನು ಅವರ ಅಪೇಕ್ಷೆಯಂತೆ ಯಾವುದೇ ಫ್ಲೆಕ್ಸ್ ಅಥವಾ ಅನಗತ್ಯ ಕಾರ್ಯಕ್ರಮದ ಮೂಲಕ ಮಾಡುತ್ತಿಲ್ಲ. ರಕ್ತದಾನ, ಕಣ್ಣಿನ ತಪಾಸಣೆ ಹಾಗೂ ಆರೋಗ್ಯ ತಪಾಸಣೆಯಂತಹ ಸಾಮಾಜಿಕ ಕಾರ್ಯಕ್ರಮಗಳ ಮೂಲಕ ಅವರಿಗೆ ಶುಭಾಶಯ ತಿಳಿಸುವ ಕೆಲಸ ಮಾಡಲಾಗುತ್ತಿದೆ. ಇದೊಂದು ವಿಭಿನ್ನ ಜನ್ಮ ದಿನ ಕಾರ್ಯಕ್ರಮ ಎಂದರು.





ಮಾಜಿ ಉಪಮೇಯರ್ ವಿ.ಶೈಲೇಂದ್ರ ಮಾತನಾಡಿ, ಮೈಸೂರು ನಗರಕ್ಕೆ ಮಹಾರಾಜ ಕೊಡುಗೆ ಅವಿಸ್ಮರಣೀಯ. ಅವರ ಹಾದಿಯಲ್ಲಿ ಸಾಗಿರುವ ಸಂಸದ ಯಧುವೀರರ ಕಾರ್ಯವೈಖರಿ ಜನರೇ ಮೆಚ್ಚುವುದಾಗಿದೆ. ಅವರು ರಾಜಕೀಯವಾಗಿ ಮತ್ತಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಆಶಿಸುತ್ತೇನೆಂದರು. ಇದಕ್ಕೂ ಮುನ್ನ ಯುವಬ್ರಿಗೇಡ್ ಕಾರ್ಯಕರ್ತರು ಅಗ್ರಹಾರದ ನೂರೊಂದು ಗಣಪತಿ ದೇವಾಲಯದಲ್ಲಿ ಸಂಸದ ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹೆಸರಿನಲ್ಲಿ ಪೂಜೆ ಸಲ್ಲಿಸುವ ಮೂಲಕ ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಮೈಸೂರು ನಗರ ಅಧ್ಯಕ್ಷ ಎಲ್.ನಾಗೇಂದ್ರ, ಮೈಸೂರು ಕೈಗಾರಿಕಾ ಸಂಘದ ಅಧ್ಯಕ್ಷ ಕೆ.ಬಿ.ಲಿಂಗರಾಜು, ಮಾಜಿ ಮೇಯರ್ ಶಿವಕುಮಾರ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ರಘು, ನಗರಪಾಲಿಕೆ ಮಾಜಿ ಸದಸ್ಯರಾದ ಎಂ.ಯು.ಸುಬ್ಬಯ್ಯ, ಬಿ.ವಿ.ಮಂಜುನಾಥ್, ಶೈಲೇಂದ್ರ, ಜಗದೀಶ್ ಹಾಗೂ ಮುಖಂಡರಾದ ಅನೋಜ್, ಕಿರಣ್ ಗೌಡ, ಜಯಪ್ಪ, ಪಂಕಜ್ ಪಾರಿಕ್, ಶಿವಕುಮಾರ್, ನಗರ ಮಹಿಳಾ ಮೋರ್ಚಾದ ಮಾಜಿ ಅಧ್ಯಕ್ಷೆ ರೇಣುಕಾರಾಜು, ಮುಡ ಮಾಜಿ ಸದಸ್ಯೆ ಲಕ್ಷ್ಮೀದೇವಿ, ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್ ಇನ್ನಿತರರು ಉಪಸ್ಥಿತರಿದ್ದರು.

### ರಂಗೋಲಿಯಲ್ಲಿ ಅರಳಿದ ಯಧುವೀರ್

**ಮೈಸೂರು ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗದ ಆವರಣದಲ್ಲಿ ಕಲಾವಿದರೊಬ್ಬರು ಬೃಹತ್ ರಂಗೋಲಿಯಲ್ಲಿ ಯಧುವೀರ್ ಅವರ ಭಾವಚಿತ್ರವನ್ನು ಬಿಡಿಸುವ ಮೂಲಕ ಅವರಿಗೆ ವಿಶೇಷವಾಗಿ ಹುಟ್ಟುಹಬ್ಬದ ಶುಭಾಶಯವನ್ನು ಕೋರಿ ಗಮನ ಸೆಳೆದರು.**

# ಮಹದೇಶ್ವರ ಶಾಲೆಗೆ ದಾಖಲಾತಿ ಪ್ರಾರಂಭ

ಹನೂರು: ತಾಲೂಕಿನ ಶ್ರೀ ಮಲೆ ಮಹದೇಶ್ವರ ಸ್ವಾಮಿ ಕೃಪಾ ಎಜುಕೇಶನ್ ಸೊಸೈಟಿ ಶಾಲೆಗೆ 2026–27 ನೇ ಸಾಲಿಗೆ ದಾಖಲಾತಿ ಪ್ರಾರಂಭವಾಗಿದ್ದು ಅಗತ್ಯ ದಾಖಲಾತಿಗಳನ್ನು ನೀಡಿ ಪ್ರವೇಶಾತಿ ಪಡೆದುಕೊಳ್ಳುವಂತೆ ಶ್ರೀ ಸಾಲೂರು ಬೃಹನ್ ಮಠದ ಅಧ್ಯಕ್ಷರಾದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸಾಲೂರು ಬೃಹನ್ ಮಠದ ಅಧೀನದಲ್ಲಿ ನಡೆಯುತ್ತಿರುವ ಶ್ರೀ ಮಲೆ ಮಹದೇಶ್ವರ ಸ್ವಾಮಿ ಕೃಪಾ ಎಜುಕೇಶನ್ ಸೊಸೈಟಿ ವತಿಯಿಂದ ನಡೆಸುತ್ತಿರುವ ಶಾಲೆಗಳಲ್ಲಿ 2026 27ನೇ ಸಾಲಿಗೆ ಶಾಲಾ ದಾಖಲಾತಿ ಪ್ರಾರಂಭವಾಗಿದ್ದು ವಿಶೇಷ ವಾಗಿ ತಂದೆ ತಾಯಿ ಇಲ್ಲದ ಮಕ್ಕಳಿಗೆ ( ಶಾಲೆಗೆ ಮತ್ತು ಬಾಲಕರ ವಿದ್ಯಾರ್ಥಿ ನಿಲಯಕ್ಕೆ )ಉಚಿತ ವಿದ್ಯಾಭ್ಯಾಸ ಮಾಡಲು ಅವಕಾಶ ಮಾಡಿಕೊ ಡಲಾಗಿದೆ. ಅರ್ಜಿಗಳನ್ನು ಮಾರ್ಚ್ 16 ರಿಂದ ಏಪ್ರಿಲ್ 15ರವರೆಗೆ ಕೊಡಲಾಗುವುದು ಅವಶ್ಯಕತೆ ಇರುವವರು ಶ್ರೀ ಮಲೆ ಮಹದೇಶ್ವರ ಸ್ವಾಮಿ ಕೃಪಾ ಎಜುಕೇಶನ್ ಸೊಸೈಟಿ ಕಚೇರಿಗೆ ಬಂದು ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಕಚೇರಿಗೆ ಸಲ್ಲಿಸಲು ತಿಳಿಸಿದೆ.

ಶಾಲೆಗೆ ದಾಖಲಾಗುವ ವಿದ್ಯಾರ್ಥಿಗಳಿಗೆ ವಿಶೇಷವಾಗಿ ವೇದ ಆಗಮ ಮತ್ತು ಸಂಸ್ಕೃತ ಅಧ್ಯಯನವು ಉಚಿತವಾಗಿರುತ್ತದೆ.

5ನೇ ತರಗತಿಯಿಂದ ದ್ವಿತೀಯ ಪಿಯುಸಿ ವರೆಗೆ ವಿದ್ಯಾಭ್ಯಾಸ ಮಾಡಬಯಸುವ ಗ್ರಾಮೀಣ ಪ್ರದೇಶದ ಬಡ ಕುಟುಂಬದ ಯಾವುದೇ ಜನಾಂಗದ ವಿದ್ಯಾರ್ಥಿಗಳ ಪೋಷಕರು ಬೆಳಗ್ಗೆ 9:30 ರಿಂದ ಸಂಜೆ 4:30ವರೆಗೆ ಪುದ್ದು ಕಚೇರಿಗೆ ಬಂದು ಸಂಪರ್ಕಿಸಿ ಭರ್ತಿ ಮಾಡಿದ ಅರ್ಜಿಗಳನ್ನು ನೀಡುವ ಸಂದರ್ಭದಲ್ಲಿಯೇ ಎಲ್ಲ ದಾಖಲಾತಿಗಳನ್ನು ನೀಡಿ ಪ್ರವೇಶವನ್ನು ಖಾತ್ರಿಪಡಿಸಿಕೊಳ್ಳಲು ತಿಳಿಸಿದೆ ಸೀಮಿತ ಸಂಖ್ಯೆಯ ದಾಖಲಾತಿಗಳು ಮಾತ್ರ ಲಭ್ಯವಿದೆ ಎಂದು ತಿಳಿಸಿದ್ದಾರೆ.

# ಡ್ರಗ್ಸ್ ಬಳಕೆ ಶಿಕ್ಷಾರ್ಹ ಅಪರಾಧ, ಯುವ ಜನತೆಗೆ ಅರಿವು ಮೂಡಿಸಿ



ಮೈಸೂರು: ಡ್ರಗ್ಸ್ ಬಳಕೆ ಮಾಡುವುದು, ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಡ್ರಗ್ಸ್ ಬಳಕೆಯ ಅಪಾಯ ಕುರಿತು ಯುವಜನತೆಯಲ್ಲಿ ಅರಿವು ಮೂಡಿಸಿ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ನಾರ್ಕೋ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ನಾರ್ಕೋಟಿಕ್ ರಿಲೇಟೆಡ್ ಆಗಿ ಬಳಸುವ ಔಷಧಿಗಳ ಮಾರಾಟ ಕುರಿತ ಮಾಹಿತಿಯ ರಿಜಿಸ್ಟರ್ ಅನ್ನು ಮೆಡಿಕಲ್ ಶಾಪ್ ಗಳಲ್ಲಿ ಇಡಬೇಕು. ತಪ್ಪಿದಲ್ಲಿ ಮೆಡಿಕಲ್ ಶಾಪ್ ಗಳ ಮೇಲೆ ಕ್ರಮ ಕೈಗೊಳ್ಳುವುದು ಎಂದರು.

ಮೈಸೂರು ಜಿಲ್ಲೆಯು ಡ್ರಗ್ಸ್ ಬಳಕೆ ಮಾಡುವುದರಲ್ಲಿ ಹೆಚ್ಚು ಇದೆ ಎಂದು ಕೆಟ್ಟ ಹೆಸರು ಬರುತ್ತಿದೆ. ಯುವಕ ಯುವತಿಯರು ಹೆಚ್ಚಾಗಿ ಡ್ರಗ್ ಅಡಿಟ್ ಆಗುತ್ತಿದ್ದಾರೆ. ಇದನ್ನು ತಡೆಗಟ್ಟಬೇಕು ಈ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು ಕಾರ್ಯ ನಿರ್ವಹಿಸಿ ಎಂದು ಸೂಚನೆ ನೀಡಿದರು. ಶಾಲಾ ಕಾಲೇಜು ಕ್ಯಾಂಪಸ್ ಗಲ್ಲಿ ತಪಾಸಣೆ ನಡೆಸಬೇಕು. ಡ್ರಗ್ಸ್ ಬಳಕೆ ಹಾಗೂ ಮಾರಾಟ ಕಂಡು ಬಂದರೆ ಕೂಡಲೇ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂದು ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು. ಸಭೆಯಲ್ಲಿ ಮೈಸೂರು ಮಹಾನಗರ ಪಾಲಿಕೆಯ ಆಯುಕ್ತ ಶೇಕ್ ತನ್ವೀರ್ ಆಸಿಫ್, ಡಿಸಿಪಿ ಸುಂದರ್ ರಾಜ್ ಸೇರಿ ಇತರರು ಉಪಸ್ಥಿತರಿದ್ದರು.

# ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ




ಗುಂಡ್ಲುಪೇಟೆ ,:– ತಾಲೂಕಿನ ಜ್ಞಾನಭವನದಲ್ಲಿ ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಅಬಕಾರಿ ನೀರಿಕ್ಷಕಿ ದೀಪು ಎನ್ . ರವರು ಮಾತನಾಡಿ, ಹೆಣ್ಣು ಮಕ್ಕಳು ಇತ್ತೀಚಿನ ದಿನಗಳಲ್ಲಿ ಯಾವುದೇ ಕೆಲಸದಲ್ಲೂ ಹಿಂದೆ ಬೀಳದೆ ಮನೆಯಿಂದ ಹಿಡಿದು ಬಾಹ್ಯಾಕಾಶದವರೆಗೆ ಕಾರ್ಯನಿರ್ವಹಿಸಿ ಯಶಸ್ವಿಯಾಗಿದ್ದಾರೆ ಇದಕ್ಕೆಲ್ಲ ಪ್ರಯತ್ನದ ಅವಶ್ಯಕತೆ ಇದ್ದು ಜೊತೆಗೆ ಛಲವು ಬೇಕಾಗಿದೆ. ನಾವು ಯಾರ ಬಳಿಯೂ ಯಾವುದಕ್ಕೂ ಯೋಚಿಸ ಬೇಕಾಗಿಲ್ಲ ನಮ್ಮ ಹಕ್ಕನ್ನು ನಾವು ಪ್ರಶ್ನೆ ಮಾಡಿ ಪಡೆದುಕೊಳ್ಳಬೇಕಾದ ಅನಿವಾರ್ಯ ಸ್ಥಿತಿಯಲ್ಲಿ ಹೆಣ್ಣು ಮಕ್ಕಳು ಇದ್ದಾರೆ ಹೋರಾಟವನ್ನು ಮಾಡಿ ಯಶಸ್ವಿಯಾಗಬೇಕಾಗಿದೆ. ಇದಕ್ಕೆ ಶಿಕ್ಷಣದ ಅಗತ್ಯವಿದ್ದು ನಿಮ್ಮ ಮಕ್ಕಳಿಗೆ ಶಿಕ್ಷಣವನ್ನು ನೀಡಿ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಸಿಡಿಪಿಓ ಹೇಮಾವತಿ ಮಾತನಾಡಿ ಹೆಣ್ಣು ಮಕ್ಕಳಿಗೆ ಇತ್ತೀಚಿನ ದಿನಗಳಲ್ಲಿ ಪೋಷಕರು ವಿದ್ಯಾಭ್ಯಾಸವನ್ನು ಮಾಡಿಸುತ್ತಿದ್ದು ಕೆಲವು ಸಂದರ್ಭಗಳಲ್ಲಿ ಹೆಣ್ಣು ಮಕ್ಕಳು ಪ್ರೀತಿ ಪ್ರೇಮದ ಬಲೆಗೆ ಬಿದ್ದು ಮೋಸ ಹೋದ ಘಟನೆಗಳು ಪೋಷಕರಿಗೆ ಭಯವನ್ನುಂಟು ಮಾಡುತ್ತಿವೆ. ಆದರೆ ನಮ್ಮ ಮಕ್ಕಳ ಮೇಲೆ ನಾವು ನಂಬಿಕೆಯನ್ನು ಇಟ್ಟು ಅವರ ಮುಂದಿನ ಭವಿಷ್ಯದ ನಿರ್ಮಾಣಕ್ಕಾಗಿ ಶಿಕ್ಷಣವನ್ನು ನೀಡಬೇಕು ಹೆಣ್ಣು ಇಂದಿನ ಸಂದರ್ಭದಲ್ಲಿ ಮನೆಗೆ ಮಾತ್ರ ಸೀಮಿತವಾಗದೆ ಸಮಾಜ ಕಟ್ಟುವ ಹಂತದಲ್ಲಿ ಭಾಗಿದಾರಳಾಗುತ್ತಿದ್ದಾಳೆ. ಹೀಗಿರುವಾಗ ಹೆಣ್ಣಿಗೆ ಶಿಕ್ಷಣದ ಅಗತ್ಯತೆ ಹೆಚ್ಚಾಗಿದೆ ಶಿಕ್ಷಣ ನೀಡುವ ಜೊತೆಗೆ ಸಂಸ್ಕಾರವನ್ನು ನೀಡುವ ಕರ್ತವ್ಯ ತಂದೆ ತಾಯಿಗಳು ನಿರ್ವಹಿಸಬೇಕಾಗಿದ್ದು ಮಕ್ಕಳಿಗೆ ಬಾಲ್ಯ ವಿವಾಹ ಹಾಗೂ ಬಾಲ ಗರ್ಭಿಣಿ ಇಂದ ಆಗುವ ದುಷ್ಪರಿಣಾಮಗಳ ಕುರಿತು ಅರಿವುವನ್ನು ನೀಡಬೇಕಾಗಿರುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಇತ್ತೀಚಿಗೆ ಬಾಲ ಗರ್ಭಿಣಿ ಪ್ರಕರಣಗಳು ಹೆಚ್ಚುತ್ತಿದ್ದು ಪೋಕ್ಸೋ ಕಾಯ್ದೆ ಕುರಿತು ಪೋಷಕರು ಹಾಗೂ ಯುವಕರು ಅರಿತು ಕಾನೂನನ್ನು ಪಾಲಿಸಿದ್ದಲ್ಲಿ ಸುಸ್ಥಿರ ಸಮಾಜ ನಿರ್ಮಾಣದಲ್ಲಿ ನಾವು ನಮ್ಮ ಕರ್ತವ್ಯವನ್ನು ನಿರ್ವಹಿಸಿದಂತಾಗುತ್ತದೆ ಆದ್ದರಿಂದ ಇಲ್ಲಿ ಭಾಗವಹಿಸಿರುವ ಎಲ್ಲರೂ ನಿಮ್ಮ ಮಕ್ಕಳಿಗೆ ಕಾನೂನು ಕಾಯ್ದೆಗಳ ಕುರಿತು ಮಾಹಿತಿಯನ್ನು ತಿಳಿದುಕೊಳ್ಳಲು ಅವಕಾಶವನ್ನು ಕಲ್ಪಿಸಿಕೊಡಿ ಎಂದು ತಿಳಿಸಿದರು

ಆರ್.ಎಲ್.ಎಚ್.ಪಿ ನಿರ್ದೇಶಕಿ ಸರಸ್ವತಿ ರವರು ಮಾತನಾಡಿ ಸಂಸ್ಥೆ ನಡೆದು ಬಂದ ಹಾದಿ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಾಮುಖ್ಯತೆ ಬಗ್ಗೆ ತಿಳಿಸಿ ಮೂಢನಂಬಿಕೆಗಳಿಂದ ಹೊರಬಂದು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ನಿಮ್ಮ ಮಕ್ಕಳನ್ನು ಬೆಳೆಸಿ ಎಂದು ತಿಳಿಸಿದರು.

ಮಹಿಳಾಪರ ಹೋರಾಟಗಾರ್ತಿ, ಗಮನ ಮಹಿಳಾ ಸಮೂಹ, ಬೆಂಗಳೂರು ಮಮತಾ ಯಜಮಾನ್ .ರವರು ಮಾತನಾಡಿ ಮಹಿಳಾಪರ ಜಾನಪದ ಗೀತೆಗಳ ಮೂಲಕ ಮಹಿಳೆಯರಿಗೆ ಆತ್ಮವಿಶ್ವಾಸವನ್ನು ತುಂಬಿ ಮಹಿಳೆಯರು ತಮ್ಮ ಆತ್ಮವಿಶ್ವಾಸ ಗೌರವ ನಂಬಿಕೆಗಳಿಗೆ ಅಡೆತಡೆಯಾಗುವ ಯಾವುದೇ ಸಂದರ್ಭಗಳನ್ನು ಎದುರಿಸಿ ನಿಲ್ಲುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಇದಕ್ಕೆ ಪೂರಕವಾಗಿ ಮಕ್ಕಳಿಗೆ ಶಿಕ್ಷಣವನ್ನು ನೀಡಿ ಹಾಗೂ ನಿಮ್ಮಲ್ಲಿರುವ ಜ್ಞಾನಾರ್ಜನೆಗಾಗಿ ಸಮುದಾಯಗಳಲ್ಲಿ ನಡೆಯುವ ಅರಿವಿನ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಎಂದು ಕಿವಿ ಮಾತನ್ನು ಹೇಳಿದರು. ಮಹಿಳೆಯರು ಮತ್ತು ಹದಿಹರೆಯದ ಹೆಣ್ಣು ಮಕ್ಕಳು ಹಲವು ಬಗೆಯ ನೃತ್ಯಗಳನ್ನು ಮಾಡಿ ತಮ್ಮಲ್ಲಿರುವ ಪ್ರತಿಭೆಗಳನ್ನು ಹೊರಹಾಕಿದರು. ಹಾಗೂ ಕ್ರೀಡೆಗಳಲ್ಲಿ ಭಾಗವಹಿಸಿ ಬಹುಮಾನವನ್ನು ಪಡೆದುಕೊಂಡರು. ಸುಮಾರು ಇನ್ನೂರಕ್ಕೂ ಹೆಚ್ಚು ಮಹಿಳೆಯರು ಮತ್ತು ಹದಿಹರೆಯದ ಹೆಣ್ಣು ಮಕ್ಕಳು ಬಾಗವಹಿಸಿದರು

# ರಸ್ತೆ ಅಪಘಾತ ತಡೆಗೆ ಕ್ರಮವಹಿಸಿ

## ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಹೇಳಿಕೆ | ರಸ್ತೆ ಸುರಕ್ಷತಾ ಸಮಿತಿ ಸಭೆ



ಮೈಸೂರು: ರಸ್ತೆ ಅಪಘಾತದಿಂದ ಹಲವರು ಪ್ರಾಣ ಕಳೆದುಕೊಳ್ಳುತ್ತಿದ್ದು, ಕೆಲವರು ಅಂಗವಿಕಲರಾಗುತ್ತಿದ್ದಾರೆ. ಆದ್ದರಿಂದ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಬ್ಲಾಕ್ ಸ್ಪಾಟ್ ಗಳನ್ನು ಗುರುತಿಸಿ ಅಪಘಾತ ಸಂಭವಿಸದಂತೆ ಕ್ರಮಗಳನ್ನು ಕೈಗೊಳ್ಳಿ. ಅವೈಜ್ಞಾನಿಕ ಹುಬ್ಬುಗಳು ಇದ್ದರೆ ತೆರವುಗೊಳಿಸಿ. ಅಪಘಾತಗಳು ಹೆಚ್ಚು ಸಂಭವಿಸುತ್ತಿರುವ ಸ್ಥಳಗಳನ್ನು ಗುರುತಿಸಿ, ದುರಸ್ಥಿಗೆ 15 ದಿನಗಳ ಒಳಗೆ ಎಸ್ಟಿಮೇಟ್ ಸಲ್ಲಿಸಿ, ಈಗಾಗಲೇ ಅನುಮೋದನೆ ಆಗಿರುವ ಕಡೆ 30 ದಿನಗಳ ಒಳಗೆ ಕಾಮಗಾರಿ ಮುಗಿಸಬೇಕು ಎಂದು ಹೇಳಿದರು.

ತೀವ್ರ ತಿರುವು ಇರುವ ರಸ್ತೆಗಳಲ್ಲಿ ತಿರುವುಗಳನ್ನು ಸ್ವಲ್ಪ ಕಡಿಮೆ ಮಾಡಬೇಕು. ತಿರುವುಗಳಲ್ಲಿ ಸೈನ್ ಬೋರ್ಡ್ ಗಳನ್ನು ಅಳವಡಿಸಿ, ಅಗತ್ಯ ಇರುವ ಕಡೆ ವೈಜ್ಞಾನಿಕ ಸ್ಪೀಡ್ ಬ್ರೇಕರ್ ಗಳನ್ನು ಅಳವಡಿಸಿ, ಹೈವೇ ರಸ್ತೆಗಳಿಗೆ ಹಂಬ್ಸ್ ಗಳನ್ನು ಅಳವಡಿಸಬಾರದು. ಪ್ರತಿಯೊಂದು ಅಪಘಾತ ವಲಯಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ವೈಜ್ಞಾನಿಕ ಕ್ರಮಗಳನ್ನು ಗುರುತಿಸಿ ಎಸ್ಟಿಮೇಟ್ ಮಾಡಿ ಅನುಮೋದನೆ ಪಡೆದು ಅಳವಡಿಸಬೇಕು. ಒಟ್ಟಿನಲ್ಲಿ ಅಪಘಾತಗಳನ್ನು ಅದಷ್ಟು ಕಡಿಮೆ ಮಾಡಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಡಿಸಿಪಿ ಸುಂದರ್ ರಾಜ್ ಸೇರಿ ಅನೇಕರು ಉಪಸ್ಥಿತರಿದ್ದರು.

# ಗಂಗೂಬಾಯಿ ಹಾನಗಲ್ ಎಲ್ಲರಿಗೂ ಆದರ್ಶರು: ಪ್ರೊ.ಕೆ.ರಾಮಕೃಷ್ಣಯ್ಯ

ಮೈಸೂರು: ಸಂಗೀತ ಕ್ಷೇತ್ರದಲ್ಲಿ ಪದ್ಮಭೂಷಣ ಪ್ರಶಸ್ತಿ ಪಡೆಯುವುದು ಸುಲಭದ ಮಾತಲ್ಲ. ಅಂತಹ ಸಾಧನೆ ಮಾಡಿದ ಗಂಗೂಬಾಯಿ ಹಾನಗಲ್ ನಮ್ಮೆಲ್ಲರಿಗೂ ಆದರ್ಶ ಪ್ರಾಯರು ಎಂದು ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ರಾಮಕೃಷ್ಣಯ್ಯ ಹೇಳಿದರು.



ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕೆ.ಎಸ್.ಜಿ.ಎಚ್ ಸಭಾಂಗಣದಲ್ಲಿ ನಡೆದ ಪಂ.ಪುಟ್ಟರಾಜ ಗವಾಯಿ ಮತ್ತು ಡಾ.ಗಂಗೂಬಾಯಿ ಹಾನಗಲ್ ಜನ್ಮದಿನೋತ್ಸವ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು. ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಗಂಗೂಬಾಯಿ ಹಾನಗಲ್ ಅವರು ವಿಶ್ವವೇ ಕರ್ನಾಟಕದ ಕಡೆ ನೋಡುವ ಹಾಗೆ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿ ನಮಗೆ ಹಾಗೂ ರಾಜ್ಯಕ್ಕೆ ಬೆಳಕಾಗಿ ನಿಂತಿದ್ದಾರೆ. ಅವರ ಹೆಜ್ಜೆಯ ಗುರುತಿನೊಂದಿಗೆ ಅವರ ಮಾರ್ಗದಲ್ಲಿ ನಾವು ನಡೆಬೇಕಿದೆ. ಗಂಗೂಬಾಯಿ ಹಾನಗಲ್ ಸಂಗೀತದಲ್ಲಿ ಸಾಧಿಸಿದಂತಹ ಸಾಧನೆ, ಅವರ ಧ್ವನಿ ಎಲ್ಲರನ್ನೂ ಬೆರಗುಗೊಳಿಸುವಂತದ್ದು. ರಾಜ್ಯ, ರಾಷ್ಟ್ರಮಟ್ಟದ ಕಲಾವಿದರನ್ನು ಸೃಷ್ಟಿ ಮಾಡುವ ಜವಾಬ್ದಾರಿ ನಮ್ಮ ಹೊಣೆ ಎಂದರು.

ಗಂಗೂಬಾಯಿ ಹಾನಗಲ್ ಅವರ ಹೆಸರಿನಲ್ಲಿ ಸ್ಥಾಪನೆಯಾಗಿರುವ ವಿಶ್ವವಿದ್ಯಾನಿಲಯದಲ್ಲಿ ಕನಿಷ್ಠ ಆ ಸಾಲಿನಲ್ಲಿ ನಿಲ್ಲಬಹುದಾದಂತಹ ಕಲಾವಿದರನ್ನು ಸೃಷ್ಟಿ ಮಾಡುವ ಜವಾಬ್ದಾರಿ ನಮ್ಮ ಮೇಲಿದೆ. ಆ ನಿಟ್ಟಿನಲ್ಲಿ ಅಧ್ಯಾಪಕರು, ವಿದ್ಯಾರ್ಥಿಗಳು ಸಾಗಬೇಕು. ಪಂ.ಪುಟ್ಟರಾಜ ಗವಾಯಿಗಳು ವಿಶೇಷಚೇತನರಾದರೂ ಕೂಡ ಬಹಳ ದೊಡ್ಡ ಸಾಧನೆ ಮಾಡುವ ಮೂಲಕ ಪದ್ಮಭೂಷಣ ಪ್ರಶಸ್ತಿಯನ್ನು ಪಡೆಯುತ್ತಾರೆ. ಕವಿ, ಸಾಹಿತಿ, ವೃತ್ತಿರಂಗಭೂಮಿಗೆ ವಿಶಿಷ್ಟವಾದ ಸಂಗೀತ ರಚನೆಯನ್ನು ಮಾಡಿ ಅಂಧ ಮಕ್ಕಳಿಗೆ ಹಾಗೂ ಅನಾಥ ಮಕ್ಕಳಿಗೆ ಶಾಲೆಗಳನ್ನು ನಿರ್ಮಿಸಿ ಸಂಗೀತ ಜ್ಞಾನವನ್ನು ನೀಡಿದ್ದಾರೆಂದರು. ಈ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯದ ಪ್ರತಿಯೊಬ್ಬರು ಹೊಸ ಪರಂಪರೆಯನ್ನು ಪ್ರಾರಂಭ ಮಾಡಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಹಿಂದೂಸ್ತಾನಿ ಗಾಯಕರಾದ ಶಾರದಾ ಭಟ್, ಗೋಪಾಲ ರಾಯಚೂರ್, ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಧ ಪ್ರಭಾರ ಕುಲಪತಿ ಪ್ರೊ.ಎಂ.ಜಿ.ಮಂಜುನಾಥ, ಹಣಕಾಸು ಅಧಿಕಾರಿ ಸಿ.ಪಿ.ಸೌಮ್ಯಶ್ರೀ ಸೇರಿ ಇತರರಿದ್ದರು.

# ಸಹಕಾರ ಸಂಘದಲ್ಲಿ ಮಹಿಳಾ ದಿನಾಚರಣೆ

ಮೈಸೂರು: ಬೆಂಗಳೂರಿನ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ಮೈಸೂರು ಪ್ರಾಂತೀಯ ಕಚೇರಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗೌರವಿಸಲಾಯಿತು.

ನಗರದ ಖಾಸಗಿ ಹೋಟೆಲ್ ನಲ್ಲಿ ನಡೆದ ಕಾರ್ಯಕ್ರಮವನ್ನು ಮಹಿಳಾ ಉದ್ಯಮಿ ಛಾಯಾ ನಂಜಪ್ಪ ಉದ್ಘಾಟಿಸಿ ಮಾತನಾಡಿ, ಮಹಿಳೆಯರು ಇಂದಿನ ದಿನಗಳಲ್ಲಿ ಎಲ್ಲಾ ಕ್ಷೇತ್ರದಲ್ಲಿಯೂ ಮುಂಚೂಣಿಯಲ್ಲಿದ್ದಾರೆ. ಆದರೆ, ಸಿಕ್ಕಿರುವ ಸ್ವಾತಂತ್ರ್ಯವನ್ನು ಹೆಚ್ಚಾಗಿ ಬಳಸಿಕೊಂಡು ಎಲ್ಲಾ ರಂಗದಲ್ಲಿಯೂ ಮೇಲಕ್ಕೆ ಬರಬೇಕಿದೆ. ಅಲ್ಲದೆ, ಮಹಿಳೆಯರ ಬೆಳವಣಿಗೆಗೆ ಸಾಕಷ್ಟು ಅವಕಾಶಗಳಿದ್ದು ಅವುಗಳ ಬಳಕೆ ಮಾಡಿಕೊಳ್ಳಬೇಕಿದೆ. ಜತೆಗೆ ಇಂದಿನ ಆಧುನಿಕತೆಗೆ ಅನುಗುಣವಾಗಿ ಮಹಿಳೆಯರು ಪ್ರಬುದ್ಧತೆ ಬೆಳೆಸಿಕೊಳ್ಳಬೇಕೆಂದರು. ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ನಿರ್ದೇಶಕಿ ಭಾರತಿ ಜಿ.ಭಟ್, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್, ಕರ್ನಾಟಕ ಮುಕ್ತ ವಿಶ್ವ ವಿದ್ಯಾನಿಲಯದ ಪ್ರಾಧ್ಯಾಪಕಿ ಡಾ.ಆರ್.ಎಚ್.ಪವಿತ್ರ, ಆಯುರ್ವೇದದ ವೈದ್ಯೆ ಡಾ.ರೂಪಿಣಿ ಇನ್ನಿತರರು ಉಪಸ್ಥಿತರಿದ್ದರು.




# ಹೆಗ್ಗೋಠಾರ ಸಹಕಾರ ಸಂಘದ ಚುನಾವಣೆ



ಚಾಮರಾಜನಗರ: ತಾಲೂಕಿನ ಹೆಗ್ಗೋಠಾರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘ ನಿಯಮಿತ ಚುನಾವಣೆ ಮುಂಬರುವ 5 ವರ್ಷಗಳಿಗೆ ನಡೆಸಲಾಯಿತು.

ಒಟ್ಟು 12 ನಿರ್ದೇಶಕರಿಗೆ ಚುನಾವಣೆ ನಡೆಸಲಾಯಿತು ಇದರಲ್ಲಿ 11ಸದಸ್ಯರಿಗೆ ಚುನಾವಣೆ ನಡೆಸಲಾಯಿತು ಹಾಗೂ ಇದರಲ್ಲಿ ಒಬ್ಬರು ಅಭ್ಯರ್ಥಿ ಅವಿರೋಧವಾಗಿ ಆಯ್ಕೆ ಯಾಗುವ ಮುಖಾಂತರ ನೂತನವಾಗಿ ಕಾಂಗ್ರೆಸ್ ಬೆಂಬಲಿತ ಆಡಳಿತ ಸದಸ್ಯರು ಜಯಗಳಿಸುವ ಮುಖಾಂತರ ತನ್ನ ತೆಕ್ಕೆಗೆ ಪಡೆದುಕೊಂಡಿದ್ದೆ .

ಈ ಸಂದರ್ಭದಲ್ಲಿ ನೂತನ ನಿರ್ದೇಶಕರಾಗಿ ಆಯ್ಕೆ ಯಾವ ದುಂಡು ಮಾದಯ್ಯ ಮಾತನಾಡಿ ಎಲ್ಲಾ ಹಾಲು ಉತ್ಪಾದಕರ ಸಹಕಾರಿ ಸಂಘದ ಸದಸ್ಯರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತಿದ್ದೇನೆ ಎಂದರು. ಈ ನಿಮ್ಮ ಸಹಕಾರಿ ಸಂಘದಿಂದ ಅತ್ಯುತ್ತಮವಾಗಿ ಹಾಲು ಉತ್ಪಾದಕರ ಸಹಕಾರ ಸಂಘದ ಅಭಿವೃದ್ಧಿಗೆ ಪೂರಕವಾಗಿ ದುಡಿಯುವುದರ ಜೊತೆಗೆ ರೈತರಿಗೆ ಸಕಲ ರೀತಿಯಲ್ಲಿ ಎಲ್ಲಾ ಸೌಲಭ್ಯ ನೀಡುವುದಾಗಿ ತಿಳಿಸಿದರು. ರೈತರಿಗೆ ಹೈನುಗಾರಿಕೆಯಲ್ಲಿ ಮುಂದು ವರಿಯಯಲು ಸಹಕಾರ ನೀಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ನಿರ್ದೇಶಕರಾದ ನಂಜುಂಡಸ್ವಾಮಿ ಪುಟ್ಟಮಲ್ಲಪ್ಪ ಗುರುಮಲ್ಲಪ್ಪ ಮಲ್ಲೇಶ್ ಎಚ್ಚಿ ಮಹೇಶ್ ಸುಬ್ಬಮ್ಮ ಚಿನ್ನಮ್ಮ ರಮೇಶ್ ಮಹೇಶ್ ಎಂ ಪಾಪಣ್ಣ ನಾಯಕ ಹಾಗೂ ರಿಟರ್ನಿಂಗ್ ಆಫೀಸರ್ ನಾಗೇಶ್ ಮತ್ತು ಮುಖಂಡರುಗಳು ಇದ್ದರು.

# ಗೃಹಬಳಕೆ ಸಿಲಿಂಡರ್ ವಶ

ಗುಂಡ್ಲುಪೇಟೆ: ತಾಲೂಕಿನ ಮೂಳೆಹೊಳೆ ಚೆಕ್ ಪೋಸ್ಟ್‌ನಿಂದ ಸುಲ್ತಾನ್ ಬತ್ತೇರಿ ರಸ್ತೆಯ ಮೂಲಕ ಗುಂಡ್ಲುಪೇಟೆ ಪಟ್ಟಣದ ವ್ಯಾಪ್ತಿಗೆ ಬರುವ ಸುಮಾರು 15 ಹೋಟೆಲ್ ಹಾಗೂ ರೆಸ್ಟೋರೆಂಟ್‌ಗಳ ಮೇಲೆ ಆಹಾರ ಇಲಾಖೆ ಅಧಿಕಾರಿಗಳು ಶನಿವಾರ ದಿಢೀರ್ ದಾಳಿ ನಡೆಸಿ ಪರೀಶೀಲನೆ ನಡೆಸಿದರು.

ಆಹಾರ ಶಿರಸ್ತೇದಾರ್ ಅರವಿಂದ್ ಹಾಗೂ ಆಹಾರ ನಿರೀಕ್ಷಕಿ ಪೂರ್ಣಿಮಾ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ, ಹೋಟೆಲ್‌ಗಳಲ್ಲಿ ವಾಣಿಜ್ಯ ಸಿಲಿಂಡರ್‌ಗಳ ಬದಲಿಗೆ ನಿಯಮ ಬಾಹಿರವಾಗಿ ಗೃಹಬಳಕೆಯ ಸಿಲಿಂಡರ್‌ಗಳನ್ನು ಬಳಸುತ್ತಿರುವುದು ಕಂಡುಬಂದಿದೆ. ಕೆಲವು ಕಡೆ ಸೌದೆ ಒಲೆಗಳನ್ನು ಬಳಸುತ್ತಿರುವುದೂ ಸಹ ಅಧಿಕಾರಿಗಳ ಗಮನಕ್ಕೆ ಬಂದಿದೆ.

**ಹೋಟೆಲ್ ಮಾಲೀಕರ ವಿರುದ್ಧ ಪ್ರಕರಣ:** ಪರಿಶೀಲನೆ ವೇಳೆ ಗೃಹಬಳಕೆಯ ಸಿಲಿಂಡರ್ ಬಳಸಿ ಅಡುಗೆ ಮಾಡುತ್ತಿದ್ದ ಇಬ್ಬರು ಹೋಟೆಲ್ ಮಾಲೀಕರ ವಿರುದ್ಧ ಕರ್ನಾಟಕ ಅಗತ್ಯ ವಸ್ತುಗಳ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.




ಈ ಪ್ರಕರಣದಲ್ಲಿ ಮಹದೇವಸ್ವಾಮಿ: ಹೊನ್ನೇಗೌಡನಹಳ್ಳಿ 'ಸವಿ ಕೆಫಿನ್ & ಡೇಟ್ಸ್' ಮಾಲೀಕರು. ಅಶ್ರಫ್: 'ಕರ್ನಾಟಕ ಬೇಕ್ಸ್' ಮಾಲೀಕರು. ಸಿಲಿಂಡರ್ ವಶ: ಇಂಡಿಯನ್ ಆಯಿಲ್ ಕಾರ್ಪೊರೇಷನ್ ಕಂಪನಿಗೆ ಸೇರಿದ ಮೂರು ಗೃಹಬಳಕೆ ಸಿಲಿಂಡರ್ ಗಳನ್ನು ಅಧಿಕಾರಿಗಳು ಜಪ್ತಿ ಮಾಡಿ ದ್ದಾರೆ. ಸುರಕ್ಷತಾ ದೃಷ್ಟಿಯಿಂದ ಹಾಗೂ ಮುಂದಿನ ಆದೇಶ ಬರುವವರೆಗೂ ಈ ಸಿಲಿಂಡರ್‌ಗಳನ್ನು ಮೇಲುಕಾಮನಹಳ್ಳಿಯ ನಮ್ಮ ಸಂಘದ ಸುಪರ್ದಿಗೆ ನೀಡಿ ಸ್ವೀಕೃತಿ ಪಡೆಯಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಾಣಿಜ್ಯ ಉದ್ದೇಶಕ್ಕೆ ಗೃಹಬಳಕೆ ಸಿಲಿಂಡರ್ ಬಳಸದಂತೆ ಎಲ್ಲಾ ಹೋಟೆಲ್ ಮಾಲೀಕರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಯಿತು.

# ಏ.10ರಿಂದ ಮಕ್ಕಳ ಬೇಸಿಗೆ ಶಿಬಿರ

ಮೈಸೂರು: ರಂಗಾಂತರಂಗ ಮೈಸೂರು ಸಂಸ್ಥೆ ವತಿಯಿಂದ ಕಲರವ ಶೀರ್ಷಿಕೆಯ ಮಕ್ಕಳ ಬೇಸಿಗೆ ಶಿಬಿರ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ಕೆ.ಎಂ. ಕೀರ್ತಿರಾಜ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶಿಬಿರದಲ್ಲಿ ನಾಟಕ, ಅಭಿನಯ ಪೂರ್ವ ಸಿದ್ಧತೆ, ರಂಗಗೀತೆ, ಜನಪದ ಹಾಡು, ಭಾಷಾ ಕೌಶಲ್ಯ, ನೃತ್ಯ, ನವರಸ, ವಚನ, ಒಗಟು, ವಿಕಸನ ಕೌಶಲ್ಯ ಕಲಿಸಲಾಗುವುದು. ಶಿಬಿರ ಏ.10 ರಿಂದ ಮೇ 10 ರವರೆಗೆ ಕುವೆಂಪುನಗರ ಕೆ ಬ್ಲಾಕ್ ಆದಿ ಚುಂಚನಗಿರಿ ರಸ್ತೆಯ ಕಾವೇರಿ ವಿದ್ಯಾ ಸಂಸ್ಥೆಯಲ್ಲಿ ನಡೆಯಲಿದೆ. ಶುಲ್ಕ 3800 ರೂ.ಗಳಾಗಿದ್ದು, ಹೆಚ್ಚಿನ ಮಾಹಿತಿಗೆ ದೂ. 97399 19004 ನ್ನು ಸಂಪರ್ಕಿಸಬಹುದಾಗಿದೆ ಎಂದರು. ಸಾಹಿತಿ ನಾ.ದಿವಾಕರ್, ಗೌರಿ ಶಂಕರ್, ನಟರಾಜ್ ಇದ್ದರು.




ಶ್ರೀಬಸವ ಹರಳಯ್ಯ ಸ್ವಾಮೀಜಿ ನೇತೃತ್ವದಲ್ಲಿ ಬೃಹತ್ ಮೆರವಣಿಗೆ

# ಒಳಮೀಸಲಾತಿ ಜಾರಿಗೆ ಒತ್ತಾಯಿಸಿ ಮಾ.26ರಂದು ಪ್ರತಿಭಟನೆ

ಚಾಮರಾಜನಗರ, ಒಳಮೀಸಲಾತಿ ಜಾರಿಗೆ ಒತ್ತಾಯಿಸಿ ಡಾ.ಬಾಬುಜಗಜೀವನರಾಂ ಸಂಘಟನೆಗಳ ಒಕ್ಕೂಟ ಹಾಗೂ ಮಾದಿಗ ಸಂಘಟನೆಗಳ ಒಕ್ಕೂಟ ವತಿಯಿಂದ ಮಾ.26 ರಂದು ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಜಿಲ್ಲಾ ಗೌರವಾಧ್ಯಕ್ಷ ಬಸವನಪುರ ರಾಜಶೇಖರ ಹೇಳಿದರು.




ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಸಂಪೂರ್ಣ ಒಳಮೀಸಲಾತಿ ಜಾರಿಗೆ ಒತ್ತಾಯಿಸಿ ಈಗಾಗಲೇ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಸಮುದಾಯದ ವತಿಯಿಂದ ಹೋರಾಟ ಮಾಡಲಾಗಿದ್ದು, ಮಾ.27 ರ ವಿಶೇಷ ಸಚಿವ ಸಂಪುಟದಲ್ಲಿ ಸಂಪೂರ್ಣ ಒಳಮೀಸಲಾತಿ ಜಾರಿ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಒತ್ತಾಯ ಮಾಡಲಾಗಿದೆ. ಇದು ನಮ್ಮ ಅಳಿವು– ಉಳಿವಿನ ಹೋರಾಟವಾಗಿದೆ.

ಅಂದು ಚಿತ್ರದುರ್ಗ ಜಿಲ್ಲೆಯ ಶ್ರೀಮಹಾಶಿವಶರಣ ಹರಳಯ್ಯ ಮಠದ ಪರಮಪೂಜ್ಯ ಶ್ರೀಬಸವ ಹರಳಯ್ಯ ಸ್ವಾಮೀಜಿ ಅವರ ನೇತೃತ್ವದಲ್ಲಿ ಬೆಳಗ್ಗೆ 10.30ಕ್ಕೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಿಂದ ಪ್ರತಿಭಟನಾ ಮೆರವಣಿಗೆ ಹೊರಟು ದೊಡ್ಡಂಗಡಿ, ಚಿಕ್ಕಂಗಡಿ ಬೀದಿ, ಸಂತೇಮರಳ್ಳಿ ವೃತ್ತ, ಪಚ್ಚಪ್ಪ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ನಂತರ ಮೆರವಣಿಗೆಯು .ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಒಳಮೀಸಲಾತಿ ವಿಧೇಯಕಕ್ಕೆ ಈಗಾಗಲೇ ರಾಜ್ಯಪಾಲರ ಅನುಮೋದನೆ ದೊರೆತ್ತಿದೆ. ಆದರೆ, ಒಳಮೀಸಲಾತಿ ಅನ್ವಯಿಸದೇ 56 ಸಾವಿರಕ್ಕೂ ಹೆಚ್ಚು ಹುದ್ದೆಗಳನ್ನು ಭರ್ತಿ ಮಾಡುವ ಸಚಿವ ಸಂಪುಟದ ತೀರ್ಮಾನವು ಸಂವಿಧಾನ ಹಾಗೂ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. 56,462 ಖಾಲಿ ಹುದ್ದೆಗಳ ಭರ್ತಿಗೆ ಶೇ.15 ಒಳಮೀಸಲಾತಿ ಜಾರಿಗೆ ಆದೇಶ ಹೊರಡಿಸಬೇಕು. ಒಳಮೀಸಲಾತಿ ತಪ್ಪಿಸುವ ಸರ್ಕಾರದ ಆದೇಶವನ್ನು ತಕ್ಷಣ ಹಿಂಪಡೆಯಬೇಕು. ನೇಮಕಾತಿ ಸೇರಿದಂತೆ ಎಲ್ಲ ಹಂತಗಳಲ್ಲಿ ಒಳಮೀಸಲಾತಿಯನ್ನು ಕಡ್ಡಾಯಗೊಳಿಸಬೇಕು ಎಂದು ಒತ್ತಾಯಿಸಿದರು.

ಅಲ್ಲದೇ ರಾಜ್ಯದ ಮೀಸಲಾತಿ ವ್ಯವಸ್ಥೆಯನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸುವ ಅಗತ್ಯ ಕ್ರಮ ಕೈಗೊಳ್ಳಬೇಕು. ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕ ಮೀಸಲಾತಿ ನೀಡಬೇಕು. ರಾಜಕೀಯ ಚುನಾವಣೆಗಳಲ್ಲಿ ಸಂಪೂರ್ಣ ಒಳಮೀಸಲಾತಿ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಅಂದು ನಡೆಯುವ ಬೃಹತ್ ತಿಭಟನೆಗೆ ಸಮುದಾಯದವರು ಸ್ವಯಂಪ್ರೇರಿತರಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಡಾ.ಬಾಬುಜಗಜೀವನರಾಂ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಹೆಚ್.ಹೆಚ್.ನಾಗರಾಜು, ಬ್ಯಾಂಕ್ ಬಸವರಾಜು ಮಾತನಾಡಿದರು.ಪತ್ರಿಕಾಗೋಷ್ಠಿಯಲ್ಲಿ ಒಕ್ಕೂಟದ ಜಿಲ್ಲಾ ಉಪಾಧ್ಯಕ್ಷ ಮೂಡಹಳ್ಳಿ ಮೂರ್ತಿ, ಹಸಗೂಲಿ ಸಿದ್ದಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಶಿವಕುಮಾರ್, ಮುಖಂಡರಾದ ಎಲ್ ಐಸಿ ರಾಜಣ್ಣ, ಕೆಸ್ತೂರುಮರಪ್ಪ ಹಾಜರಿದ್ದರು.

# ಯೂಥ್ ಮೊಮೆಂಟ್ ಸಂಸ್ಥೆಯ ಸೇವೆ ಶ್ಲಾಘನೀಯ




ಹನೂರು: ಶಿಕ್ಷಣದ ಜೊತೆ ಉತ್ತಮ ಆರೋಗ್ಯ ಕಲ್ಪಿಸುವ ಕಾಳಜಿಯಿಂದ ಸ್ಕ್ಯಾನಿಂಗ್ ಸೆಂಟರ್ ತೆರೆಯುತ್ತಿರುವ ಸ್ವಾಮಿ ವಿವೇಕಾನಂದ ಯೂಥ್ ಮೊಮೆಂಟ್ ಸಂಸ್ಥೆಯ ಸೇವೆ ಶ್ಲಾಘನೀಯವಾದುದು ಎಂದು ಮಲೆ ಮಹದೇಶ್ವರ ಬೆಟ್ಟ ಸಾಲೂರು ಮಠದ ಪೀಠಾಧ್ಯಕ್ಷ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ತಿಳಿಸಿದರು.

ಸ್ವಾಮಿ ವಿವೇಕಾನಂದ ಯೂಥ್ ಮೊಮೆಂಟ್ ಸಂಸ್ಥೆಯು ಸೀಮನ್ ಟೆಕ್ನಾಲಜಿ ಸಂಸ್ಥೆಯ ಆರ್ಥಿಕ ನೆರವು ಹಾಗೂ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದಲ್ಲಿ ನೂತನವಾಗಿ ಪ್ರಾರಂಭಿಸಲಾಗಿರುವ ಸ್ಕ್ಯಾನಿಂಗ್ ಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣ ಮತ್ತು ಆರೋಗ್ಯ ಪ್ರತಿಯೊಬ್ಬರ ವ್ಯಕ್ತಿಗೂ ಅಗತ್ಯ ಮೂಲಭೂತ ಅವಶ್ಯಕಗಳಾಗಿವೆ. ಆದ್ದರಿಂದ ಮಳೆ ಮಹದೇಶ್ವರ ಬೆಟ್ಟದ ಕಾಡಂಚಿನ ಗ್ರಾಮಗಳ ಜನರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿವಹಿಸಿ.

ಮಕ್ಕಳನ್ನು ಆರೋಗ್ಯದಿಂದ ಬೆಳೆಸುವಲ್ಲಿ ತಾಯಂದಿರ ಪಾತ್ರ ಬಹಳ ಮುಖ್ಯ. ಗರ್ಭಿಣಿ ಸ್ತ್ರೀಯರ ಅನುಕೂಲಕ್ಕಾಗಿ ಇಂದು ಸ್ಕ್ಯಾನಿಂಗ್ ಕೇಂದ್ರವನ್ನು ತೆರೆಯಲಾಗಿದೆ. ಕಾಡಂಚಿನ ಗ್ರಾಮಗಳ ಜನರಿಗೆ ಆರೋಗ್ಯ ಸೇವೆ ಒದಗಿಸಲು ಮುಂದಾಗಿರುವ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಗೆ ಸಾರ್ವಜನಿಕರು ಸಹಕರಿಸಬೇಕು ಹಾಗೂ ಮಹಿಳೆಯರು ಈ ಕೇಂದ್ರದ ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಇಡೀ ವೇಳೆ ಮಾತನಾಡಿದ ಸ್ವಾಮಿ ವಿವೇಕಾನಂದ ಯೂಥ್ ಮೊಮೆಂಟ್ ನ ಯೋಜನಾ ನಿರ್ದೇಶಕರಾದ ಡಾಕ್ಟರ್ ಪುಷ್ಪಲತಾ , ಮಲೆ ಮಹದೇಶ್ವರ ಬೆಟ್ಟದ ಸುತ್ತಮುತ್ತ ಇರುವ ಗ್ರಾಮಗಳಲ್ಲಿ ಸಂಸ್ಥೆಯು ಕಾರ್ಯ ನಿರ್ವಹಿಸುವ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರ ಮತ್ತು ಮಕ್ಕಳ ಆರೋಗ್ಯದ ಸವಾಲುಗಳನ್ನು ಗಮನಿಸಿ ಸ್ಕ್ಯಾನಿಂಗ್ ಕೇಂದ್ರ ತೆರೆಯಲಾಗಿದೆ. ತಾಯಿಯ ಗರ್ಭದಲ್ಲಿನ ಮಗುವಿನ ಬೆಳವಣಿಗೆಯನ್ನು ಗಮನಿಸಿ ಸೂಕ್ತ ಚಿಕಿತ್ಸೆ ನೀಡುವ ಉದ್ದೇಶದಿಂದ ಸ್ಕ್ಯಾನಿಂಗ್ ವರದಿ ಮಹತ್ವದ್ದಾಗಿದೆ. ಈ ಭಾಗದ ಗರ್ಭಿಣಿ ಮಹಿಳೆಯರ ಅನುಕೂಲಕ್ಕಾಗಿ ಈ ಕೇಂದ್ರವನ್ನು ತೆರೆಯಲಾಗಿದೆ. ಇದನ್ನು ಅನುಷ್ಠಾನ ಗೊಳಿಸುವಲ್ಲಿ ಸಹಕರಿಸಿದ ವಿವಿಧ ಸಂಸ್ಥೆ ಮತ್ತು ಇಲಾಖೆಗಳಿಗೆ ಅಭಿನಂದಿಸುತ್ತೇನೆ. ಸಂಸ್ಥೆಯ ಸೇವಾಕಾರ್ಯಗಳಿಗೆ ಗ್ರಾಮಸ್ಥರ ಸಹಕಾರ ಸದಾ ಇರಲಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಡಾ.ಕ್ಟರ್ ಬಾಲಕೃಷ್ಣ ಶೆಟ್ಟಿ, ಸೀಮನ್ಸ್ ಟೆಕ್ನಾಲಜಿಯ ಹಿರಿಯ ವ್ಯವಸ್ಥಾಪಕರಾದ ಕರಿಷ್ಮಾ ಗುಪ್ತ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾ ಮಹೇಂದ್ರ, ಪ್ರಸೂತಿತಜ್ಞರಾದ ಡಾ. ಪದ್ಮಜ, ಸಂಸ್ಥೆಯ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಕ್ಷಯ ರೋಗ ನಿರ್ಮೂಲನೆ ಜಾಥಾ




ಮೈಸೂರು: ವಿಶ್ವ ಕ್ಷಯ ರೋಗ ದಿನಾಚರಣೆಯ ಪ್ರಯುಕ್ತ ಮೈಸೂರು ಮೆಡಿಕಲ್ ಕಾಲೇಜು ಮೆಡಿಸಿನ್ ಡಿಪಾರ್ಟ್ಮೆಂಟ್ ಐಎಂಎ ಸಹಭಾಗಿತ್ವದಲ್ಲಿ ಜಿಲ್ಲಾ ಮಟ್ಟದ ಕ್ಷಯ ರೋಗ ನಿರ್ಮೂಲನೆಗೆ ಅರಿವಿನ ಜಾಥಾವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಭಾಗೀಯ ಸಹ ನಿರ್ದೇಶಕ ಡಾ.ಪ್ರಕಾಶ್ ಪುರಾಣಿಕ್ ಚಾಲನೆ ನೀಡಿದರು.

ಸದರಿ ಜಾಥಾವು "ಹೌದು, ಭಾರತದ ನೇತೃತ್ವದಲ್ಲಿ, ಜನರ ಶಕ್ತಿಯೊಂದಿಗೆ ನಾವು ಕ್ಷಯರೋಗವನ್ನು ನಿರ್ಮೂಲನೆ ಮಾಡಬಹುದು " ಎಂಬ ಘೋಷ ವಾಕ್ಯದೊಂದಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ವೃತ್ತದಿಂದ ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿಯ ವೈದ್ಯರ ಭವನದವರೆಗೆ ಸಂಚರಿಸಿತು. ಬಳಿಕ ವೇದಿಕೆ ಕಾರ್ಯಕ್ರಮದ ಉದ್ಘಾಟನೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಭಾಗೀಯ ಅಪರ ನಿರ್ದೇಶಕ ಡಾ.ಮಲ್ಲಿಕಾ ನೆರವೇರಿಸಿದರು. ಡಬ್ಲ್ಯು ಎಚ್‌ಓ ಕನ್ಸಲ್ಟೆಂಟ್ ಡಾ.ರಾಜೀವ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕುಮಾರ್ ಸ್ವಾಮಿ, ಜೆಎಸ್ ಎಸ್ ಮೆಡಿಕಲ್ ಕಾಲೇಜಿನ ಡಾ. ನಯನ, ಫೇಮ್ ಮೆಡಿಕಲ್ ಕಾಲೇಜ್ ನ ಮೆಡಿಸಿನ್ ಎಚ್‌ಓಡಿ ಡಾ.ಸುದರ್ಶನ್ ಕ್ಷಯಮುಕ್ತ ಗ್ರಾಮ ಪಂಚಾಯತ್ ಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಿದರು. ಎಸ್ ವಿವೈಎಂ ಸಹಭಾಗಿತ್ವದಲ್ಲಿ ಕ್ಷಯ ಸೋಂಕಿತ ಮಕ್ಕಳಿಗೆ ಪೌಷ್ಟಿಕ ಆಹಾರದ ಕಿಟ್ ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ಮಹಮ್ಮದ್ ಸಿರಾಜ್ ಅಹಮದ್ ಇದ್ದರು.

# ಆರೋಗ್ಯ ಕ್ಷೇತ್ರಕ್ಕೆ ಸಿದ್ದರಾಮಯ್ಯ ಕೊಡುಗೆ ಅಪಾರ

### ಜಯದೇವ ಹೃದ್ರೋಗ ಮತ್ತು ವಿಜ್ಞಾನ ಸಂಸ್ಥೆಯ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ್ ಅಭಿಮತ

ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವ–ಇಚ್ಛಾಶಕ್ತಿಯಿಂದ ಮೈಸೂರು ಹಾಗೂ ಸುತ್ತಮುತ್ತಲ 5 ಜಿಲ್ಲೆಗಳ ಜನರಿಗೆ ಅನುಕೂಲವಾಗಲು ಹೆಚ್ಚು ಆಸ್ಪತ್ರೆಗಳನ್ನು ನಿರ್ಮಿಸುವುದರ ಮೂಲಕ ಆರೋಗ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಜಯದೇವ ಹೃದ್ರೋಗ ಮತ್ತು ವಿಜ್ಞಾನ



ಸಂಸ್ಥೆಯ ವೈದ್ಯಕೀಯ ಅಧೀಕ್ಷಕ ಡಾ. ಕೆ.ಎಸ್. ಸದಾನಂದ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ಜಯದೇವ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ, ಟ್ರಾಮಾ ಸೆಂಟರ್, ಸೂಪರ್‌ಸ್ಪೆಷಾಲಿಟಿ ಆಸ್ಪತ್ರೆ, ಆಯುರ್ವೇದ ಆಸ್ಪತ್ರೆ, ನೆಫ್ರೊಯುರೋಲಜಿ ಆಸ್ಪತ್ರೆ, ತುಳಸಿದಾಸಪ್ಪ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆಗಳನ್ನು ನಿರ್ಮಿಸಿ ಸಾರ್ವಜನಿಕರಿಗೆ ತುಂಬ ಅನುಕೂಲ ಮಾಡಿಕೊಟ್ಟಿದ್ದಾರೆ. ಇದಲ್ಲದೆ ರಾಜ್ಯಾದ್ಯಂತ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಮೆಡಿಕಲ್ ಕಾಲೇಜು, ಡಯಾಲಿಸಿಸ್ ಕೇಂದ್ರಗಳನ್ನು ನಿರ್ಮಿಸಿ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚು ಒತ್ತನ್ನು ನೀಡಿದ್ದಾರೆ.

ಪದ್ಮಶ್ರೀ ಡಾ.ಸಿ.ಎನ್. ಮಂಜುನಾಥ್ ಜಯದೇವ ಆಸ್ಪತ್ರೆಯ ನಿರ್ದೇಶಕರಾಗಿದ್ದ ಅವಧಿಯಲ್ಲಿ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯ ಮೈಸೂರಿಗೆ 400 ಹಾಸಿಗೆ ಸಾಮರ್ಥ್ಯದ ಹೃದ್ರೋಗ ಆಸ್ಪತ್ರೆ ನಿರ್ಮಿಸಿದ್ದರು. ಆದರೆ ಹೃದಯರೋಗಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಡಾ. ಬಿ.ದಿನೇಶ್ ನಿರ್ದೇಶಕರಾಗಿರುವ ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ 180 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿ, ಇನ್ನೂ 200 ಹಾಸಿಗೆ ಸಾಮರ್ಥ್ಯವನ್ನು ಹೆಚ್ಚಿಸಲು ಕ್ರಮ ಕೈಗೊಂಡಿರುವುದು ಸ್ವಾಗತಾರ್ಹವಾಗಿದೆ.

ಬಜೆಟ್‌ನಲ್ಲಿ ಬಿಡುಗಡೆಯಾಗಿರುವ 180 ಕೋಟಿಯಿಂದ ಕ್ಯಾಂಟೀನ್ ಕಟ್ಟಡದ ಮೇಲೆ ಆಸ್ಪತ್ರೆ ನಿರ್ಮಿಸಿ, ಹಳೇ ಕಟ್ಟಡದಿಂದ ಲಿಂಕ್‌ಮಾಡಿ, ಮಕ್ಕಳ ಹೃದಯ ಚಿಕಿತ್ಸೆ, ವ್ಯಾಸ್‌ಕ್ಯೂಲರ್ ಸರ್ಜರಿ, ಎಲೆಕ್ಟ್ರೋ ಫಿಸಿಯೋಥೆರಫಿ ವಿಭಾಗ, 2 ಕ್ಯಾತ್‌ಲ್ಯಾಬ್, ಐ.ಸಿ.ಯು ಮಾಡಬಹುದು ಎಂದ ಅವರು, ಬದಲಾದ ಜೀವನ ಶೈಲಿಯಿಂದ ಹೃದಯ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಪ್ರತಿದಿನ 800 ರಿಂದ 900 ಜನ ಹೊರ ರೋಗಿಗಳು ಅಲ್ಲದೆ 100 ಜನ ತುರ್ತುಚಿಕಿತ್ಸೆಗೆ ಆಸ್ಪತ್ರೆಗೆ ಬರುತ್ತಾರೆ. ಪ್ರಸ್ತುತ ಪ್ರತಿದಿನ 60 ರಿಂದ 70 ಜನರಿಗೆ ಆಂಜಿಯೋಗ್ರಾಮ್, ಆಂಜಿಯೋಪ್ಲಾಸ್ಟಿ ಮಾಡುತ್ತೇವೆ. 4 ರಿಂದ 5 ಜನರಿಗೆ ತೆರೆದ ಹೃದಯ ಚಿಕಿತ್ಸೆ ಮಾಡಲಾಗುತ್ತಿದೆ. ಆದರೂ ಐ.ಸಿ.ಸಿ.ಯು.ನಲ್ಲಿ ಬೆಡ್ ಸಾಲದೆ ಸ್ಟ್ರೆಚರ್‌ಮೇಲೆ ಹಾಕಿಕೊಂಡು ಕಡಿಮೆ ದರದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುತ್ತಿದ್ದೇವೆ. ಇದಕ್ಕೆ ಪರಿಹಾರವಾಗಿ ಮುಖ್ಯಮಂತ್ರಿಗಳು ಹೆಚ್ಚುವರಿಯಾಗಿ 200 ಹಾಸಿಗೆ ಸಾಮರ್ಥ್ಯ ಹೆಚ್ಚಿಸಲು 180 ಕೋಟಿ ಬಿಡುಗಡೆ ಮಾಡಿರುವುದಕ್ಕೆ ಅಭಿನಂದನೆ ತಿಳಿಸಿದರು.

# 2030ರೊಳಗೆ ಟಿಬಿ ಮುಕ್ತ ಭಾರತ

## ಆರೋಗ್ಯಾಧಿಕಾರಿ ಡಾ.ಆಲೀಂ ಪಾಷಾ ಆಶಯ




ಗುಂಡ್ಲುಪೇಟೆ: ವಿಶ್ವ ಕ್ಷಯರೋಗ ದಿನಾಚರಣೆಯನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಆಲೀಂ ಪಾಷಾ ತಿಳಿಸಿದರು.

ವಿಶ್ವ ಕ್ಷಯ ರೋಗ ದಿನಾಚರಣೆಯಲ್ಲಿ ಜನಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಡಾ.ಉರಗ ಕಲ ಅಲೀಮ್ ಪಾಷಾ, ಕ್ಷಯರೋಗದ ಬಗ್ಗೆ ಜಾಗೃತಿ ಮೂಡಿಸುವುದು, ಕಳಂಕವನ್ನು ಕಡಿಮೆ ಮಾಡುವುದು ಮತ್ತು 2030 ರೊಳಗೆ ಟಿ.ಬಿ. ಮುಕ್ತ ಭಾರತವನ್ನು ಸಾಧಿಸುವುದು ನಮ್ಮೆಲ್ಲರ ಗುರಿ ಆಗಿದ್ದು ದೇಶದಾದ್ಯಂತ ಟಿ.ಬಿ ತಪಾಸಣಾ ಶಿಬಿರಗಳು ಮತ್ತು ಉಚಿತ ಚಿಕಿತ್ಸಾ ಅಭಿಯಾನಗಳನ್ನು ಆಯೋಜಿಸಿರಲಾಗಿರುತ್ತದೆ ಅದರ ಸದುಪಯೋಗ ಪಡೆದುಕೊಳ್ಳುವಂತೆ ಸಲಹೆ ನೀಡಿದರು. ಈ ದಿನವು 1882 ರಲ್ಲಿ ಡಾ. ರಾಬರ್ಟ್ ಕೋಚ್ ಮೈಕೋ ಬ್ಯಾಕ್ಟಿರಿಯಂ ಟ್ಯೂಬರ್ಕ್ಯುಲೋಸಿಸ್ ಬ್ಯಾಕ್ಟೀರಿಯಾವನ್ನು ಕಂಡು ಹಿಡಿದ ದಿನದ ನೆನೆಪಿಗಾಗಿ ಈ ದಿನವನ್ನು ಆಚರಿಸಲಾಗುತ್ತದೆ ಎಂದರು.

2026ರ ಘೋಷಣೆ "ಹೌದು! ನಾವು ಕ್ಷಯರೋಗವನ್ನು ಅಂತ್ಯಗೊಳಿಸಬಹುದು: ಭಾರತದ ನೇತೃತ್ವದಲ್ಲಿ ಜನರ ಭಾಗವಹಿಸುವಿಕೆಯೊಂದಿಗೆ" ಕ್ಷಯರೋಗ ದಿನಾಚರಣೆ ಆಚರಿಸಲಾಯಿತು ಎಂದರು.

2 ವಾರಕ್ಕಿಂತ ಹೆಚ್ಚು ಕಾಲ ಕೆಮ್ಮು, ಸಂಜೆ ವೇಳೆ ಜ್ವರ ಬರುವುದು, ರಾತ್ರಿ ಬೆವರುವುದು, ತೂಕ ಕಡಿಮೆಯಾಗುವುದು ಮತ್ತು ಹಸಿವು ಆಗದೇ ಇರುವುದು, ಕಫದಲ್ಲಿ ರಕ್ತ ಬೀಳುವುದು ಇಂತಹ ಲಕ್ಷಣಗಳು ಕಂಡುಬಂದಲ್ಲಿ ಹತ್ತಿರದ ಸಾರ್ವಜನಿಕ ಆಸ್ಪತ್ರೆಗೆ ತೋರಿಸುವಂತೆ ತಿಳಿಸಿದರು.

ತಾಲ್ಲೂಕಿನಲ್ಲಿ 2025 ನೇ ಸಾಲಿನಲ್ಲಿ 9257 ಜನರಿನ್ನು ಕ್ಷಯ ರೋಗದ ತಪಾಸಣೆಗೆ ಒಳಪಡಿಸಿದ್ದು 107 ಜನರಲ್ಲಿ ಕ್ಷಯ ರೋಗವನ್ನು ಪತ್ತೆ ಹಚ್ಚಿ ಚಿಕಿತ್ಸೆಯನ್ನು ನೀಡಲಾಗಿರುತ್ತದೆ , ಕ್ಷಯ ರೋಗವು ತಾಲೂಕಿನಲ್ಲಿ ಗಣನೀಯವಾಗಿ ಕಡಿಮೆಯಾಗುತ್ತಿದ್ದು 2023ರಲ್ಲಿ 135, 2024 ರಲ್ಲಿ 125 ಹಾಗೂ 2025 ರಲ್ಲಿ 107 ಜನರಲ್ಲಿ ಕ್ಷಯ ರೋಗ ಪತ್ತೆ ಹಚ್ಚಲಾಗಿ ಚಿಕಿತ್ಸೆ ನೀಡಲಾಗಿರುತ್ತದೆ. ತಾಲ್ಲೂಕಿನ 186 ಗ್ರಾಮಗಳ ಪೈಕಿ 60 ಗ್ರಾಮ ಗಳಲ್ಲಿ ಕಳೆದ ಮೂರು ವರ್ಷಗಳಿಂದ ಯಾವುದೇ ಕ್ಷಯರೋಗ ಪತ್ತೆ ಆಗಿರುವುದಿಲ್ಲ ಹಾಗೂ ಈ ಗ್ರಾಮಗಳು ಸಂಪೂರ್ಣ ಕ್ಷಯ ಮುಕ್ತ ಗ್ರಾಮಗಳಾಗಿರುತ್ತವೆ.

ತಾಲ್ಲೂಕಿನ 34 ಗ್ರಾಪಂ ಗಳಲ್ಲಿ ಕ್ಷಯಮುಕ್ತ ಗ್ರಾಮ ಪಂಚಾಯಿತಿ ಮಾಡಬೇಕೆಂದು ಪಣತೊಡಲಾಗಿದೆ ಎಂದರು.

ಎಲ್ಲರೂ ಒಗ್ಗೂಡಿ ಕ್ಷಯರೋಗದ ವಿರುದ್ಧ ಹೋರಾಡೋಣ ಕ್ಷಯಮುಕ್ತ ಗುಂಡ್ಲುಪೇಟೆ ತಾಲ್ಲೂಕನ್ನಾಗಿ ಮಾಡೋಣ. ಕ್ಷಯದ ಬಗ್ಗೆ ಭಯ ಬೇಡ, ಕ್ಷಯ ರೋಗವನ್ನು ಗುಣಪಡಿಸಬಹುದು ಎಂದರು. ಈ ಸಂಧರ್ಭದಲ್ಲಿ ಸಾರ್ವಜನಿಕ ಆಸ್ಪತ್ರೆ ವ್ಯದ್ಯಾಧಿಕಾರಿಗಳಾದ ಡಾ. ಮಂಜುನಾಥ್ ಹಾಗೂ ಡಾ. ಅರುಣ್, ತಾಲ್ಲೂಕಿನ ಸಿಬ್ಬಂದಿ ನವೀನ್, ದೀಪಶ್ರೀ, ತುಳಸಿಮಣಿ, ರಾಘವೇಂದ್ರ, ಭವ್ಯ, ಪುಟ್ಟಸ್ವಾಮಿ, ಪದ್ಮ ಹಾಗೂ ತಾಲ್ಲೂಕಿನ ಎಲ್ಲಾ ಸಮುದಾಯ ಅರೋಗ್ಯ ಅಧಿಕಾರಿಗಳು, ಪ್ರಾಥಮಿಕ ಅರೋಗ್ಯ ಸುರಕ್ಷಾ ಅಧಿಕಾರಿಗಳು ಮತ್ತು ಹಿರಿಯ ಮತ್ತು ಕಿರಿಯ ಅರೋಗ್ಯ ನಿರೀಕ್ಷಣ ಅಧಿಕಾರಿಗಳು ಹಾಜರಿದ್ದರು..

### ಕ್ಷಯಮುಕ್ತ ಗ್ರಾಪಂ ಪ್ರಶಸ್ತಿಗೆ ಆಯ್ಕೆ

**2023ನೇ ಸಾಲಿನಲ್ಲಿ 10 ಗ್ರಾಪಂ ಕ್ಷಯಮುಕ್ತ ಗ್ರಾಪಂ ಆಯ್ಕೆಯಾಗಿರುತ್ತದೆ. 2024ನೇ ಸಾಲಿನಲ್ಲಿ 19 ಗ್ರಾಪಂ ಕ್ಷಯಮುಕ್ತ ಗ್ರಾಪಂ ಆಯ್ಕೆಯಾಗಿರುತ್ತದೆ. 2025ನೇ ಸಾಲಿನಲ್ಲಿ 19 ಗ್ರಾಪಂ ಕ್ಷಯಮುಕ್ತ ಗ್ರಾಪಂ ಆಯ್ಕೆಯಾಗಿರುತ್ತದೆ ಎಂದು ತಿಳಿಸಿದರು. ಚಿನ್ನದ ಪದಕಕ್ಕೆ ಅರ್ಹತೆ ಹೊಂದಿರುವ ಗ್ರಾಪಂ ನೇನೇಕಟ್ಟೆ, ಪಡಗೂರು, ಶಿಂಡನಪುರ, ಬೇರಂಬಾಡಿ. ಬೆಳ್ಳಿ ಪದಕಕ್ಕೆ ಅರ್ಹತೆ ಹೊಂದಿರುವ ಗ್ರಾಪಂ ಅಗತಗೌಡನಹಳ್ಳಿ, ಬಲಚವಾಡಿ, ಹಂಗಳ, ಕನ್ನೇಗಾಲ, ಮಂಗಲ, ಶಿವಪುರ, ತೆರಕಣಾಂಬಿ, ಕಂಚಿನ ಪದಕಕ್ಕೆ ಅರ್ಹತೆ ಹೊಂದಿರುವ ಗ್ರಾಪಂಬೇಗೂರು, ಕೋಟೆಕೆರೆ, ಬೊಮ್ಮನಹಳ್ಳಿ, ಬೊಮ್ಮಲಾಪುರ, ಹುಂಡೀಪುರ, ಕೆಲಸೂರು, ವಡ್ಡಗೆರೆ ಆಯ್ಕೆಯಾಗಿರುತ್ತವೆ.**

# ಸಾಲ ವಿತರಿಸದ ಬ್ಯಾಂಕ್: ರೈತರ ಮುತ್ತಿಗೆ

ಮೈಸೂರು: ಜಿಲ್ಲೆಯ ಹುಣಸೂರು ತಾಲ್ಲೂಕಿನ ಧರ್ಮಾಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ರೈತರಿಗೆ ಸಾಲ ನೀಡದೆ ತೊಂದರೆ ಕೊಡುತ್ತಿದ್ದಾರೆ ಎಂದು ಆರೋಪಿಸಿ ರೈತರು ನಗರದ ನೆಹರೂ ವೃತ್ತದಲ್ಲಿರುವ ಎಂಸಿಡಿಸಿಸಿ ಬ್ಯಾಂಕ್ ಗೆ ಮುತ್ತಿಗೆ ಯತ್ನಿಸಿದ ಘಟನೆ ನಡೆಯಿತು.

ಧರ್ಮಾಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ವ್ಯಾಪ್ತಿಯ ಧರ್ಮಾಪುರ, ಹಳ್ಳದ ಕೊಪ್ಪಲು, ತರೀಕಲ್ಲು, ಶಿವಾಜಿನಗರ, ಮಲ್ಲೇಗೌಡನ ಕೊಪ್ಪಲು, ಸಂತೇಕೆರೆ ಕೋಡಿ, ಅಸ್ವಾಳು, ಬಸ್ತಿಮಾದನಹಳ್ಳಿ, ಸೋನಹಳ್ಳಿ, ಮಾರನಹಳ್ಳಿ, ಸೂಳೆಕೆರೆ ಕಾವಲ್ ಗ್ರಾಮಗಳ ರೈತರು 2025ರ ನ.21ರಂದು 2.4 ಕೋಟಿ ಸಾಲ ಮರುಪಾವತಿ ಮಾಡಿದ್ದೇವೆ. ನಂತರದ ದಿನಗಳಲ್ಲಿ ಬ್ಯಾಂಕಿನ ಸಿಇಓ, ಆಡಳಿತಾಧಿಕಾರಿಗಳನ್ನು ವರ್ಗಾವಣೆ ಮಾಡಿ ವಿನಾಕಾರಣ ಸಾಲ ನೀಡದೆ ರೈತರಿಗೆ ತೊಂದರೆ ಕೊಡುತ್ತಿದ್ದಾರೆ. ಕಳೆದ ಎರಡು ವರ್ಷದಿಂದ ಹೊಸ ಸಾಲ ನೀಡಿಲ್ಲ. ಸಾಲ ಬಾಕಿಯಿದ್ದ ರೈತರು ಹಣ ಕಟ್ಟಿದ್ದರೂ ಹೊಸ ಸಾಲ ಕೊಡುತ್ತಿಲ್ಲ. ಅಧಿಕಾರಿಗಳ ಗೊಂದಲದಿಂದ ರೈತರು ಬಡವಾಗುತ್ತಿದ್ದಾರೆ. ಹುಣಸೂರು ತಾಲೂಕಿನಲ್ಲಿ ಈಗ ಮಳೆಯಾಗಿದೆ. ಬೆಳೆ ಬೆಳೆಯೋಣ ಅಂದರೆ ಬ್ಯಾಂಕ್‌ನವರು ಸಾಲ ಕೊಡುತ್ತಿಲ್ಲ. ಪರಿಣಾಮ ರೈತರು ವಿಷ ಕುಡಿಯುವ ಪರಿಸ್ಥಿತಿ ಬಂದಿದೆ. ಸರ್ಕಾರ ರೈತರ ಬಗ್ಗೆ ಗಮನಹರಿಸುತ್ತಿಲ್ಲ. ಕೂಡಲೇ ನಮಗೆ ಹೊಸ ಸಾಲ ಕೊಡಬೇಕು ಎಂದರು.

ಸಾಲ ಪಡೆಯಲು ಸಾಲದ ಮರುಪಾವತಿ ರಸೀತಿ, ಅಗತ್ಯ ದಾಖಲೆಗಳನ್ನು ಮೇಲ್ವಿಚಾರಕ ನವೀನ್ ಹಾಗೂ ಬಿಳಿಕೆರೆ ಜಿಲ್ಲಾ ಕೇಂದ್ರ ಬ್ಯಾಂಕಿನ ವ್ಯವಸ್ಥಾಪಕರಿಗೆ ನೀಡಿದ್ದರೂ ಹಲವು ತಿಂಗಳಿನಿಂದ ಸಾಲ ನೀಡದೆ ಸತಾಯಿಸುತ್ತಿದ್ದಾರೆ. ಕೂಡಲೇ ಸಂಬಂಧಪಟ್ಟವರು ಸಾಲ ನೀಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಮುಖಂಡರಾದ ವಿಶ್ವನಾಥ್, ಕೆಂಪೇಗೌಡ ಭಾಗವಹಿಸಿದ್ದರು.





**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಮೈಸೂರು**
**ಮೈಸೂರು–ನಂಜನಗೂಡು ರಸ್ತೆ, ಬಂಡೀಪಾಳ್ಯ, ಮೈಸೂರು–570 025**
**E-Mail:apmcmysore@rediffmail.com**
**apmcmys@gmail.com** **ದೂರವಾಣಿ:0821–2482389**
**ಸಂ.ಕೃಉಮಾಸ(ಮೈ)/2716/2025–26** **ದಿನಾಂಕ: 24.03.2026**

**ತಿದ್ದುಪಡಿ ಪ್ರಕಟಣೆ**

ಸಮಿತಿಯ ಬಂಡೀಪಾಳ್ಯ ಮುಖ್ಯ ಮಾರುಕಟ್ಟೆ ಪ್ರಾಂಗಣದ ಸಗಟು ತರಕಾರಿ ಮಾರುಕಟ್ಟೆ ಪ್ರಾಂಗಣದಲ್ಲಿರುವ ಅಂಗಡಿಮಳಿಗೆ ಸಂ. 167 ರಿಂದ 186ರವರೆಗಿನ ಅಂಗಡಿಮಳಿಗೆಗಳಿಗೆ ಈ ಕಛೇರಿ ಪ್ರಕಟಣೆ ಸಂ. ಕೃಉಮಾಸ(ಮೈ)/2619/2025–26,ದಿ: 05.03.2026 ರಲ್ಲಿ ಮಳಿಗೆ ಹಂಚಿಕೆಗಾಗಿ ಅರ್ಜಿ ಫಾರಂ ಕೋರಲು ದಿನಾಂಕ:23.03.2026 ರಂದು ಅಂತಿಮ ದಿನಾಂಕ ನಿಗಧಿಪಡಿಸಲಾಗಿದ್ದು, ಯುಗಾದಿ ಹಾಗೂ ರಂಜಾನ್ ಹಬ್ಬಗಳ ಸಾಲು ರಜೆಗಳಿಂದಾಗಿ ಖಾಲಿ ಅರ್ಜಿ ಫಾರಂಗಳನ್ನು ಪಡೆಯಲು ಸದರಿ ದಿನಾಂಕವನ್ನು 02.04.2026, ಸಮಯ ಸಂಜೆ 5.00 ರವರೆಗೆ ವಿಸ್ತರಿಸಲಾಗಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ದಿ: 07.04.2026 ರಂದು ಸಮಯ ಸಂಜೆ 5.00 ರವರೆಗೆ ಸ್ವೀಕರಿಸಲಾಗುವುದು. ಉಳಿದಂತೆ ಯಾವುದೇ ಬದಲಾವಣೆಗಳಿರುವುದಿಲ್ಲ.

**ಸಹಿ/– ಕಾರ್ಯದರ್ಶಿ** **ಸಹಿ/– ಆಡಳಿತಾಧಿಕಾರಿ**
**ಕೃ.ಉ.ಮಾ.ಸ.,ಮೈಸೂರು** **ಕೃ.ಉ.ಮಾ.ಸ.,ಮೈಸೂರು**
DIPR/DDMYS/1792A/KSMCA/1062/2025-26


# ತೋಟದ ಮನೆಯ ಬಳಿ ಚಿರತೆ ಪ್ರತ್ಯಕ್ಷ

ಗುಂಡ್ಲುಪೇಟೆ :–ತಾಲೂಕಿನ ಶಿವಪುರ ಸಮೀಪದ ಕಲ್ಲುಕಟ್ಟೆ ಬಳಿಯ ಜಮೀನಿನ ತೋಟದ ಮನೆಯ ಬಳಿ ಚಿರತೆಯೊಂದು ನಿರ್ಭಯವಾಗಿ ಓಡ್ಡಾಡಿದ್ದು ರೈತರು ಬಿಚ್ಚಿ ಬಿದ್ದಿದ್ದಾರೆ.

ರೈತ ಸಿದ್ದಮಲ್ಲಪ್ಪ ಎಂಬುವವರು ಜಮೀನಿನಲ್ಲಿ ಚಿರತೆ ನಿರ್ಭಿತಿಯಿಂದ ಓಡಾಡುತ್ತಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ ಇಂದು ಬೆಳಗಿನ ಜಾವ ತೋಟದ ಮನೆಯ ಬಳಿ ಚಿರತೆ ಸಂಚಾರ ನೆಡಸಿದ್ದು ಮನೆಯವರು ಭಯಭೀತರಾಗಿದ್ದಾರೆ ರ?ತ ಸಿದ್ದಮಲ್ಲಪ್ಪ ಅವರು ಪತ್ನಿ ಮತ್ತು ಇಬ್ಬರು ಮಕ್ಕಳು ಜೊತೆ ತೋಟದ ಮನೆಯಲ್ಲಿ ವಾಸವಾಗಿದ್ದು ಚಿರತೆ ಓಡಾಟದಿಂದ ಅತಂಕಗೂಡಿದ್ದಾರೆ ಈ ಸಂಬಂದ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು ಕೂಡಲೇ ಚಿರತೆ ಸೆರೆ ಹಿಡಿಯುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.



# ಏ.5ರಿಂದ ಬೇಸಿಗೆ ಶಿಬಿರ




ಮೈಸೂರು: ನೇಪಥ್ಯ ರಂಗ ತಂಡದ ವತಿಯಿಂದ ಮಕ್ಕಳಿಗಾಗಿ ಏ.5 ರಿಂದ ಮೇ 2 ರವರೆಗೆ ಹಾಡು ಆಟ ಆಡು ಶೀರ್ಷಿಕೆಯ ಬೇಸಿಗೆ ಶಿಬಿರ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಭರತ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು ಸರಸ್ವತಿಪುರಂ ಕಾಮಾಕ್ಷಿ ಆಸ್ಪತ್ರೆ ರಸ್ತೆಯ ಕುವೆಂಪು ಪ್ರೌಢಶಾಲೆ ಹಾಗೂ ಶ್ರೀರಾಂಪುರ 2 ನೇ ಹಂತದ ಬ್ರುಹಸ್ಪತಾಚಾರ್ಯ ವಿದ್ಯಾಸಂಸ್ಥೆಯಲ್ಲಿ ನಿತ್ಯ ಬೆಳಗ್ಗೆ 10.30 ರಿಂದ ಮಧ್ಯಾಹ್ನ 3 ರವರೆಗೆ ನಡೆಯಲಿದೆ. ಶಿಬಿರದಲ್ಲಿ ಪ್ರಮುಖ ವಿಷಯ ರಂಗ ಭೂಮಿ ಆಗಿದೆ. ಇದಲ್ಲದೆ ನೃತ್ಯ, ನಾಟಕ, ಹಾಡು, ರಂಗಭೂಮಿ, ಜನಪದ ನೃತ್ಯ ಕಲಿಸಲಾಗುವುದು. ಇದರೊಂದಿಗೆ ಕೃಷಿ ಮೌಲ್ಯ, ಹಬ್ಬಗಳ ಮಹತ್ವ, ನಾಗರಿಕ ಜವಾಬ್ದಾರಿ ಚಟುವಟಿಕೆಗಳೂ ಇರಲಿವೆ. ಹೆಚ್ಚಿನ ಮಾಹಿತಿಗೆ ದೂ. 93416 69293 ನ್ನು ಸಂಪರ್ಕಿಸಬಹುದಾಗಿದೆ ಎಂದರು. ಭಾರ್ಗವಿ, ಸಾಗರ್, ಗೌತಮ್ ವಿರಾಜ್ ಇದ್ದರು.

# ಎರೆಕಟ್ಟೆ ಶಾಲೆಗೆ ಮೆಟ್ಟಿಲು: ಅರಣ್ಯ ಇಲಾಖೆಯ ಶ್ರಮದಾನ

ಚಾಮರಾಜನಗರ, ಕೊಳ್ಳೇಗಾಲ ತಾಲೂಕಿನ ಎರೆಕಟ್ಟೆ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ರಸ್ತೆಯಿಂದ ಕೆಳಗಿಳಿದು ಶಾಲೆಗೆ ಹೋಗಲು ಕಷ್ಟ ಪಡುತ್ತಿದ್ದುದನ್ನು ಗಮನಿಸಿದ ಅರಣ್ಯ ಇಲಾಖೆ ವಲಯ ಅಧಿಕಾರಿ ಬಿ.ಎಸ್ ವಾಸು ಅವರ ಮಾರ್ಗದರ್ಶನದಲ್ಲಿ ಶ್ರಮದಾನ ನಡೆಸಿ ಮೆಟ್ಟಿಲು ನಿರ್ಮಿಸಲಾಯಿತು.

ಜೊತೆಗೆ ಶಾಲಾ ಆವರಣ ಸ್ವಚ್ಛಗೊಳಿಸಲಾಯಿತು. ಅರಣ್ಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರ ಈ ಕಾರ್ಯಕ್ಕೆ ವಿದ್ಯಾರ್ಥಿಗಳು, ಶಿಕ್ಷಕರು, ಪೋಷಕರು ಮತ್ತು ಸಾರ್ವಜನಿಕರಿಂದ ಪ್ರಶಂಶೆ ವ್ಯಕ್ತವಾಗಿದೆ. ಈ ವಿಡಿಯೋ ಮತ್ತು ಫೋಟೋ ಸಾಮಾಜಿಕ ಜಾಲತಾಣಗಳಲ್ಲಿ ಸಹ ಹರಿದಾಡುತ್ತಿದ್ದು ಎಲ್ಲರ ಗಮನ ಸೆಳೆದಿದೆ.



**ರಾಮನಗರದ ಎಸ್.ಆರ್.ಎಸ್ ದಾಸೋಹ ಮಠದಲ್ಲಿ ಬಸವಲಿಂಗರಾಜ ಸ್ವಾಮಿಗಳ ಪ್ರಥಮ ವರ್ಷದ ಸಂಸ್ಮರಣೋತ್ಸವ**

# ಜೂ.28ರಂದು ಉಚಿತ ಸಾಮೂಹಿಕ ವಿವಾಹ, ಹೆಸರು ನೋಂದಾಯಿಸಿಕೊಳ್ಳಿ

ರಾಮನಗರ: ಇದೇ ಜೂನ್ 28ರಂದು ತಾಲ್ಲೂಕಿನ ಕೈಲಾಂಚ ಹೋಬಳಿಯ ಅವ್ವೇರಹಳ್ಳಿ ಶ್ರೀ ರೇವಣ ಸಿದ್ದೇಶ್ವರ ಬೆಟ್ಟದ ದಾಸೋಹ ಮಠದದಲ್ಲಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಇದರೊಟ್ಟಿಗೆ ಮಠದ ಸ್ವಾಮೀಜಿಗಳಾಗಿದ್ದ ಬಸವಲಿಂಗರಾಜ ಸ್ವಾಮಿಗಳ ಪ್ರಥಮ ವರ್ಷದ ಸಂಸ್ಮರಣೋತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ದಾಸೊಹಮಠದ ಹಿರಿಯ ಶ್ರೀಗಳಾದ ರಾಜಶೇಖರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಎರಡೂ ಕಾರ್ಯಕ್ರಮಗಳ ಸಂಬಂಧ ಮಠದ ಆವರಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಪ್ರಚಾರ ಕಾರ್ಯಕ್ರಮದ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಎಸ್.ಆರ್.ಎಸ್ ಕ್ಷೇತ್ರದಲ್ಲಿ ಮಠದವತಿಯಿಂದ 150 ವರ್ಷಗಳಿಗೂ ಹೆಚ್ಚಿನ ಕಾಲದಿಂದ ಸೇವಾಕಾರ್ಯ ನಡೆಸಲಾಘುತ್ತಿದೆ. ಲಿಂಗೈಕ್ಯ ಬಸವಲಿಂಗಾಜ ಸ್ವಾಮೀಜಿಗಳು ಮಠದ ಅಭಿವೃದ್ಧಿಗೆ ಶ್ರಮಿಸಿ ಶ್ರೀಮಠದ ದಾಸೋಹ ಪರಂಪರೆ ಮುಂದುವರೆಸುತ್ತಾ ನಾಡಿನೆಲ್ಲೆಡೆ



ಹೆಸರಾಗಿದ್ದರು. ಅವರ ಪ್ರಥಮ ವರ್ಷದ ಪುಣ್ಯಸ್ಮರಣೆಯನ್ನು ಸಾಮಾಜಿಕ ಸೇವಾ ಕಾರ್ಯಗಳೊಡನೆ ನೆರವೇರಿಸಲು ಶ್ರೀಮಠದ ಭಕ್ತವೃಂದ ತೀರ್ಮಾನಿಸಿರುವ ಕಾರಣ ಜೂನ್ 27 ಮತ್ತು 28 ರಂದು ಕಾರ್ಯಕ್ರಮ ನಡೆಯಲಿವೆ.

### ಹೆಸರು ನೋಂದಾಯಿಸಿಕೊಳ್ಳಿ – ಯೋಗಾನಂದ

ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಹೆಚ್.ಎಸ್. ಯೋಗಾನಂದ್ ಮಾತನಾಡಿ, ಉಚಿತ ಸಾಮೂಹಿಕ ವಿವಾಹ ಮಹೋತ್ಸವ ನೆರವೇರಲಿದ್ದು ವಧೂ–ವರರಿಗೆ ಶ್ರೀಮಠದಿಂದ ಚಿನ್ನದ ಮಂಗಳಸೂತ್ರ, ಬೆಳ್ಳಿ ಕಾಲುಂಗುರ, ಸೀರೆ, ಶರ್ಟ್, ಪಂಚೆ, ಟವಲ್ ನೀಡಲಾಗುತ್ತದೆ. ಜೂನ್ 10ನೇ ತಾರೀಖಿನೊಳಗೆ ಸೂಕ್ತ ದಾಖಲಾತಿಗಳೊಡನೆ ಶ್ರೀಮಠದಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳಬೇಕು ಎಂದರು.

ಅಖಿಲ ಭಾರತ ವೀರಶೈವ ಮಹಾಸಭಾ ತಾಲ್ಲೂಕು ಅಧ್ಯಕ್ಷ ಪೋಲೀಸ್ ಶಂಕರಪ್ಪ, ದಾಸೋಹಮಠ ಅಬಿವೃದ್ಧಿ ಸೇವಾ ಟ್ರಸ್ಟ್ ಅಧ್ಯಕ್ಷ ರಾಜಣ್ಣ, ಮುಖಂಡ ಅವ್ವೇರಹಳ್ಳಿ ಶಿವಲಿಂಗಯ್ಯ ಕನಕಪುರ ಕೈಲಾಶ್ ಮಾತನಾಡಿದರು. ಕನಕಪುರ ನಗರಸಭೆ ಸದಸ್ಯ ರವೀಶ್, ಕೈಲಾಂಚ ಗ್ರಾಪಂ ಮಾಜಿ ಅಧ್ಯಕ್ಷ ಆರ್. ಪಾಂಡುರಂಗ, ಜಿಲ್ಲಾ ಕಾನಿಪ ಅಧ್ಯಕ್ಷ ಶಿವಲಿಂಗಯ್ಯ ವಿಭೂತಿಕೆರೆ, ಕರು ನಾಡಸೇನೆ ಐಜೂರು ಜಗದೀಶ್, ಮುಖಂಡರುಗಳಾದ ಜನತಾ ನಾಗೇಶ್, ಅವ್ವೇರಹಳ್ಳಿ ತಮ್ಮಣ್ಣ, ನಂದೀಶ್‌ಗೌಡ, ಮಹದೇವಯ್ಯ, ಬಿಡದಿ ಶಿವಸ್ವಾಮಿ, ನೆಲಮಲೆ ಗಂಗಾಧರ್, ರಾಮಣ್ಣ, ದೇವರದೊಡ್ಡಿ ಗೋಪಾಲನಾಯ್ಕ್, ನಾಯಂಡಳ್ಳಿ ಷಡಕ್ಷರಿ, ರಾ.ಶಿ. ಬಸವರಾಜು, ಯತೀಶ್, ಕೋಟಹಳ್ಳಿ ರವಿ, ಮಹದೇವಪ್ರಸಾದ್, ಕುಮಾರ್, ಸೋಮಶೇಖರ್, ಚಂದ್ರಶೇಖರ್, ಮಹದೇವಯ್ಯ, ರಾಘವೇಂದ್ರ, ಚಿಕ್ಕಹೊನ್ನಯ್ಯ, ಗಂಗಮಲ್ಲಯ, ಶಂಕರ್, ರೇಣುಕಪ್ಪ ಇದ್ದರು.

### ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿದೆ

**ಜೂ. 27 ರಂದು ಸಾಮೂಹಿಕ ಲಿಂಗಧೀಕ್ಷೆ ಕಾರ್ಯಕ್ರಮ ರಕ್ತದಾನ ಶಿಬಿರ, ಆರೋಗ್ಯ ಶಿಬಿರ ನಡೆಯಲಿದೆ. ಜೂ. 28ರಂದು ಉಚಿತ ಸಾಮೂಹಿಕ ವಿವಾಹ ಮತ್ತು ಧಾರ್ಮಿಕ ಸಮಾರಂಭ ನಡೆಯಲಿದೆ. ಕಾರ್ಯಕ್ರಮದಲ್ಲಿ ಬಾಳೇಹೊನ್ನೂರು 1008 ಜಗದ್ಗುರು ಶ್ರೀ ಶ್ರೀ ಪ್ರಸನ್ನ ರೇಣುಕ ವೀರ ಸೋಮೇಶ್ವರ ಭಗತ್ಪಾದರು, ಉಜ್ಜಯಿನಿ ಪೀಠದ 1008 ಜಗದ್ಗುರು ಶ್ರೀ ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಸುತ್ತೂರು ಜಗದ್ದುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿಗಳು ಸೇರಿದಂತೆ ಧರ್ಮಸ್ಥಳ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆಯವರು, ನಾಡಿನ ಹರಗುರು ಚರಮೂರ್ತಿ ಗಳು ರಾಜಕೀಯ ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.**

## ಸಂಕ್ಷಿಪ್ತ ಸುದ್ದಿ

### ಆಸ್ತಿ ತೆರಿಗೆ : ಶೇ.5ರಷ್ಟು ರಿಯಾಯತಿ

**ತುಮಕೂರು:** ಮಹಾನಗರಪಾಲಿಕೆ ವ್ಯಾಪ್ತಿಯ ಆಸ್ತಿ ಮಾಲೀಕರು ಪ್ರಸಕ್ತ 2026–27ನೇ ಸಾಲಿನ ಆಸ್ತಿ ತೆರಿಗೆಯನ್ನು 2026ರ ಏಪ್ರಿಲ್ ಮಾಹೆಯ ಅಂತ್ಯದೊಳಗೆ ಪಾವತಿಸಿದಲ್ಲಿ ಆಸ್ತಿ ತೆರಿಗೆಯ ಮೇಲೆ ಶೇ. 5ರಷ್ಟು ರಿಯಾಯತಿ ನೀಡಲಾಗುವುದು ಎಂದು ಪಾಲಿಕೆ ಆಯುಕ್ತೆ ಶುಭ ಬಿ. ತಿಳಿಸಿದ್ದಾರೆ.

ಆಸ್ತಿ ಮಾಲೀಕರು ಆಸ್ತಿ ತೆರಿಗೆ, ನೀರಿನ ಶುಲ್ಕ ಮತ್ತು ಯು.ಜಿ.ಡಿ. ಶುಲ್ಕವನ್ನು ಏಪ್ರಿಲ್ 30ರೊಳಗಾಗಿ ನಗದು ಪಾವತಿ ಕೌಂಟರ್‌ಗಳ ಮೂಲಕ, ಕರ್ನಾಟಕ ಒನ್ ಕೇಂದ್ರ, ಆನ್‌ಲೈನ್ www.tumakurucity.mrc.gov.in ಮೂಲಕ ಹಾಗೂ ವಾರ್ಡ್ ಬಿಲ್ ಕಲೆಕ್ಟರ್‌ಗಳಲ್ಲಿ ನೇರವಾಗಿ ಪಾವತಿಸಿ ರಸೀದಿ ಪಡೆಯಬಹುದು.

ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವ ಮೂಲಕ ನಗರದ ಅಭಿವೃದ್ಧಿಗೆ ಸಹಕರಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

### ಮಾ. 30ರಂದು ಅಂಚೆ ಅದಾಲತ್

**ತುಮಕೂರು:** ತುಮಕೂರು ವಿಭಾಗೀಯ ಮಟ್ಟದ ಅಂಚೆ ಅದಾಲತ್ ಕಾರ್ಯಕ್ರಮವು ಮಾರ್ಚ್ 30ರಂದು ಬೆಳಿಗ್ಗೆ 11 ಗಂಟೆಗೆ ಗಾಂಧಿನಗರದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿದ್ದು, ಸಾರ್ವಜನಿಕರು ಅಂಚೆ ಸೇವೆಗೆ ಸಂಬಂಧಿಸಿದಂತೆ ದೂರು, ಸಲಹೆ, ಸೂಚನೆಗಳನ್ನು ಮಾರ್ಚ್ 28ರೊಳಗಾಗಿ ತುಮಕೂರು ವಿಭಾಗದ ಅಂಚೆ ಅಧೀಕ್ಷಕ ಬಿ.ಎಂ. ಶಂಕರಪ್ಪ ಅವರಿಗೆ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

### 6ನೇ ತರಗತಿಗೆ ಅರ್ಜಿ ಸಲ್ಲಿಸಿ

**ರಾಮನಗರ:** 2026–27ನೇ ಸಾಲಿನಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಆಯ್ದ, ಅನುಮೋದಿತ ಪ್ರತಿಷ್ಠಿತ ಶಾಲೆಗಳಿಗೆ 6ನೇ ತರಗತಿಗೆ ಸೇರ ಬಯಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಷರತ್ತುಗಳಿಗೊಳಪಟ್ಟು ಅರ್ಜಿ ಆಹ್ವಾನಿಸಲಾಗಿದೆ.

ಪೌರಕಾರ್ಮಿಕ, ಸಫಾಯಿ ಕರ್ಮಚಾರಿ, ಪುನರ್ವಸತಿ ಪಡೆದ ಮ್ಯಾನ್ಯುಯಲ್ ಸ್ಕ್ಯಾಯವೆಂಜರ್ಸ್, ಸ್ಮಶಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ, ದೇವದಾಸಿರವರ, ಕೋವಿಡ್ 19 ಮುಂತಾದ ಪ್ರಕೃತಿ ವಿಕೋಪದಿಂದ ತಂದೆ–ತಾಯಿಯನ್ನು ಕಳೆದುಕೊಂಡ, ಸಿಂಗಲ್ ಫ್ಯಾಮಿಲಿ, ಯೋಜನಾ ನಿರಾಶ್ರಿತರ, ಮಾಜಿ ಸೈನಿಕರ, ಕೊಳಗೇರಿಗಳಲ್ಲಿ ವಾಸುತ್ತಿರುವ, ಕೃಷಿ ಕಾರ್ಮಿಕರ, ಸಾಲಬಾದೆಯಿಂದ ಆತ್ಮಹತ್ಯೆಗೆ ಗುರಿಯಾದ, ದೌರ್ಜನ್ಯದಲ್ಲಿ ನೊಂದವರ, ಜೀತ ವಿಮುಕ್ತ, ಅಂಗವಿಕಲತೆಯನ್ನು ಹೊಂದಿರುವ, ಅಲೆಮಾರಿ/ ಅರೆ ಅಲೆಮಾರಿ/ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಸಮುದಾಯದ ಮಕ್ಕಳಿಗೆ ಮೀಸಲಾತಿಯನ್ವಯ ಪ್ರವೇಶಾತಿ ನೀಡಲಾಗುವುದು.

ಅರ್ಜಿಯನ್ನು ಇದೇ ಏ.15 ರಿಂದ ಮೇ 4ರ ವರೆಗೆ ಸಲ್ಲಿಸಬಹುದು. ಅರ್ಹತಾ ಪರೀಕ್ಷೆಯನ್ನು ಮೇ 12 ರಂದು ರಾಮನಗರದ ಜಿಲ್ಲಾ ಶಿಕ್ಷಣ ತರಬೇತಿ ಕೇಂದ್ರ (ಡಯಟ್)ದಲ್ಲಿ ನಡೆಸಲಾಗುವುದು.

ಹೆಚ್ಚಿನ ಮಾಹಿತಿಗೆ ಬೆಂಗಳೂರು ದಕ್ಷಿಣ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಮೊ.9480843043, ರಾಮನಗರ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿ ಮೊ.9740349381, ಕನಕಪುರ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿ ಮೊ.9880435845, ಚನ್ನಪಟ್ಟಣ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿ ಮೊ.9448857432 ಅಥವಾ ಮಾಗಡಿ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿ ಮೊ.6360714838 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.




# ಸಾರ್ವಜನಿಕರಿಗೆ ಕ್ಷಯರೋಗ ಕುರಿತು ಅರಿವು ಅಗತ್ಯ

**ಮಂಡ್ಯ:** ಕ್ಷಯರೋಗ ತಡೆಗಟ್ಟುವುದು ಬಹಳ ಮುಖ್ಯವಾಗಿದ್ದು ಇದರ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಹಾಗೂ ಅರಿವು ಕಾರ್ಯಕ್ರಮಗಳನ್ನು ಮಾಡಬೇಕು ಹಾಗೂ ಕ್ಷಯರೋಗ ಸೋಂಕಿತರು ಸಕಾಲದಲ್ಲಿ ವೈದ್ಯಕೀಯ ಚಿಕಿತ್ಸೆಯಿಂದ ಕ್ಷಯ ರೋಗವನ್ನು ಗುಣಪಡಿಸಬಹುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮಂಡ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಷ್ಟ್ರೀಯ ಕ್ಷಯ ರೋಗ ನಿರ್ಮೂಲ ಕಾರ್ಯಕ್ರಮ ವಿಶ್ವ ಕ್ಷಯರೋಗ ದಿನ '100 ದಿನಗಳ ಟಿ.ಬಿ ಮುಕ್ತ ಭಾರತ ಅಭಿಯಾನ ಜಾಥಾ' ಕಾರ್ಯಕ್ರಮ ವನ್ನು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಚಾಲನೆ ನೀಡಿದರು.



ಕ್ಷಯ ರೋಗಕ್ಕೆ ತುತ್ತಾಗಿರುವಂತಹ ವ್ಯಕ್ತಿಗಳನ್ನು ಸರಿಯಾದ ರೀತಿಯಲ್ಲಿ ಪ್ರೀತಿ ವಿಶ್ವಾಸದಿಂದ ಹಾಗೂ ವಾತ್ಸಲ್ಯ ದಿಂದ ನೋಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಮಾರ್ಚ್ 24 ರಂದು ಪ್ರತಿ ವರ್ಷ ಕ್ಷಯ ರೋಗ ದಿನಚರಣೆಯನ್ನು ಆಚರಣೆ ಮಾಡುತ್ತಿದ್ದು ಟಿವಿ ರೋಗ (ಕ್ಷಯರೋಗ) ಕಾಯಿಲೆಯನ್ನು ಗುಣಪಡಿಸಬಹುದಾದ ಕಾಯಿಲೆಯಾಗಿದೆ ಸಾರ್ವಜನಿಕರು ಬಹಳ ಎಚ್ಚರದಿಂದ ಇರಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ 40 ಗ್ರಾಮ ಪಂಚಾಯಿತಿಗಳನ್ನು ಕ್ಷಯ ರೋಗ ಮುಕ್ತ ಗ್ರಾಮ ಪಂಚಾಯಿತಿಗಳಾಗಿ ಗುರುತಿಸಲಾಗಿದೆ. ಎಲ್ಲಾ ಸಾರ್ವಜನಿಕರ ಸಹಭಾಗಿತ್ವದಲ್ಲಿ ಕ್ಷಯ ರೋಗವನ್ನು ಗುಣಪಡಿಸಲು ಸಾಧ್ಯ ಎಲ್ಲರೂ ಎಚ್ಚರದಿಂದ ಇರಬೇಕು ಹಾಗೂ ಸಾರ್ವಜನಿಕರಿಗೆ ಅರಿವು ಕಾರ್ಯಕ್ರಮ ಅಗತ್ಯ ಎಂದು ಹೇಳಿದರು.

ಇಂದಿನಿಂದ 100 ದಿನಗಳ ಕಾಲ ಟಿವಿ ಮುಕ್ತ (ಕ್ಷಯರೋಗ) ಮುಕ್ತ ಭಾರತ ಅಭಿಯಾನವನ್ನು ಮಾಡಲಾಗುತ್ತಿದ್ದು ಸಾರ್ವಜನಿಕರು ಕಾರ್ಯಕ್ರಮದವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ನಿರ್ವಹಣಾಧಿಕಾರಿ ಕೆ.ಆರ್. ನಂದಿನಿ ಅವರು ಮಾತನಾಡಿ ಕ್ಷಯರೋಗ ಒಂದು ಸಾಂಕ್ರಾಮಿಕ ರೋಗವಾಗಿದ್ದು ಒಬ್ಬರಿಂದ ಒಬ್ಬರಿಗೆ ಹರಡುವಂತ ಕಾಯಿಲೆಯಾಗಿದೆ. ಕ್ಷಯರೋಗ ಅಭಿಯಾನಕ್ಕೆ ಮೂರು ಉದ್ದೇಶಗಳಿದ್ದು ಎಲ್ಲಾ ಕ್ಷಯರೋಗ ಪ್ರಕರಣಗಳನ್ನು ಪತ್ತೆ ಹಚ್ಚುವುದು, ಕ್ಷಯರೋಗಿಗಳ ಮರಣ ಪ್ರಮಾಣ ಕಡಿಮೆಗೊಳಿಸುವುದು ಹಾಗೂ ತಡೆಗಟ್ಟುವುದು. ಹೊಸ ಕ್ಷಯರೋಗ ಪ್ರಕರಣಗಳನ್ನು ತಡೆಯುವುದು ಎಂದು ತಿಳಿಸಿದರು.

ಕ್ಷಯ ರೋಗಿಗಳು ನಿಗದಿತ ಸಮಯದಲ್ಲಿ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಹಾಗೂ ಕ್ಷಯರೋಗ ಕುರಿತು ಸಾರ್ವಜನಿಕರಿಗೆ ಅರಿವು ಕಾರ್ಯಕ್ರಮವನ್ನು ಮಾಡಬೇಕು ಎಂದು ಹೇಳಿದರು.

ಒಂದೊಂದೇ ಗ್ರಾಮ ಪಂಚಾಯಿತಿಯನ್ನು ಕ್ಷಯರೋಗ ಮುಕ್ತ ಗ್ರಾಮ ಪಂಚಾಯಿತಿಯನ್ನಾಗಿ ಮಾಡುವುದೇ ನಮ್ಮ ಘೋಷವಾಕ್ಯ ಮತ್ತು ಧ್ಯೇಯ ಎಂದು ತಿಳಿಸಿದರು.

ದಳವಾಯಿ ಕೋಡಿಹಳ್ಳಿ ಗ್ರಾಮ ಪಂಚಾಯಿತಿ ಕಳೆದ ಮೂರು ವರ್ಷದಿಂದ ಕ್ಷಯ ರೋಗ ಮುಕ್ತ ಗ್ರಾಮ ಪಂಚಾಯಿತಿಯಾಗಿದ್ದು ಸಾಧನೆಯತ್ತ ಸಾಗಿ ಚಿನ್ನದ ಚಿನ್ನದ ಪದಕವನ್ನು ಪಡೆದುಕೊಂಡಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯನ್ನು ಕ್ಷಯರೋಗ ಮುಕ್ತ ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತೇವೆ ಎಂದು ತಿಳಿಸಿದರು.


ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಕೆ ಮೋಹನ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ.ಆಶಾಲತಾ ರವರು ಜಿಲ್ಲಾ ಕಾರ್ಯಕ್ರಮ ಅಭಿವೃದ್ಧಿ ಅಧಿಕಾರಿಗಳಾದ ಡಾ.ಕಾಂತರಾಜುರವರು, ಜಿಲ್ಲಾ ಅಸಾಂಕ್ರಮಿಕ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಸೋಮಶೇಖರ್ ರವರು ಜಿಲ್ಲಾ ಶಿಕ್ಷಣಾಧಿಕಾರಿಗಳಾದ ಡಾ. ವೇಣುಗೋಪಾಲ್ ರವರು ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ಡಾ.ಜವರೇಗೌಡರವರು ಖಒಂ ಅಧ್ಯಕ್ಷರಾದ ಡಾ.ಮರೀಗೌಡ ರವರು ಡಾ.ಕಕ್ಕಿಲಯ ಹಾಗೂ ಗೋಪಾಲ ಕೃಷ್ಣ ರವರು ಹಾಗೂ ಜಿಲ್ಲಾ ಕಾರ್ಯಕ್ರಮ ಸಂಯೋಜಕರುಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

## ಮಹಿಳೆ ಕಾಣೆ




**ತುಮಕೂರು:** ತುಮಕೂರು ತಾಲ್ಲೂಕು ಬೆಳ್ಳಾವಿ ಗ್ರಾಮದ ವಾಸಿ ಸುಮಾರು 48 ವರ್ಷದ ವೆಂಕಟಮ್ಮ ಎಂಬ ಮಹಿಳೆಯು ತನ್ನ ಮಗಳ ಊರಾದ ಮಧುಗಿರಿ ತಾಲ್ಲೂಕು ಶಂಭೋನಹಳ್ಳಿಯಿಂದ ಫೆಬ್ರವರಿ 26ರಂದು ಕಾಣೆಯಾಗಿದ್ದಾಳೆ ಎಂದು ಈಕೆಯ ಮಗ ಶಶಿಕುಮಾರ್ ಮಧುಗಿರಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಇವರು 5.3 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ ಹೊಂದಿದ್ದು, ಕೊರಳಲ್ಲಿ ಕರಿಮಣಿ ಸರ ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಮತ್ತು ಬಿಳಿ ಮಿಶ್ರಿತ ಬಣ್ಣದ ಸೀರೆ ಧರಿಸಿದ್ದಳು. ಕಾಣೆಯಾದವಳ ಬಗ್ಗೆ ಸುಳಿವು ಸಿಕ್ಕಲ್ಲಿ ಕೂಡಲೇ ದೂ.ವಾ.ಸಂ. 08137–282381/ 282378, 0816–2278000, ಮೊ.ಸಂ. 9480802974–40–24–00ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಚಂದ್ರಶೇಖರ ಎಂ.ಎಸ್. ಮನವಿ ಮಾಡಿದ್ದಾರೆ.

# ದಳ್ಳಾಳಿಗಳಿಲ್ಲದ ಶುಕ್ರವಾರ ಸಂತೆ ಮತ್ತೆ ಆರಂಭ



**ನಂಜನಗೂಡು:** ಕಳೆದ ಐದು ವರ್ಷ ಹಿಂದೆ ಕೋವಿಡ್ ಬಂದಿದ್ದರಿಂದ ನಂಜನಗೂಡು ಶುಕ್ರವಾರ ಸಂತೆ ಎಂದು ಪ್ರಸಿದ್ಧಿಯಾಗಿದ್ದ ಸಂತೆಯು ಕಳೆದ ಐದು ವರ್ಷದಿಂದ ನಿಂತುಹೋಗಿತ್ತು ಮತ್ತೆ ಇದೇ ತಿಂಗಳು 27ನೇ ತಾರೀಕು ಪ್ರತಿ ಶುಕ್ರವಾರ ಸಂತೆ ಆರಂಭವಾಗುತ್ತಿದೆ ತಾಲೂಕಿನ ಎಲ್ಲ ಸಮಸ್ತ ರೈತ ಬಾಂಧವರು ವರ್ತಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಾರದ ಸಂತೆಯನ್ನು ಯಶಸ್ವಿಗೊಳಿಸಬೇಕೆಂದು ವಿದ್ಯಾಸಾಗರ್ ಪತ್ರಿಕಾಗೋಷ್ಠಿಯಲ್ಲಿ ಮನವಿ ಮಾಡಿದರು

ಮುಂದುವರೆದು ಮಾತನಾಡಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಪ್ರತಿ ಶುಕ್ರವಾರ ವಾರದ ಸಂತೆ ಯಶಸ್ವಿಯಾಗಿ ತುಂಬಾ ಚೆನ್ನಾಗಿ ಜರುಗುತ್ತಿತ್ತು . ಸದರಿ ಸಂತೆಯಲ್ಲಿ ರೈತರು ತಾವು ಬೆಳೆದ ಬೆಳೆಗಳನ್ನು ಅವರೇ ತಂದು ಸ್ವಂತ ವ್ಯಾಪಾರ ಮಾಡುತ್ತಿದ್ದರು ನೇಕಾರರು ಕಂಬಾರರು ಸೇರಿದಂತೆ ಇನ್ನಿತರು ತಾವು ಸಿದ್ಧಪಡಿಸಿದ ಪದಾರ್ಥಗಳನ್ನು ಅಂದರೆ ಮಡಿಕೆಗಳು ಹಗ್ಗಗಳು ಕುಕ್ಕೆ ಪುಟ್ಟಿಗಳು ಮೊರಗಳು ಕೋಳಿಗಳು ಸೇರಿದಂತೆ ಇನ್ನಿತರ ಎಲ್ಲಾ ಪದಾರ್ಥಗಳು ಒಂದೇ ಸ್ಥಳದಲ್ಲಿ ಅಂದರೆ ಶುಕ್ರವಾರ ಸಂತೆಯಲ್ಲಿ ಮಾರುತಿದ್ದರು ವಾರದಲ್ಲಿ ಒಂದು ದಿನ ಸಾರ್ವಜನಿಕರು ಸಂತೆಗೆ ಬಂದು ಎಲ್ಲಾ ಪದಾರ್ಥಗಳನ್ನು ಖರೀದಿ ಮಾಡಿ ತೆಗೆದುಕೊಂಡು ಹೋಗುತ್ತಿದ್ದರು ಗ್ರಾಮೀಣ ಪ್ರದೇಶದ ರೈತರು ತಾವು ಬೆಳೆದ ತರಕಾರಿ ಹಣ್ಣುಗಳು ಕಾಲು ಕಡ್ಡಿಗಳು ಇನ್ನಿತರ ಪದಾರ್ಥಗಳನ್ನು ದಳ್ಳಾಳಿಗಳಿಲ್ಲದೆ ನೇರವಾಗಿ ಮಾರಲು ಅನುಕೂಲವಾಗಿತ್ತು ಇಷ್ಟೆಲ್ಲ ಅನುಕೂಲ ಇದ್ದಂತ ಶುಕ್ರವಾರ ಸಂತೆ ಕೋವಿ 19 ಕಾಯಿಲೆ ಅಬ್ಬಿದ್ದರಿಂದ ಈ ಸಂತೆ ನಿಂತುಹೋಗಿತ್ತು ಮತ್ತೆ ಶಾಸಕರಾದ ದರ್ಶನ್ ಧ್ರುವನಾರಾಯಣ್ ಈಗ ನಡೆಯುತ್ತಿರುವ ಗರಳ ಪುರಿ ಉತ್ಸವದ ಮೂಲಕ 27 ನೇ ತಾರೀಕು ಚಾಲನೆ ನೀಡುತ್ತಿದ್ದಾರೆ ಇದರಿಂದ ರೈತರಿಗೆ ಸೇರಿದಂತೆ ಎಲ್ಲರೂ ನೇರವಾಗಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಟ್ಟಿದ್ದಾರೆ ಶಾಸಕರು ಎಂದು ಈ ಸಂದರ್ಭದಲ್ಲಿ ತಿಳಿಸಿದರು

ತಾಲೂಕು ಅಧ್ಯಕ್ಷ ಸತೀಶ್ ಮಾತನಾಡಿ ಈ ಶುಕ್ರವಾರ ಸಂತೆ ಆರಂಭವಾಗಿರುವುದು ರೈತರಿಗೆ ನೆರವಾದ ಸಂತೆ ರೈತರು ತಂದಂತ ಪದಾರ್ಥಗಳನ್ನು ಸ್ವತಹ ತಾವೇ ಮಾರಲು ಅನುಕೂಲವಾಗುತ್ತದೆ ಎಂದರು ಇದರಿಂದ ರೈತರ ಕುಟುಂಬ ಹಸನಾಗುತ್ತದೆ ತಾವು ತರಕಾರಿಗಳನ್ನು ಬೆಳೆಕಾಳುಗಳನ್ನು ಬೆಳೆಯಲು ಖರ್ಚಾಗಿದ್ದ ಹಣವನ್ನು ಸ್ವಲ್ಪಮಟ್ಟಿಗೆ ಹೆಚ್ಚಿಗೆ ಪಡೆಯಬಹುದು ಕಾರಣ ದಳ್ಳಾಳಿಗಳು ಇಲ್ಲದೆ ಇರುವುದರಿಂದ ಒಟ್ಟಾರೆ ಶುಕ್ರವಾರ ಸಂತೆ ರೈತರಿಗೆ ತುಂಬಾ ಅನುಕೂಲವಾಗಿದೆ ಎಂದರು

ಪತ್ರಿಕಾಗೋಷ್ಠಿಯಲ್ಲಿ ತಾಲೂಕು ಅಧ್ಯಕ್ಷ ಸತೀಶ್ ರಘು ಶಿವಕುಮಾರ್ ಸೇರಿದಂತೆ ಇತರರು ಇದ್ದರು.



# ಬಾಬುಜೀ–ಬಾಬಾ ಸಾಹೇಬ್ ಜಯಂತಿ ಅರ್ಥ ಪೂರ್ಣವಾಗಿ ಆಚರಿಸಿ: ಡೀಸಿ

**ಮಂಡ್ಯ:** ಏಪ್ರಿಲ್ ಮಾಹೆಯಲ್ಲಿ ಬರುವ ಏ.5 ರಂದು ಡಾ.ಬಾಬು ಜಗಜೀವನ್ ರಾಂ ಹಾಗೂ ಏಪ್ರಿಲ್ 14ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಎಲ್ಲರ ಸಹಕಾರ ಹಾಗೂ ಸಮನ್ವಯತೆ ಹಾಗೂ ಸಾಮರಸ್ಯದಿಂದ ಮಹನೀಯರ ಚಿಂತನೆ ಮತ್ತು ಆದರ್ಶಗಳನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಕಾರ್ಯಕ್ರಮವನ್ನು ಅರ್ಥ ಪೂರ್ಣವಾಗಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ರವರು ಹೇಳಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಡಾ.ಬಾಬು ಜಗಜೀವನ್ ರಾಂ ಮತ್ತು ಡಾ. ಬಿ.ಆರ್ ಅಂಬೇಡ್ಕರ್ ಜಯಂತಿಯ ಆಚರಣೆ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹನೀಯರು ಜಯಂತಿ ಕಾರ್ಯಕ್ರಮವನ್ನು ಬೆಳಿಗ್ಗೆ 10 ಗಂಟೆಗೆ ಮಹನೀಯರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಬೆಳಿಗ್ಗೆ 10–30 ಗಂಟೆಗೆ ಜಾಥಾ ಕಾರ್ಯಕ್ರಮವನ್ನು ಮಾಡಬೇಕು ಹಾಗೂ 11 ಗಂಟೆಗೆ ಸಭಾ ಕಾರ್ಯಕ್ರಮ ಆಯೋಜಿಸಿ ಎಂದು ಸೂಚಿಸಿದರು.

# ಏ.2ರಂದು ಶೋಭಯಾತ್ರೆ: ಮಹಾಲಿಂಗೇಗೌಡ

**ಮಂಡ್ಯ:** ವಿಶ್ವ ಹಿಂದು ಪರಿಷದ್, ಬಜರಂಗದಳ, ಶ್ರೀರಾಮಾಂಜಿನೇಯ ಮಹೋತ್ಸವ ಸಮಿತಿಯ ವತಿಯಿಂದ ಶ್ರೀರಾಮನವಮಿ ನಿಮಿತ್ತ ಮಾ.27ರಂದು ಶ್ರೀರಾಮ ನಾಮ ತಾರಕ ಹೋಮ ಹಾಗೂ ಏ.2ರಂದು ಶೋಭಯಾತ್ರೆ ಆಯೋಜಿಸಲಾಗಿದೆ ಎಂದು ಸಮಿತಿಯ ಅಧ್ಯಕ್ಷ ಮುದ್ದನಘಟ್ಟ ಮಹಾಲಿಂಗೇಗೌಡ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ವಿಠಲ ಸಮುದಾಯ ಭವನದಲ್ಲಿ ದೇವಾಲಯ ಆಕೃತಿಯಲ್ಲಿ ವೇದಿಕೆ ನಿರ್ಮಿಸಲಾಗಿದ್ದು, ಶ್ರೀರಾಮ, ಹನುಮಂತರ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲಾಗುವುದು. ಮಾ.27ರಂದು ಬೆಳಗ್ಗೆ 7ರಿಂದ ಗಣಪತಿ ಪೂಜೆ, ಪುನಃ ಪಂಚಗವ್ಯ ಸ್ಥಾಪನೆ, ಶ್ರೀರಾಮಾಂಜನೇಯ ಚರಬಿಂಬ ಪ್ರತಿಷ್ಠಾಪನೆ ವಿಶೇಷವಾಗಿ ಶ್ರೀರಾಮ ನಾಮ ತಾರಕ ಹೋಮ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಅಂದು ಸಂಜೆ 7ರಿಂದ ಏ.1ರವರೆಗೆ ಸಾಂಸ್ಕೃತಿ ಕಾರ್ಯಕ್ರಮ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ ಆಯೋಜನೆ ಮಾಡಲಾಗಿದೆ ಎಂದರು.

ಈ ಕಾರ್ಯಕ್ರಮದ ಜಾಗೃತಿ ಮೂಡಿಸಲು ಮಾ.25ರಂದು ಸಂಜೆ.4 ಗಂಟೆಗೆ 200 ಬೈಕ್‌ಗಳಲ್ಲಿ ನಗರದ ಪ್ರಮುಖ ರಸ್ತೆಗಳಲ್ಲಿ ಬೈಕ್ ರ‍್ಯಾಲಿ ನಡೆಸಲಾಗುವುದು. ಏ.2ರಂದು ನಗರದ ಶಂಕರ ಮಠದ ಶನಿಮಹಾತ್ಮ ದೇವಸ್ಥಾನದಿಂದ ಶೋಭಯಾತ್ರೆ ನಡೆಯಲಿದ್ದು, ಅಂದು ಮಧ್ಯಾಹ್ನ 2.30ಕ್ಕೆ ಬಾಳೆಹೊನ್ನೂರು ಖಾಸಾ ಶಾಖಾ ಮಠದ ಶ್ರೀಗಂಗಾಧರ ಶಿವಾಚಾರ್ಯ ಸ್ವಾಮೀಜಿ ಚಾಲನೆ ನೀಡುವರು. ಮಾಜಿ ಕೇಂದ್ರ ಸಚಿವ ಅನಂತಕುಮಾರ ಹೆಗಡೆಯವರು ಉಪಸ್ಥಿತರಿರುವರು. ನಗರದ ಪ್ರಮುಖ ರಸ್ತೆಗಳಲ್ಲಿ ಶೋಭಾಯಾತ್ರೆ ಮೆರವಣಿಗೆ ನಡೆಯಲಿದೆ ಎಂದು ವಿವರಿಸಿದರು.

ಶೋಭಾಯಾತ್ರೆಗೆ ಎಲ್ಲ ಸಮುದಾಯದವರನ್ನು ಆಹ್ವಾನಿಸಲಾಗಿದೆ. ಎಲ್ಲ ಜಾತಿ, ಮತ, ಪಂಥಗಳ ಬೇದವಿಲ್ಲ ಎಲ್ಲ ರಾಜಕೀಯ ಪಕ್ಷಗಳು ಸಹಕಾರ ನೀಡಲಿದ್ದಾರೆ. ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಸಮಿತಿಯ ಪ್ರಧಾನ ಕಾರ್ಯದರ್ಶಿ ಬಸವರಾಜು, ವಿಶ್ವ ಹಿಂದು ಪರಿಷದ್‌ನ ಕೋಶಾಧ್ಯಕ್ಷ ರಾಜಶೇಖರ್, ಬಾಲು, ರಾಘವೇಂದ್ರ ಪುಣ್ಯಕೋಟಿ, ಬಜರಂಗ ದಳದ ಪುನಿತ್ ಇದ್ದರು.

# ಮಹಿಳಾ ದಿನಾಚರಣೆಯ ಪ್ರಯುಕ್ತ ವಿವಿಧ ಆಟೋಟ ಸ್ಪರ್ಧೆ

**ಮಂಡ್ಯ:** ತಾಲೂಕು ಹೊಳಲು ಗ್ರಾಮದ ಕಾವೇರಿ ಗೆಳತಿಯರ ಬಳಗ ಹಾಗೂ ಇಂದಿರಾ ಯುವತಿ ಬಳಗದ ವತಿಯಿಂದ ನಿಂಗರಾಜಮ್ಮನವರ (ಕಾವೇರಿ ಗೆಳತಿಯರ ಬಳಗದ ಅಧ್ಯಕ್ಷ) ಅಧ್ಯಕ್ಷತೆಯಲ್ಲಿ ಈ ದಿನ ಮಕ್ಕಳು ಮತ್ತು ಮಹಿಳೆಯರಿಗಾಗಿ ಆಟೋ ಸ್ಪರ್ಧೆ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಚಾಲನೆಯನ್ನು ಮುಖ್ಯ ಅತಿಥಿಗಳಾದ ಕರ್ನಾಟಕ ರಾಜ್ಯ ರೈತ ಸಂಘದ ರೈತ ಮುಖಂಡರಾದ ಲತಾ ಶಂಕರ್ ಅವರು ಬಾಲ್ ಎಸೆಯುವುದರ ಮುಖಾಂತರ ಕ್ರೀಡಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ ಗ್ರಾಮೀಣ ಭಾಗದ ಮಹಿಳೆಯರು ಗದ್ದೆ, ಹೊಲ, ಕುರಿ, ಮೇಕೆ, ಹಸು,ಎಂದು ತಮ್ಮ ಕೆಲಸವನ್ನು ಮಾಡುತ್ತಾ ಜೀವನ ಕಳೆಯುತ್ತಾರೆ.

ಸರ್ಕಾರಿ ಶಾಲೆ ಮುಖ್ಯ ಶಿಕ್ಷಕಿಯಾದ ಭಾಗ್ಯಮ್ಮ ಮಾತನಾಡುತ್ತಾ ಕಾವೇರಿ ಗೆಳತಿಯರ ಬಳಗದ ಅಧ್ಯಕ್ಷರಾದ ನಿಂಗರಾಜಮ್ಮನವರು ಮಹಿಳಾ ದಿನಾಚರಣೆಯ ಪ್ರಯುಕ್ತ ಇಂತಹ ಅನೇಕ ಕಾರ್ಯಕ್ರಮಗಳನ್ನು ಹೊಳಲು ಗ್ರಾಮದಲ್ಲಿ ಮಾಡುತ್ತಾ ಬಂದಿದ್ದಾರೆ. ಗ್ರಾಮದ ಹಿರಿಯರಿಗೆ ವಿವಿಧ ರಂಗದಲ್ಲಿ ಸಮಾಜ ಸೇವೆ ಮಾಡಿದ ಮಹಿಳೆಯರನ್ನು ಗುರುತಿಸಿ ಇಂತಹ ಕಾರ್ಯಕ್ರಮದಲ್ಲಿ ಸನ್ಮಾನ ಮಾಡುತ್ತಾ ಬಂದಿದ್ದಾರೆ ಅವರ ಕೆಲಸವನ್ನು ಶ್ಲಾಘಿಸಿದರು.



ಹೊಳಲು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರಮ್ಯಾ ಚೇತನ್ ಮಾತನಾಡುತ್ತಾ ಗ್ರಾಮೀಣ ಪ್ರದೇಶದಲ್ಲಿ ಮಹಿಳೆಯರಿಗೆ ಹಾಗೂ ಮಕ್ಕಳಿಗೆ ಇಂತಹ ಆಟೋಟಗಳಿಂದ ಮನಸ್ಸಿಗೆ ಸ್ಫೂರ್ತಿ ಆಗುತ್ತದೆ ಹಾಗೂ ಇಂಥ ಕಾರ್ಯಕ್ರಮಗಳಿಂದ ಮಹಿಳೆಯರನ್ನು ಗುರುತಿಸಬಹುದೆಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಡೈರಿ ಅಧ್ಯಕ್ಷರಾದ ಸಾವಿತ್ರಮ್ಮ, ಮಾಜಿ ಅಧ್ಯಕ್ಷರಾದ ಪದ್ಮ, ನಿರೂಪಮ, ಗ್ರಾಮ ಪಂಚಾಯಿತಿ ಕಾರ್ಯದರ್ಶಿಯಾದ ಸದಾಶಿವಮೂರ್ತಿ, ಬಿಲ್ ಕಲೆಕ್ಟರ್ ರಾಘವೇಂದ್ರ, ಸರ್ಕಾರಿ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾದ ಸುಜಾತ, ಹಾಗೂ ಇಂದಿರಾ ಯುವತಿ ಮಂಡಳಿ, ಮತ್ತು ಕಾವೇರಿ ಗೆಳತಿಯರ ಬಳಗದ ಪದಾಧಿಕಾರಿಗಳು ಸದಸ್ಯರು ಅಂಗನವಾಡಿ ಕಾರ್ಯಕರ್ತರು, ಆಶಾಕಾರ್ಯಕರ್ತರು, ಉಪಸ್ಥಿತರಿದ್ದರು.

# ಎ.ಆರ್.ಕೆ.ಹುಟ್ಟುಹಬ್ಬ: ಅಭಿಮಾನಿಗಳಿಂದ ಸರ್ಕಾರಿ ಅಸ್ಪತ್ರೆಯಲ್ಲಿ ಹಣ್ಣು ಹಂಪಲು ವಿತರಣೆ



**ಚಾಮರಾಜನಗರ:** ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರ 65 ವರ್ಷದ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿಗಳ ಬಳಗದಿಂದ ನಗರದ ಜಿಲ್ಲಾ ಅಸ್ಪತ್ರೆಯಲ್ಲಿರುವ ತಾಯಿ ಮತ್ತು ಮಗು ಅಸ್ಪತ್ರೆಯ ವಿಭಾಗದಲ್ಲಿರುವ ಒಳ ರೋಗಿಗಳಿಗೆ ಹಣ್ಣು ಹಂಪಲು ಬ್ರೆಡ್ ವಿತರಣೆ ಮಾಡಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹಾಗೂ ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಅಸ್ಪತ್ರೆಯಲ್ಲಿರುವ ಬಾಣಂತಿಯರು. ಹಾಗೂ ರೋಗಿಗಳಿಗೆ ಹಣ್ಣು ಹಂಪಲು ಬ್ರೆಡ್ ನೀಡಿ, ಮಾತನಾಡಿ, ಕೊಳ್ಳೇಗಾಲ ಕ್ಷೇತ್ರದ ಜನಪ್ರಿಯ ಶಾಸಕರಾದ ಎ.ಆರ್.ಕೃಷ್ಣಮೂರ್ತಿ ಅವರು 65ನೇ ವರ್ಷಕ್ಕೆ ಕಾಲಿಟ್ಟುತ್ತಿರುವ ಈ ಸುಸಂದರ್ಭದಲ್ಲಿ ಭಗವಂತ ಅವರಿಗೆ ಆಯುಷ್ಯ ಆರೋಗ್ಯವನ್ನು ಕೊಟ್ಟು, ಇನ್ನು ಹೆಚ್ಚಿನ ರಾಜಕೀಯ ಅಧಿಕಾರವನ್ನು ನೀಡಲಿ. ಅವರ ತಂದೆಯವರಾದ ಬಿ. ರಾಚಯ್ಯನವರಂತೆ ಜನ ಸೇವೆ ಮಾಡುವ ಅವಕಾಶವನ್ನು ಕಲ್ಪಿಸಿಕೊಡಲಿ ಎಂದು ಪ್ರಾರ್ಥಿಸಿದರು.

ಅಭಿಮಾನಿಗಳ ಬಳಗದ ಅಧ್ಯಕ್ಷ ಹಗೂ ತಾ.ಪಂ. ಮಾಜಿ ಅಧ್ಯಕ್ಷ ಆರ್. ಮಹದೇವ್ ಮಾತನಾಡಿ, ಜನಪ್ರಿಯ ಶಾಸಕರು, ಸ್ನೇಹಜೀವಿಗಳಾದ ಎ.ಆರ್. ಕೃಷ್ಣಮೂರ್ತಿ ಅವರು ಜನ್ಮ ದಿನದಂದು ಸರ್ಕಾರಿ ಅಸ್ಪತ್ರೆಯಲ್ಲಿ ಹಣ್ಣು ಹಂಪಲು ವಿತರಿಸುವ ಮೂಲಕ ಆಚರಣೆ ಮಾಡುತ್ತಿದ್ದೇವೆ. ಸಜ್ಜನರು, ದಕ್ಷ ಪ್ರಾಮಾಣಿಕ ರಾಜಕಾರಣಿಗಳಾದ ಎ.ಆರ್.ಕೃಷ್ಣಮೂರ್ತಿ ಅವರು ಈಗಾಗಲೇ ಕ್ಷೇತ್ರದ ಅಭಿವೃದ್ಧಿಯಲ್ಲಿ ತಮ್ಮನ್ನು ಸಂಪೂರ್ಣ ತೊಡಗಿಸಿಕೊಂಡಿದ್ದಾರೆ. ಅವರಿಗೆ ಭಗವಂತ ಸಚಿವರಾಗುವ ಅವಕಾಶ ಕರುಣಿಸಲಿ. ಮಾಜಿ ರಾಜ್ಯಪಾಲರಾದ ದಿ. ಬಿ.ರಾಚಯ್ಯ ಅವರ ಪುತ್ರರಾದ ಕೃಷ್ಣಮೂರ್ತಿ ಅವರು ಇನ್ನು ಹೆಚ್ಚಿನ ಜನ ಸೇವೆಯನ್ನು ಮಾಡುವ ಮೂಲಕ ಬಡವರು ಹಾಗೂ ದೀನ ದಲಿತರ ಪ್ರಗತಿಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಸರ್ಜನ್ ಡಾ. ಚಿನ್ನಬೋವಿ, ಹೆರಿಗೆ ವಿಭಾಗದ ಡಾ. ಪ್ರದೀಪ್, ಜಿ.ಪಂ. ಮಾಜಿ ಉಪಾಧ್ಯಕ್ಷ ಅಯ್ಯನಪುರ ಶಿವಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್. ಗುರುಸ್ವಾಮಿ, ಸಿದ್ದಯ್ಯನಪುರ ಗೋವಿಂದರಾಜು, ಗ್ಯಾರಂಟಿ ಸಮಿತಿಯ ಅಧ್ಯಕ್ಷ ನಲ್ಲೂರು ಸೋಮೇಶ್ವರ್, ಎಪಿಎಂಸಿ ನಿರ್ದೇಶಕ ಅಲೂರು ಪ್ರದೀಪ್, ಮುಖಂಡರಾದ ಹೊಸಹಳ್ಳಿ ಮಧುಸೂದನ್, ನಾಗೇಂದ್ರನಾಯಕ್, ತೌಸಿಫ್, ಗ್ರಾ.ಪಂ. ಮಾಜಿ ಉಪಾಧ್ಯಕ್ಷ ಹೆಬ್ಬಸೂರು ಮಧು, ಹೆಬ್ಬಸೂರು ರಂಗಸ್ವಾಮಿ, ವೀರಭದ್ರಸ್ವಾಮಿ, ಕರಿನಂಜನಪುರಸ್ವಾಮಿ, ಮಾಜಿ ನಗರಸಭಾ ಸದಸ್ಯ ಆರ್.ಪಿ. ನಂಜುಂಡಸ್ವಾಮಿ, ಮಸಣಾಪುರ ಅಶೋಕ್ ಸಿದ್ದ ಕೋಟಂಬಳ್ಳಿ, ಹೊಂಗನೂರು ಮಹದೇವ್ ರಂಗಸ್ವಾಮಿ ದಡದಹಳ್ಳಿ ಮೂರ್ತಿ, ಅಪ್ಪು, ಹೊಂಗನೂರು ಮಹದೇವ್, ಮಣಿಕಂಠ ಮೊದಲಾದವರು ಇದ್ದರು.

# ಸಿಎಂ ದಲಿತ ಸಮುದಾಯವನ್ನು ಒಡೆಯುವ ಹುನ್ನಾರ ಹೆಣೆದಿದ್ದಾರೆ: ವೆಂಕಟಗಿರಿಯಯ್ಯ

**ಮಂಡ್ಯ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ದೇಶ ಪೂರ್ವಕವಾಗಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಹೆಸರಿನಲ್ಲಿ ದಲಿತ ಸಮುದಾಯವನ್ನು ಒಡೆಯುವ ಹುನ್ನಾರ ಹೆಣೆದಿದ್ದಾರೆ ಎಂದು ಕರ್ನಾಟಕ ದಲಿತ ಸಂಘಷ ಸಮಿತಿ ರಾಜ್ಯಾಧ್ಯಕ್ಷ ವೆಂಕಟಗಿರಿಯಯ್ಯ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ನೆರೆಯ ಆಂದ್ರ ಪ್ರದೇಶದಲ್ಲಿ ಒಳ ಮೀಸಲಾತಿಗಾಗಿ ಮಾಲ–ಮಾದಿಗರ ನಡುವಿನ ಸಂಘರ್ಷ ಅತಿರೇಖಕ್ಕೆ ತಿರುಗಿದ್ದು, ಒಬ್ಬರನ್ನೊಬ್ಬರು ಹೊಡೆದಾಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ರಾಜ್ಯ ಸರಕಾರದ ಬಳಿ ಹಣವಿಲ್ಲ. ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ನೀತಿ ಜಾರಿ ಹೋರಾಟ ನೆಪವಾಗಿಟ್ಟುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮುದಾಯವನ್ನು ವಂಚಿಸುವ ಹುನ್ನಾರ ರೂಪಿಸಿದ್ದಾರೆ.

ದಲಿತರು ಒಂದಾದರೆ ದಲಿತ ಮುಖ್ಯಮಂತ್ರಿ ಆಗುವ ಅವಕಾಶವನ್ನು ತಪ್ಪಿಸುವ ಸಂಚು ಇದರ ಹಿಂದಿದೆ. ಆದ್ದರಿಂದ ಸಮುದಾಯದ ಎಲ್ಲ ಮುಖಂಡರು ಒಂದೆಡೆ ಕುಳಿತು, ಪ್ರಬುದ್ಧತೆಯಿಂದ ಚರ್ಚಿಸಿ ತಮ್ಮ ಪಾಲನ್ನು ಸಮಾನವಾಗಿ ಹಂಚಿಕೊಳ್ಳಲು ಮುಂದಾಗಬೇಕೆಂದು ಮನವಿ ಮಾಡಿದರು.

ರಾಜ್ಯದ ಜನಸಂಖ್ಯೆಯಲ್ಲಿ ಶೇ.26ರಷ್ಟು ದಲಿತ ಸಮುದಾಯವಿದೆ. ಅದರಂತೆ ಮೀಸಲಾತಿ ಪಡೆಯಲು ಗಂಭೀರ ಹೋರಾಟಕ್ಕೆ ಮುಂದಾಗಬೇಕಿದೆ. ದಲಿತರ ಒಗ್ಗೂಡಿದ ಹೋರಾಟ ತಡೆಯುವ ದುರುದ್ದೇಶದಿಂದ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಪಕ್ಷಗಳು ಷಡ್ಯಂತ್ರ ರೂಪಿಸುತ್ತಿವೆ. ಇದನ್ನು ಮೆಟ್ಟಿನಿಂತು ಸರಕಾರದ ವಿಳಂಭ ನೀತಿ ವಿರುದ್ಧ ಒಗ್ಗಟ್ಟಾಗಿ ಹೋರಾಡಲು ಸಜ್ಜುಗೊಳ್ಳಬೇಕು ಎಂದು ಕರೆ ನೀಡಿದರು.

ಗೋಷ್ಠಿಯಲ್ಲಿ ಮೈಸೂರು ವಿಭಾಗೀಯ ಸಂಚಾಲಕ ಕೆ.ಎಂ.ಅನಿಲ್‌ಕುಮಾರ್, ಜಿಲ್ಲಾಧ್ಯಕ್ಷ ಬಿ.ಆನಂದ್, ಮಹಿಳಾ ಜಿಲ್ಲಾಧ್ಯಕ್ಷೆ ಜಿ.ಸುಶ್ಮಿತ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸುರೇಶ್‌ಕುಮಾ, ತಾಲೂಕು ಅಧ್ಯಕ್ಷರಾದ ಮುತ್ತರಾಜ್, ಗೀತಾ, ಸ್ವಾಮಿ, ವಿಮಲ ನಂದೀಶ್, ಕೆ.ಗೀತಾ ಇದ್ದರು.



# ದಸರಯ್ಯನವರ ಪುಣ್ಯಸ್ತ್ರೀ ವೀರಮ್ಮ

ಉಪೇಕ್ಷಿತ ವಚನಕಾರರು



| ವೀಣಾ ಹೇಮಂತ್‌ಗೌಡ ಪಾಟೀಲ್

ಶರಣ ದಸರಯ್ಯನವರ ಪತ್ನಿ ವೀರಮ್ಮ. ಸಾಮಾನ್ಯವಾಗಿ ಪತ್ನಿ ಎಂದರೆ ಸಹಚಾರಿಣಿ ಎಂಬ ಅರ್ಥ ಬರುತ್ತದೆ. ಆದರೆ ಪತಿಯ ಎಲ್ಲ ರೀತಿಯ ದೈಹಿಕ, ಮಾನಸಿಕ, ಆಧ್ಯಾತ್ಮಿಕ, ಪಾರಮಾರ್ಥಿಕ ಬದುಕಿನ ಸಹಚಾರಿಣಿಯಾಗಿ ಆತನ ಬದುಕಿನ ಎಲ್ಲಾ ಆಗು ಹೋಗುಗಳನ್ನು ಅರಿತವಳಾಗಿ ಅಂತೆಯೇ ನಡೆದುಕೊಂಡ ವ್ಯಕ್ತಿಗೆ ಬಹುಶಹ ಪುಣ್ಯಸ್ತ್ರೀ ಎಂಬ ಮಾತನ್ನು ಹೇಳಬಹುದು. ಪತಿಯ ಅಹಿಂಸಾ ಧರ್ಮವನ್ನು ತನ್ನದಾಗಿಸಿಕೊಂಡು ನಡೆದ ಶರಣೆ ವೀರಮ್ಮನವರು ಪತಿಗೆ ತಕ್ಕ ಸತಿಯಾಗಿ ಶಿವನೊಲುಮೆಯ ದಾರಿಯಲ್ಲಿ

ಅವರೊಂದಿಗೆ ಹೆಜ್ಜೆ ಹಾಕಿದರು. ಸತಿಪತಿಗಳೊಂದಾದ ಭಕ್ತಿಯ ಹಿತವಪ್ಪುದು ಶಿವಂಗೆ ಎಂಬ ಮಾತಿಗೆ ತಕ್ಕ ಬದುಕನ್ನು ಈ ದಂಪತಿಗಳು ಹೊಂದಿದ್ದರು ಎಂದರೆ ತಪ್ಪಿಲ್ಲ.

ಇದರ ಹಿನ್ನೆಲೆಯನ್ನು ನೋಡುವುದಾದರೆ ದೇವರ ಪೂಜೆಗೆ ಹೂವನ್ನು ಒದಗಿಸುವ ಕಾಯಕವನ್ನು ಮಾಡುತ್ತಿದ್ದ ದಸರಯ್ಯನವರು ಅದೊಂದು ದಿನ ಎಂದಿನಂತೆ ಹೂವನ್ನು ಹರಿಯುತ್ತಿರುವಾಗ ಅಯ್ಯೋ! ಎಂಬ ಧ್ವನಿಯನ್ನು ತಾವು ಹರಿಯುತ್ತಿದ್ದ ಹೂವಿನ ಗಿಡದಿಂದ ಕೇಳಿದಂತೆ ಭಾಸವಾದರು. ಗಿಡ ಮರಗಳಿಗೂ ಜೀವವಿದೆ ಅವುಗಳಿಂದ ನಾವು ಹೂವು ಹಣ್ಣುಗಳನ್ನು ಕಿತ್ತಾಗ ಅವುಗಳಿಗೆ ನೋವಾಗುತ್ತದೆ ಎಂದು ಅವರಿಗೆ ತೋಚಿತು. ಅಂತೆಯೇ ಅವರು ಅಂದಿನಿಂದ ಗಿಡಗಳಿಂದ ಹೂವು ಹಣ್ಣುಗಳನ್ನು ಕಿತ್ತುವುದನ್ನು ಬಿಟ್ಟುಬಿಟ್ಟರು. ಬದಲಾಗಿ ಹೂವಿನ ಗಿಡದಿಂದ ಬಿದ್ದ ಹೂಗಳನ್ನು ಆರಿಸಿ ತಂದು ಅವುಗಳನ್ನು ದೇವರ ಪೂಜೆಗೆ ಬಳಸಲು ಆರಂಭಿಸಿದರು. ಹಣ್ಣುಗಳಾದರೂ ಅಷ್ಟೇ ತಾನಾಗಿ ಹಣ್ಣಿನ ಗಿಡದಿಂದ ಪಕ್ವವಾಗಿ ಬಿದ್ದ ಹಣ್ಣುಗಳನ್ನು ಮಾತ್ರ ಆರಿಸಿ ಬಳಸುತ್ತಿದ್ದರು.

ಭೂಮಿಯ ಮೇಲಿರುವ ಸಕಲ ಚರಾಚರಗಳಲ್ಲಿಯೂ ಜೀವವಿದೆ ಎಂಬುದನ್ನು ನಂಬಿದ ಅವರು ಯಾರಿಗೂ ಹಾನಿ ಮಾಡಬಾರದು ಎಂಬ ಉದ್ದೇಶದಿಂದ ಅಹಿಂಸೆಯನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡರು ಅಂತೆಯೇ ಅವರ ಪತ್ನಿ ವೀರಮ್ಮ ಕೂಡ ಪತಿಯ ಹಾದಿಯಲ್ಲಿ ಮುನ್ನಡೆಯಲಾರಂಭಿಸಿದರು. ದಸರಯ್ಯನವರ ಅಹಿಂಸಾಪರ ಬದುಕನ್ನು ಕಂಡ, ಸಕಲ ಜೀವಿಗಳಿಗೆ ಲೇಸನ್ನು ಬಯಸಿದ ಅವರ ಮನಸ್ಥಿತಿಗೆ ಎಲ್ಲರೂ ದಯಾವೀರ ಎಂದು ಅವರನ್ನು ಕರೆದರೆ, ಮತ್ತೆ ಕುಹಕ ಮನಸ್ಥಿತಿಯ ಕೆಲ ಕಿಡಿಗೇಡಿಗಳು ಅವರನ್ನು ಅಪಹಾಸ್ಯಗೈದರು. ಆದರೂ ನಿಶ್ಚಲ ಮನಸ್ಥಿತಿಯಿಂದ ಈ ದಂಪತಿಗಳು ತಮ್ಮ ಬದುಕನ್ನು ಸಾಗಿಸಿದರು.

ದಸರಯ್ಯಗಳ ಪುಣ್ಯ ಸ್ತ್ರೀ ವೀರಮ್ಮನವರು ಶರಣ ಧರ್ಮದಲ್ಲಿ ನಂಬಿಕೆಯನ್ನಿಟ್ಟ ಶಿವಾನುಭವಿ, ಸಾತ್ವಿಕಳು ಮತ್ತು ಅಹಿಂಸೆಯನ್ನು ತನ್ನ ಜೀವನದ ಮೌಲ್ಯವನ್ನಾಗಿಸಿಕೊಂಡವರು. ಕ್ರಿ. ಶ.1160 ಇವರ ಕಾಲಮಾನವಾಗಿದ್ದು ಇವರು ಕಾಮಗೊಂಡ ಎಂಬ ಗ್ರಾಮದಲ್ಲಿ ನೆಲೆಗೊಂಡಿದ್ದರು.

ವೀರಮ್ಮನವರು ನಿಜಗುರು ಶಾಂತೇಶ್ವರ ಎಂಬ ಅಂಕಿತದಲ್ಲಿ ವಚನಗಳನ್ನು ರಚಿಸಿದರು. ಮುಖ್ಯವಾಗಿ ಅವರು ತಮ್ಮ ವಚನಗಳಲ್ಲಿ ಶರಣರ ನಿಲುವನ್ನು, ವ್ರತನಿಷ್ಠೆಯನ್ನು, ಪಾದೋದಕ, ಪ್ರಸಾದದ ಮಹತ್ವವನ್ನು ಅರುಹಿದರು. ಶುದ್ಧ ಸಾತ್ವಿಕ ಭಕ್ತರಾಗಿದ್ದ ಇವರು ಜನರಲ್ಲಿ ಮನೆ ಮಾಡಿರುವ ಮೂಢನಂಬಿಕೆಗಳನ್ನು ತೊಳೆಯುವ ನಿಟ್ಟಿನಲ್ಲಿ ಡಾಂಭಿಕ ಭಕ್ತಿಯ ಸೋಗನ್ನು ತಮ್ಮ ವಚನಗಳ ಮೂಲಕ ಅಲ್ಲಗಳೆದರು

ವೀರಮ್ಮನವರ ಲಭ್ಯವಿರುವ ಐದು ವಚನಗಳಲ್ಲಿ ಅಷ್ಟಾವರಣಗಳ ಮಹತ್ವ, ಶರಣರ ನಿಲುವು, ಮತ್ತು ವ್ರತನಿಷ್ಠೆ ಮುಂತಾದ ವಿಷಯಗಳು ಚರ್ಚಿಸಿವೆ.ಮನದ ಚಂಚಲತೆಯನ್ನು ಖಂಡಿಸಿದ್ದಾರೆ. ಅವರ ಎರಡು



ವಚನಗಳು ಅತ್ಯಂತ ಸುದೀರ್ಘವಾಗಿದ್ದು ಇನ್ನುಳಿದ ಮೂರು ವಚನಗಳು ಚಿಕ್ಕವು.

**ಅಯ್ಯಾ, ದುರುಳಕಾಮಿನಿಯರಿಗೆ ಎರಗುವ ಹೊಲೆಮನಸೆ,**
**ಗುರುವಿಂಗೆ ಎರಗಿ ಎರಕಡರ್ದಡಾತನ ಗುರುಕರಜಾತನೆಂಬೆ.**
**ಉದರದ ನೆಲೆಯನರಿದಾತನ ಉದಾಸಿಯೆಂಬೆ.**
**ಜನನದ ನೆಲೆಯನರಿದಾತನ ಜಂಗಮವೆಂಬೆ.**
**ಮರಣದ ನೆಲೆಯನರಿದಾತನ ಮಹಾಂತಿನೊಳಗಣ ಹಿರಿಯನೆಂಬೆ.**
**ಸಕಲದ ಹಸಿಗೆಯ ನೆಲೆಯನರಿದಾತನ ಹಂಚು ಕಂತೆಯೆಂಬೆ.**
**ಅತ್ಯತಿಷ್ಠದ್ದಶದಿಂದತ್ತತ್ತ ಬೆಳಗುವ ಮಹಾಬೆಳಗನರಿದಾತನ ಅತೀತನೆಂಬೆ.**
**ಅರುಹು ಅರತು, ಮರಹು ನಷ್ಟವಾಗಿ ಅರುಹು ಕರಿಗೊಂಡಾತನ**
**ಮಂಕು ಮರುಳು ಎಂಬೆ.**
**ತನುಧರ್ಮ ತರಹರಿಸಿ, ಮನದ ಸಂಚಲವಳಿದು ಒಳಗೆ**
**ನುಣ್ಣಗಾಗಬಲ್ಲಡೆ**
**ಬೋಳಕಾಕಾರ, ಬೋಳನಿರ್ವಾಣಿಗಳೆಂಬೆ.**
**ಹೀಂಗಲ್ಲದೆ ತಾಯಿಸತ್ತ ತಬ್ಬಲಿಯಂತೆ,**
**ಹಲಬರಿಗೆ ಹಲ್ಲದೆರೆದು, ಹಲಬರಿಗೆ ಬೋದಿಸಿ**
**ತನ್ನ ಉದರವ ಹೊರೆವ ಸಂದೇಹಿಗಳ ಕಂಡು ಎನ್ನ ಮನ**
**ಸಂದೇಹಿಸಿತ್ತು ಕಾಣಾ ಮಹಾಗುರು ಶಾಂತೇಶ್ವರಪ್ರಭುವೆ.**

ಮೇಲಿನ ವಚನದಲ್ಲಿ ದುಷ್ಟಕಾರ್ಯಗಳ ಕಡೆಗೆ ಹರಿಯುವ ಮನಸ್ಸನ್ನು ಗುರುವಿನ ಪಾದಗಳಿಗರ್ಪಿಸಿ ಗುರುವಿನ ಕೃಪೆಗೆ ಪಾತ್ರನಾಗಬೇಕು.

ಹಾಗೆ ಗುರುವಿನ ಕೃಪೆಗೆ ಪಾತ್ರನಾಗುವ ವ್ಯಕ್ತಿಗೆ ಗುರು ಪುತ್ರ ಎಂದು, ಉದರ ಎಂದರೆ ಹೊಟ್ಟೆ.ಈ ಉದರದ ನೆಲೆಯನ್ನು ಅರಿತವನನ್ನು ಉದಾಸಿ ಎಂದು, ಹುಟ್ಟಿನ ನೆಲೆಯನ್ನು ಅರಿತವನನ್ನು ಜಂಗಮ ಎಂದು ವಿಧ ವಿಧವಾದ ಅರಿವುಗಳನ್ನು ವಿವರಿಸುವ ವೀರಮ್ಮ ಅಂತಿಮವಾಗಿ ಇದೆಲ್ಲವನ್ನು ಬಿಟ್ಟು ತಾಯಿಯನ್ನು ಕಳೆದುಕೊಂಡ ಅನಾಥ ಮಗುವಿನಂತೆ ಹತ್ತು ಹಲವು ಜನರಿಗೆ ಆರ್ತನಾಗಿ ಬೇಡುತ್ತ, ಬೋಧಿಸುತ್ತಾ ತನ್ನ ಹೊಟ್ಟೆಯನ್ನು ಹೊರೆಯುವ ಜನರನ್ನು ಮನಸ್ಸು ಸಂದೇಹಿಸುತ್ತದೆ ಎಂದು ಆಕೆ ನಿಷ್ಟುರವಾಗಿ ಹೇಳುತ್ತಾಳೆ.

**ಗುರುಮುಖದಿಂದ ಬಂದುದೇ ಗುರುಪ್ರಸಾದ**
**ಆ ಪ್ರಸಾದವನು ಲಿಂಗಕ್ಕೆ ಅರ್ಪಿಸಿದಲ್ಲಿ ಲಿಂಗಪ್ರಸಾದ.**
**ಭೋಜ್ಯ ಕಟ್ಟಿ ಲಿಂಗಕ್ಕೆ ಕೊಟ್ಟು ಸಲಿಸುವುದೇ ಜಂಗಮಪ್ರಸಾದ.**
**ತತ್ತಸಾದಿಗಳಲ್ಲಿ ಯಾಚಿಸಿ,**
**ಅವರ ಪ್ರಸಾದವ ಕೊಂಬುದೆ ಪ್ರಸಾದಿಯ ಪ್ರಸಾದ.**
**ಅಪೇಕ್ಷೆಯಿಂದ ಸಲಿಸುವುದೇ ಆಪ್ಯಾಯನಪ್ರಸಾದ.**
**ಗುರುಲಿಂಗಜಂಗಮವ ಕಂಡು,**
**ಆ ಸಮಯದಲ್ಲಿ ತೆಗೆದು ಕೊಂಬುವುದೇ ಸಮಯಪ್ರಸಾದ.**
**ಪಂಚೇಂದ್ರಿಯಂಗಳಲ್ಲಿ ಪಂಚವಿಷಯ ಪದಾ ರ್ಥಂಗಳನು**
**ಪಂಚವಿಧಲಿಂಗಕ್ಕೆ ಸಮರ್ಪಣ ಮಾಡುವುದೇ**
**ಪಂಚೇಂದ್ರಿಯವಿರಹಿತಪ್ರಸಾದ.**
**ಮನವೇ ಲಿಂಗ, ಬುದ್ಧಿಯೇ ಶಿವಜ್ಞಾನ, ಚಿತ್ತವೇ ಶಿವದಾಸೋಹ,**
**ಅಹಂಕಾರದಲ್ಲಿ ಶಿವಚಿಂತನೆಯುಳ್ಳವನಾಗಿ**
**ಸಲಿಸಿದ್ದೇ ಅಂತಃಕರಣವಿರಹಿತಪ್ರಸಾದ.**
**ತ್ರಿವಿಧಾಂಗದಲ್ಲಿ ತ್ರಿವಿಧಲಿಂಗವ ಸಂಬಂದಿಸಿ**
**ಆ ಚಿದ್ಘನಲಿಂಗ ತಾನೆಂದರಿದು,**
**ಆ ತ್ರಿವಿಧಲಿಂಗಕ್ಕೆ ಕೊಡುವುದೇ ಸದ್ಭಾವಪ್ರಸಾದ.**
**ಬಹಿರಂಗದ ಪ್ರಪಂಚವ ನಷ್ಟಮಾಡಿ,**
**ಅರಿವುವಿಡಿದು ಸಲಿಸುವುದೇ ಸಮತಾಪ್ರಸಾದ.**
**ಶ್ರೀಗುರುವಿನ ಪ್ರಸನ್ನತ್ವವೆ ಜ್ಞಾನಪ್ರಸಾದ.**
**ಇಂತೀ ಏಕದಶ ಪ್ರಸಾದವನು ಒಳಹೊರಗೆ**
**ಪರಿಪೂರ್ಣಮಾಗಿ ತಿಳಿಯುವುದೆ ಶಿವತಂತ್ರ,**
**ಗುರುಶಾಂತೇಶ್ವರಾ.**

**ಚರಣಾಯುಧ ವೇಳೆಯನರಿವುದಯ್ಯಾ.**
**ಭಕ್ತ ವ್ರತಹೀನನರಿದು ನೆರೆಯನಯ್ಯಾ.**
**ನೆರೆದಡೆ ನರಕ, ಗುರುಶಾಂತೇಶ್ವರಾ.**

ಪರಿಪೂರ್ಣನಲ್ಲ, ಪ್ರದೇಶಿಕನಲ್ಲ,
ನಿರತಿಶಯದೊಳತಿಶಯ ತಾ
ಮುನ್ನಲ್ಲ.
ಶರಣನಲ್ಲ, ಐಕ್ಯನಲ್ಲ, ಪರಮನಲ್ಲ,
ಜೀವನಲ್ಲ,
ನಿರವಯನಲ್ಲ, ಸಾವಯನಲ್ಲ;
ಪರವಿಹವೆಂಬುಭಯದೊಳಿಲ್ಲದ
'ವನು.
ನಿರಾಲಯ ನಿಜಗುರು ಶಾಂತೇಶ್ವರನ
ಶರಣನ ನಿಲವು
ಉಪಮೆಗೆ ತಾನನುಪಮ.
ಪಾದದಲ್ಲಿ ಪಾದೋದಕ.
ಆ ಪಾದ ತೀರ್ಥವನು ಲಿಂಗಕ್ಕೆ ಮಜ್ಜನಕ್ಕೆರೆಯಬೇಕೆಂಬ
ಇಚ್ಛೆ ಹುಟ್ಟಿದಲ್ಲಿ ಲಿಂಗೋದಕ.
ಮಜ್ಜನಕ್ಕೆರದಲ್ಲಿ ಮಜ್ಜನೋದಕ.
ಜಿಹ್ವೆಯಲ್ಲಿ ಪಂಚಾಂಗುಲದಿ ಸ್ವೀಕರಿಸಿದ್ದೇ ಸ್ಪರ್ಶನೋದಕ.
ಎಚ್ಚರಿಕೆ ಸಾವಧಾನದಿಂದ ಸೇವಿಸಿದ್ದೇ ಅವಧಾನೋದಕ.
ಸಲಿಸಿ ಸಂತೋಷವಾದರೆ ಆಪ್ಯಾಯನೋದಕ.
ಹಸ್ತದೊಳಗಿರ್ದ ತೀರ್ಥವನು ಸಲಿಸಿದ್ದೇ ಹಸ್ತೋದಕ.
ಆ ಬಟ್ಟಲಲ್ಲಿದ್ದ ತೀರ್ಥವನು ಮೂರುಸಲ
ಸ್ವೀಕರಿಸಿದ್ದೇ ಪರಿಣಾಮೋದಕ.
ಆ ಪಾದೋದಕವನು ಅಂತಿಂತೆಂದು ಹೆಸರಿಡಲಿಲ್ಲವಾಗಿ
ನಿರ್ನಾಮೋದಕ.
ಬ್ರಹ್ಮರಂಧ್ರದಲ್ಲಿರ್ದುದೇ ಚಿದಮೃತವೆಂದು ಭಾವಿಸುವುದೇ
ಸತ್ಯೋದಕ.
ಇಂತೀ ದಶವಿಧ ಪಾದೋದಕವನು ಎನ್ನಂತರಂಗದಲ್ಲಿ ತಿಳಿದು
ನಾನು ಸದ್ಯೋನ್ಮುಕ್ತನಾದೆನಯ್ಯಾ ಗುರುಶಾಂತೇಶ್ವರಾ.

ಹತ್ತು ವಿಧದಲ್ಲಿ ಪಾದೋದಕವನ್ನು ಬಳಸುವುದನ್ನು ಅಂತರಂಗದ ಅರಿವಿನ ಮೂಲಕ ಅರಿತ ನಂತರ ತಾವು ಜೀವನ್ಮುಕ್ತಿಯ ಮಾರ್ಗವನ್ನು ಅರಿತೆನು ಎಂದು ಆಕೆ ಹೇಳುತ್ತಾರೆ

ಇವು ನಮಗೆ ದೊರೆತ ವೀರಮ್ಮನವರ ಐದು ವಚನಗಳಾಗಿದ್ದು ಈ ವಚನಗಳ ಮೂಲಕ ಆಕೆ ದಸರಯ್ಯನವರಿಗೆ ಅನುರೂಪ ಸತಿಯಾಗಿದ್ದರು. ಬದುಕಿನ ನಿಷ್ಟುರ ಸತ್ಯಗಳನ್ನು ಅರಿತ ಶರಣ ಧರ್ಮದಲ್ಲಿ ನಿಷ್ಠೆಯುಳ್ಳವಳಾಗಿ ವಚನಗಳ ಮೂಲಕ ತಮ್ಮ ಸಾತ್ವಿಕ ಮತ್ತು ಆಧ್ಯಾತ್ಮಿಕ ಆಲೋಚನೆಗಳನ್ನು ಹಂಚಿಕೊಂಡ ಒಬ್ಬ ಪ್ರಮುಖ ಶರಣೆಯಾಗಿದ್ದಾರೆ ಎಂಬುದು ನಮಗೆ ತಿಳಿದು ಬರುತ್ತದೆ.

ದಸರಯ್ಯನವರ ಪುಣ್ಯಸ್ತ್ರೀ ವೀರಮ್ಮನಂತಹವರು ಶರಣ ಧರ್ಮದಲ್ಲಿ ದಾಂಪತ್ಯದ ಬದುಕನ್ನು ಎತ್ತಿ ಹಿಡಿದರು.

**ಇಂತಹ ಶರಣೆಗೆ ನಮೋ ನಮಃ.**

# ಬದುಕಿನ ಜಟಕಬಂಡಿಗೆ ಡಿವಿಜಿ ಕಗ್ಗವೇ ದಾರಿದೀಪ



**ತುಮಕೂರು:** ಆಧುನಿಕ ಜಗತ್ತಿನ ಒತ್ತಡದ ಬದುಕಿಗೆ ಡಿ.ವಿ. ಗುಂಡಪ್ಪನವರ 'ಮಂಕುತಿಮ್ಮನ ಕಗ್ಗ' ಒಂದು ಅತ್ಯುತ್ತಮ ದಿವ್ಯೌಷಧಿಯಾಗಿದೆ ಎಂದು ವೈದ್ಯರು, ಲೇಖಕರು ಹಾಗೂ ಡಿಡಿ ಚಂದನದ ಥಟ್ ಅಂತ ಹೇಳಿ ಕಾರ್ಯಕ್ರಮದ ರೂವಾರಿಗಳಾದ ಡಾ. ನಾ. ಸೋಮೇಶ್ವರ್ ಅಭಿಪ್ರಾಯಪಟ್ಟಿದ್ದಾರೆ. ಡಿವಿಜಿ ಕಗ್ಗಗಳ ವಾಚನ, ವ್ಯಾಖ್ಯಾನಕಾರರು ಹಾಗೂ ವೈದ್ಯರಾದ ಡಾ.ಕೆ.ರಾಜಶೇಖರ್,

ತುಮಕೂರು ವಿವಿಯಲ್ಲಿ ಹಿರಿಯ ನಾಗರೀಕರ ಪರಿಸರ ವೇದಿಕೆ ಮತ್ತು ತುಮಕೂರು ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಕನ್ನಡ ವಿಭಾಗ ಇವರ ಸಹಯೋಗದಲ್ಲಿ ಮಾ.24 ಮಂಗಳವಾರ ಆಯೋಜಿಸಲಾಗಿದ್ದ ಡಿ.ವಿ.ಜಿ ಅವರ ಕಗ್ಗಗಳ ವಾಚನ, ವ್ಯಾಖ್ಯಾನ ಮುಕ್ತಾಯ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೇವಲ ನಾಲ್ಕು ಸಾಲುಗಳಲ್ಲಿ ಇಡೀ ಬದುಕಿನ ಸಾರವನ್ನು ಹಿಡಿದಿಡುವ ಕಗ್ಗ, ಕನ್ನಡಿಗರ ಪಾಲಿನ 'ಆಧುನಿಕ ಭಗವದ್ಗೀತೆ'. ಹುಲ್ಲಾಗು ಬೆಟ್ಟದಡಿ, ಮನೆಗೆ ಮಲ್ಲಿಗೆಯಾಗು ಎಂಬ ಸಾಲುಗಳು ಮನುಷ್ಯನಿಗೆ ಇರಬೇಕಾದ ವಿನಯ ಮತ್ತು ಸಮಾಜಕ್ಕೆ ನೀಡಬೇಕಾದ ಕೊಡುಗೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ಬೋಧಿಸುತ್ತವೆ ಎಂದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಸ್ಥಿತಪ್ರಜ್ಞತೆಯ ಅಗತ್ಯವಿದೆ. ವಿಧಿಯಾಟ ಮತ್ತು ಮನುಷ್ಯನ ಪುರುಷಾರ್ಥದ ನಡುವಿನ ಸಮತೋಲನವನ್ನು ಕಗ್ಗ ನಮಗೆ ಕಲಿಸಿಕೊಡುತ್ತದೆ. ವಿಜ್ಞಾನ ಮತ್ತು ಅಧ್ಯಾತ್ಮದ ಅಪೂರ್ವ ಸಂಗಮವೇ ಈ ಕೃತಿಯ ಯಶಸ್ಸಿನ ಗುಟ್ಟು ಎಂದು ವಿಶ್ಲೇಷಿಸಿದರು.

ಕನ್ನಡ ಸಾಹಿತ್ಯ ಲೋಕದ ಅಮೂಲ್ಯ ರತ್ನವಾಗಿರುವ ಈ ಕೃತಿಯನ್ನು ಕೇವಲ ಓದುವುದಷ್ಟೇ ಅಲ್ಲದೆ, ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ. ಯುವ ಪೀಳಿಗೆಯು ಇಂತಹ ಮೌಲ್ಯಯುತ ಸಾಹಿತ್ಯದತ್ತ ಒಲವು ತೋರಿದಾಗ ಮಾತ್ರ ಸುಸ್ಥಿರ ಸಮಾಜ ನಿರ್ಮಾಣ ಸಾಧ್ಯ ಎಂದರು.

ಡಿವಿಜಿ ಕಗ್ಗಗಳ ವಾಚನ, ವ್ಯಾಖ್ಯಾನಕಾರರು ಹಾಗೂ ವೈದ್ಯರಾದ ಡಾ.ಕೆ.ರಾಜಶೇಖರ್ ಮಾತನಾಡಿ ಇಂದಿನ ವೇಗದ ಬದುಕಿನಲ್ಲಿ ವಿದ್ಯಾರ್ಥಿಗಳಿಗೆ ಮತ್ತು ಯುವ ಪೀಳಿಗೆಗೆ ಡಿ.ವಿ. ಗುಂಡಪ್ಪನವರ ಮಂಕುತಿಮ್ಮನ ಕಗ್ಗದ ವಿಚಾರಗಳ ಅರಿವು ಅತ್ಯಂತ ಅಗತ್ಯವಾಗಿದೆ. ವೃತ್ತಿಯಲ್ಲಿ ವೈದ್ಯರಾಗಿದ್ದರೂ ಸಾಹಿತ್ಯದ ಮೇಲೆ ಅಪಾರ ಅಭಿಮಾನ ಹೊಂದಿರುವ ಡಾ. ರಾಜಶೇಖರ್ ಅವರು, ಕಳೆದ 9 ರಿಂದ 10 ವರ್ಷಗಳ ಕಾಲ ಹಿರಿಯ ನಾಗರಿಕರಿಗೆ ಕಗ್ಗವನ್ನು ಪರಿಚಯ ಮಾಡಿಕೊಟ್ಟ ಸಾರ್ಥಕ ಕ್ಷಣಗಳನ್ನು ಈ ಸಂದರ್ಭದಲ್ಲಿ ಸ್ಮರಿಸಿಕೊಂಡರು. ಬದುಕು ಜಟಕಬಂಡಿ, ವಿಧಿ ಅದರ ಸಾಹೇಬ ಎಂಬ ಅಮೋಘ ಸಾಲುಗಳ ಮೂಲಕ ಜನಪ್ರಿಯರಾದ ಡಿವಿಜಿಯವರ ಸಾಹಿತ್ಯವು ಸಕಾಲಿಕವಾಗಿದೆ ಎಂದರು.

ಮಂಕುತಿಮ್ಮನ ಕಗ್ಗ ಕೇವಲ ಪದ್ಯಗಳ ಸಂಕಲನವಲ್ಲ, ಅದು ಕನ್ನಡಿಗರ ಪಾಲಿನ ಆಧುನಿಕ ಭಗವದ್ಗೀತೆ. ಇದರಲ್ಲಿ ಆತ್ಮ, ಕರ್ಮ ಮತ್ತು ವಿಧಿಯ ಕುರಿತಾದ ಗಹನವಾದ ವಿಚಾರಗಳನ್ನು ಅತ್ಯಂತ ಸರಳವಾಗಿ ತಿಳಿಸಲಾಗಿದೆ. ಬದುಕಿನಲ್ಲಿ ಅಹಂಕಾರ ಮತ್ತು ಮಮಕಾರವನ್ನು ಬಿಟ್ಟು ಹೇಗೆ ಬಾಳಬೇಕು ಎಂಬುದೇ ಕಗ್ಗದ ನೈಜ ಅರ್ಥ ಎಂದು ಅವರು ವಿವರಿಸಿದರು.

ತುಮಕೂರು ವಿಶ್ವವಿದ್ಯಾನಿಲಯ ಕಲಾ ಕಾಲೇಜು ಪ್ರಾಂಶುಪಾಲರಾದ ಡಾ.ಜಿ.ದಾಕ್ಷಾಯಣಿ, ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಹೆಚ್. ಆರ್. ರೇಣುಕ, ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಡಾ.ಸಿಬಂತಿಪದ್ಮನಾಭ ಕೆ.ವಿ., ನಿವೃತ್ತ ಪ್ರಾಂಶುಪಾಲರಾದ ಪ್ರೊ.ಬಿ.ಕರಿಯಣ್ಣ, ಪ್ರಕಾಶ್ ಕುಮಾರ್ ಮತ್ತು ವಿವೇಕಾನಂದ ಶೆಟ್ಟಿ ಸೇರಿದಂತೆ ಹಿರಿಯ ನಾಗರೀಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೊನೆಯ ಕ್ಷಣದವರೆಗೂ ಜೀವ ಉಳಿಸುವ ಪ್ರಯತ್ನ ಮಾಡುವುದೇ ವೈದ್ಯನ ನಿಜವಾದ ಕರ್ತವ್ಯ



**ಕೆ.ಎಂ.ದೊಡ್ಡಿ:** ರೋಗಿಯ ಕ್ಲಿಷ್ಟಕರ ಸನ್ನಿವೇಶದಲ್ಲೂ ಕೊನೆಯ ಕ್ಷಣದವರೆಗೂ ಜೀವ ಉಳಿಸುವ ಪ್ರಯತ್ನ ಮಾಡುವುದೇ ವೈದ್ಯನ ನಿಜವಾದ ಕರ್ತವ್ಯ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಖ್ಯಾತ ಕ್ಯಾನ್ಸರ್ ತಜ್ಞೆ ಡಾ. ವಿಜಯಲಕ್ಷ್ಮಿ ದೇಶಮಾನೆ ಅಭಿಪ್ರಾಯಪಟ್ಟರು.

ಇಲ್ಲಿನ ಭಾರತೀ ಕಾಲೇಜಿನ ಕುವೆಂಪು ಸಭಾಂಗಣದಲ್ಲಿ ಶ್ರೀಮತಿ ಪದ್ಮ ಜಿ.ಮಾದೇಗೌಡ ಪ್ರತಿಷ್ಠಾನದ ವತಿಯಿಂದ ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಹಿನ್ನಲೆಯಲ್ಲಿ 12 ನೇ ವರ್ಷದ ಶ್ರೀಮತಿ ಪದ್ಮ ಜಿ.ಮಾದೇಗೌಡ ಮಹಿಳಾ ಸೇವಾ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು.

ನಾನು ಬಡತನದಲ್ಲಿ ಹುಟ್ಟಿ ವೈದ್ಯೆಯಾಗಿ ಜನ ಸೇವೆ ಮಾಡುತಿದ್ದೆನೆ ನಾನು ಸಹ ಸಾವನ್ನು ಗೆದ್ದು ಬಂದಿದ್ದಾನೆ. ವೈದ್ಯ ವೃತ್ತ ಬಹಳ ಪವಿತ್ರ ವೃತ್ತಿಯಾಗಿದ್ದು ಅದಕ್ಕೆ ನ್ಯಾಯ ಸಿಗಬೇಕಾದರೇ ರೋಗಿಯ ಜೀವ ಉಳಿಸಲು ಕೊನೆ ಕ್ಷಣದ ವರೆಗೆ ಪ್ರಯತ್ನ ಮಾಡಬೇಕು ಎಂದರು.

ಕ್ಯಾನ್ಸರ್ ರೋಗಕ್ಕೆ ಕೇವಲ ವೈದ್ಯಕೀಯ ಚಿಕಿತ್ಸೆ ಸಾಲದು. ವೈದ್ಯಕೀಯ ಚಿಕಿತ್ಸೆಯ ಜತೆಗೆ ಆತನಿಗೆ ಆತ್ಮಸ್ಥೈರ್ಯ ತುಂಬಲು ಅವರಿಗೊಬ್ಬ ಆತ್ಮೀಯ ಸ್ನೇಹಿತನ ಅವಶ್ಯಕತೆ ಇದ್ದು ರೋಗಿಯ ಭಯವನ್ನು ಹೋಗಲಾಡಿಸಿ, ಧೈರ್ಯ ತುಂಬುವುದೇ ಶ್ರೇಷ್ಠ ಚಿಕಿತ್ಸೆ ಎಂದು ತಿಳಿಸಿದರು.

ಮಾಜಿ ಸಂಸದ ದಿವಂಗತ ಜಿ.ಮಾದೇಗೌಡ ಅವರ ಕಾವೇರಿ ಚಳವಳಿಯ ಹೋರಾಟಗಳನ್ನು ನಾನು ದೃಶ್ಯ ಮಾಧ್ಯಮಗಳಲ್ಲಿ ನೋಡಿ ಅವರ ಹೋರಾಟದ ಪರಿ, ರೈತ ಪರ ಕಾಳಜಿ ಇಂದಿನ ಯುವಕರಿಗೆ ಆದರ್ಶವಾಗಿದ್ದು ಅಂತಹ ವ್ಯಕ್ತಿ ಸೂರ್ಯ–ಚಂದ್ರ ಇರುವರೆಗೂ ಶಾಶ್ವತ ಎಂದು ಶ್ಲಾಘೀಸಿದರು.

ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳು ವಿದ್ಯಾಭ್ಯಾಸ ಮಾಡಲು ಹಿರಿಯ ಗಾಂಧಿವಾದಿ, ಮಾಜಿ ಸಂಸದ ದಿವಂಗತ ಜಿ.ಮಾದೇಗೌಡ ಅವರು ನೆರವಾಗಿದ್ದು ಸರಕಾರ ಮಾಡಬೇಕಾದ ಕೆಲಸಗಳನ್ನು ಗೌಡರು ಮಾಡಿದ್ದು ಸಂಸ್ಥೆಯ ಕ್ಯಾಂಪಸ್ ವಿಶ್ವ ವಿಶ್ವದ್ಯಾನಿಲಯದ ರೀತಿ ಕಂಗೊಳಿಸುತ್ತಿದೆ ಎಂದರು.


ಪದ್ಮ ಜಿ.ಮಾದೇಗೌಡ ಅವರು ಮಾಜಿ ಸಂಸದ ಜಿ.ಮಾದೇಗೌಡರ ಬೆನ್ನೆಲಬಾಗಿ ನಿಂತು ಮಹಿಳೆಯರಿಗೆ ಶಿಕ್ಷಣ ನೀಡುವ ಮೂಲಕ ಸ್ವಾವಲಂಭಿಗಳಾಗಿ ಮಾಡಲು ಯಾರಿಗೂ ಕಾಣದಂತೆ ಶ್ರಮ ವಹಿಸಿದ್ದಾರೆ. ಪದ್ಮಮ್ಮ ಅವರ ಶ್ರಮ ಸಾರ್ಥಕತೆ ಪಡೆಯಬೇಕಾದರೆ ಮಹಿಳೆಯರು ಉನ್ನತ ಶಿಕ್ಷಣ ಪಡೆದು ಸ್ವಾವಲಂಭಿಗಳಾದಾಗ ಮಾತ್ರ ಸಾಧ್ಯ ಎಂದರು.

ಗ್ರಾಮೀಣ ಪ್ರದೇಶದ ಮಕ್ಕಳಿಗೆ ಶಿಕ್ಷಣ ದೊರಕಿಸಿಕೊಡಬೇಕೆಂಬ ಮಹತ್ವಾಕಾಂಕ್ಷಿ ಇಟ್ಟುಕೊಂಡು ಶಿಕ್ಷಣ ಸಂಸ್ಥೆಗ ತೆರೆದು ಲಕ್ಷಾಂತರ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿರುವ ಮಾಜಿ ಸಂಸದ ದಿವಂಗತ ಜಿ.ಮಾದೇಗೌಡ ಶೈಕ್ಷಣಿಕ ಸೇವೆಗೆ ಹಾಗೂ ಅವರ ಏಳ್ಗೆಗಾಗಿ ಜತೆ ನಿಂತು ಸಹಕರಿಸಿದ ಪದ್ಮಮ್ಮ ಜಿ.ಮಾದೇಗೌಡ ಅವರ ಹೆಸರಿನಲ್ಲಿ ನೀಡದ ಪ್ರಶಸ್ತಿಗೆ ನಾನು ಮನದುಂಬಿ ಕೃತಜ್ಞತೆಯನ್ನು ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಸಂಘದ ಅಧ್ಯಕ್ಷ ಅಧ್ಯಕ್ಷ ಪ್ರೊ.ಜಯಪ್ರಕಾಶ್‌ಗೌಡ ಮಾತನಾಡಿ, ಮಾಜಿ ಸಂಸದ ದಿವಂಗತ ಜಿ.ಮಾದೇಗೌಡ ಅವರು ಸಚಿವರ ಮುಂದೆ ಜನಪರ ಕೆಲಸಕ್ಕಾಗಿ ಜಿಲ್ಲಾಧಿಕಾರಿಗಳಿಗೆ ಧಮಕಿ ಹಾಕಿ ಅರಗಿಸಿ ಕೊಂಡ ಕೆಚ್ಚೆದೆಯ ಹೋರಾಟಗಾರ ಅಂತಹ ವ್ಯಕ್ತಿ ವ್ಯಕ್ತಿತ್ವ ಮತ್ತೊಬ್ಬ ಇಲ್ಲ ಎಂದರು.

ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ಶಿಕ್ಷಣ ನೀಡುತ್ತ ಗೌಡರು ಹಾಕಿ ಕೊಟ್ಟ ಮಾರ್ಗದಲ್ಲಿ ಪುತ್ರ ಮಧು ಜಿ.ಮಾದೇಗೌಡ ನಡೆಯುತಿದ್ದು ಅವರ ಪುತ್ರ ಆಶಯ್ ಮಧು ಹೊಸ ಆಲೋಚನೆಗಳನ್ನು ಇಟ್ಟು ಕೊಂಡು ಸಂಸ್ಥೆಯನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯುತ್ತಿರುವುದು ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಭಾರತೀ ವಿದ್ಯಾಸಂಸ್ಥೆಯು ಗ್ರಾಮೀಣ ವಿದ್ಯಾಗಳಿಗೆ ಆಶಾಕಿರಣವಾಗಿದ್ದು ಮಧು ಜಿ.ಮಾದೇಗೌಡ ಅವರು ತನ್ನ ತಂದೆ ಕಟ್ಟಿದ ಸಂಸ್ಥೆಯನ್ನು ಉತ್ತುಂಗಕ್ಕೆ ಕೊಂಡುಯ್ಯುತಿದ್ದು ಉತ್ತಮ ಶಿಕ್ಷಕರ ತಂಡ ಕಟ್ಟಿ ಕೊಂಡು ಗುಣಮಟ್ಟದ ಶಿಕ್ಷಣಕ್ಕೆ ಆಧ್ಯತೆ ನೀಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು



# ಬೆಳ್ಳಿ ಕಾಲುಂಗುರ



| ಪುಷ್ಪ ಪ್ರಸಾದ್

ಭಾರತದಲ್ಲಿ ವಿವಾಹಿತ ಮಹಿಳೆ ಕಾಲುಂಗರ ಧರಿಸುವುದು ಸರ್ವೇ ಸಾಮಾನ್ಯ. ಕಾಲುಂಗರ ಧರಿಸುವುದರಿಂದ ಮಹಿಳೆಗೆ ಮತ್ತು ಮನೆಗೆ ಒಳಿತಾಗುತ್ತದೆ ಎಂಬ ನಂಬಿಕೆಯಿದೆ. ಹಾಗಾಗಿ ಮದುವೆಯಾದ ಪ್ರತಿ ಸ್ತ್ರೀ ಕಾಲುಂಗುರ ಧರಿಸುತ್ತಾಳೆ. ಹೂವು, ಕುಂಕುಮ, ಬಳೆ, ಮಾಂಗಲ್ಯ ಹಾಗೂ ಕಾಲುಂಗರ ಧರಿಸಿದರೇ ಆಕೆಯನ್ನು ಪರಿಪೂರ್ಣ ಮುತ್ತೈದೆ ಎಂದು ಕರೆಯಲಾಗುತ್ತದೆ. ಭಾರತದ ಕೆಲವು ಪ್ರದೇಶಗಳಲ್ಲಿ, ಕಾಲುಂಗುರಗಳು ಎರಡು ಅರ್ಥವನ್ನು ಹೊಂದಿವೆ. ಇದು ಮಹಿಳೆಯ ಸಹೋದರಿ ಮತ್ತು ಹೆಂಡತಿಯ ಪಾತ್ರವನ್ನು ಸೂಚಿಸುತ್ತದೆ. ಅದಕ್ಕಾಗಿಯೇ ಮಹಿಳೆಯರು ಎರಡೂ ಪಾದಗಳಿಗೆ ಕಾಲುಂಗುರಗಳನ್ನು ಧರಿಸುತ್ತಾರೆ. ಇದು ಪತಿಯ ರಕ್ಷಣೆಯನ್ನು ಸೂಚಿಸುತ್ತದೆ. ಒಂದು ವೇಳೆ ಪತಿ ಮರಣ ಹೊಂದಿದರೆ ಅವರು ತಮ್ಮ ಕಾಲುಂಗುರವನ್ನು ತೆಗೆದುಹಾಕುತ್ತಾರೆ. ಹೀಗಾಗಿ, ಹಿಂದೂ ವಿವಾಹದಲ್ಲಿ, ಸಾಂಪ್ರದಾಯಿಕ ಕಾಲುಂಗುರಗಳು ಅನೇಕ ಅರ್ಥಗಳನ್ನು ಹೊಂದಿದ್ದವು ಮತ್ತು ಅನೇಕ ಕಾರಣಗಳಿಗಾಗಿ ಮಹಿಳೆಯರು ಧರಿಸುತ್ತಿದ್ದರು.

ಭಾರತೀಯ ಸಂಸ್ಕೃತಿಯಲ್ಲಿ ಮಾತ್ರ ವಿವಾಹಿತ ಮಹಿಳೆ ಕಾಲುಂಗರ ಧರಿಸುವ ಪದ್ಧತಿಯಿದೆ. ಇದು ಕೇವಲ ಸ್ತ್ರೀಯೋರ್ವಳು ವಿವಾಹಿತೆ ಎಂಬುದರ ಸೂಚಕವಷ್ಟೇ ಅಲ್ಲ, ಇದಕ್ಕೆ ವೈಜ್ಞಾನಿಕ ಕಾರಣವೂ ಕೂಡ ಇದೆ. ಇದು ವಿವಾಹಿತ ಸ್ತ್ರೀಯರಿಗೆ, ಗರ್ಭ ಧರಿಸಲು ಸಹಾಯ ಮಾಡುತ್ತದೆ. ಮಾತ್ರವಲ್ಲದೇ, ನಿರ್ದಿಷ್ಟ ನರವೊಂದು ಕಾಲಿನ ಎರಡನೆಯ ಬೆರಳನ್ನು ಗರ್ಭಾಶಯಕ್ಕೆ ಸಂಪರ್ಕಿಸುವಾಗ, ಅದು ಹೃದಯದ ಮೂಲಕ ಹಾದುಹೋಗುತ್ತದೆ ಎಂದು ಹೇಳಲಾಗುತ್ತದೆ.?

ಭಾರತೀಯ ವೇದಶಾಸ್ತ್ರಗಳ ಪ್ರಕಾರ ಎರಡೂ ಪಾದಗಳಲ್ಲಿ ಕಾಲುಂಗುರಗಳನ್ನು ಧರಿಸುವುದರಿಂದ, ಸ್ತ್ರೀಯರ ಋತುಚಕ್ರವು ನಿಯಮಿತಗೊಂಡು, ಸಮರ್ಪಕವಾದ ಅಂತರದಲ್ಲಿ ಉಂಟಾಗುತ್ತದೆ ಎಂಬ ನಂಬಿಕೆಯಿದೆ ಆದ್ದರಿಂದ, ಕಾಲುಂಗುರಗಳನ್ನು ಯಾವಾಗಲೂ ಬಲ ಮತ್ತು ಎಡ ಪಾದಗಳ ಎರಡನೆಯ ಬೆರಳುಗಳಿಗೇ ಧರಿಸಲಾಗುತ್ತದೆ. ಬೆಳ್ಳಿಯು ಒಂದು ಉತ್ತಮ ವಾಹಕವಾಗಿದ್ದು, ಅದರಿಂದ ಮಾಡಲ್ಪಟ್ಟ ಕಾಲುಂಗುರಗಳು, ಭೂಮಿಯ ಪಾಸಿಟಿವ್ ಶಕ್ತಿಗಳನ್ನು ಹೀರಿ ಶರೀರಕ್ಕೆ ವರ್ಗಾಯಿಸುತ್ತವೆ. ಮಾನವ ದೇಹದಲ್ಲಿ ಪ್ರಾಣ ಅಥವಾ ಜೀವ ಶಕ್ತಿಯು ಸಮತೋಲನಗೊಂಡಾಗ, ವ್ಯಕ್ತಿಯು ಉತ್ತಮ ಆರೋಗ್ಯವನ್ನು ಅನುಭವಿಸುತ್ತಾನೆ. ಈ ಪ್ರಾಣವು ನಮ್ಮ ಕಾಲ್ಬೆರಳುಗಳವರೆಗೂ ಹರಿಯುತ್ತದೆ. ಕಾಲುಂಗುರವನ್ನು ಧರಿಸುವುದರಿಂದ ದೇಹದಲ್ಲಿ ಶಕ್ತಿಯ ಹರಿವನ್ನು ಸಮತೋಲನಗೊಳಿಸಲು ಸಹಾಯ ಮಾಡುತ್ತದೆ. ಇದು ಪ್ರಾಣವನ್ನೂ ಕ್ರಿಯಾಶೀಲವಾಗಿರಿಸುತ್ತದೆ. ಹೀಗಾಗಿ, ಕಾಲುಂಗುರವನ್ನು ಧರಿಸುವುದರಿಂದ ಆರೋಗ್ಯವೂ ಉತ್ತಮವಾಗಿರುತ್ತದೆ. ಬೆಳ್ಳಿಯ ಕಾಲುಂಗುರವನ್ನು ವಿವಾಹಿತ ಮಹಿಳೆಯರಲ್ಲಿ ಲೈಂಗಿಕ ಭಾವನೆಗಳನ್ನು ಉಂಟುಮಾಡಬಹುದು ಎಂಬುದು ಇನ್ನೊಂದು ನಂಬಿಕೆ. ಲೈಂಗಿಕತೆಯು ವೈವಾಹಿಕ ಜೀವನದ ಪ್ರಮುಖ ಭಾಗವಾಗಿದೆ. ಮಹಿಳೆಗೆ ಲೈಂಗಿಕ ಬಯಕೆ ಅಥವಾ ಬಯಕೆಯ ಕೊರತೆಯಿದ್ದರೆ, ಅದು ಅವಳ ವೈವಾಹಿಕ ಜೀವನದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಆದ್ದರಿಂದ ವಿವಾಹಿತ ಮಹಿಳೆಯರು ಬೆಳ್ಳಿಯ ಕಾಲುಂಗುರವನ್ನು ಧರಿಸಲು ಇದು ಒಂದು ಕಾರಣ. ಬೆಳ್ಳಿಯು ಅನೇಕ ಅತೀಂದ್ರಿಯ ಮತ್ತು ಅದ್ಭುತ ಗುಣಗಳನ್ನು ಹೊಂದಿದೆ ಎನ್ನುವ ನಂಬಿಕೆಯಿದೆ. ಇದು ನಕಾರಾತ್ಮಕ ಶಕ್ತಿಯನ್ನು ತೆಗೆದುಹಾಕಬಹುದು ಮತ್ತು ಮರುಹಂಚಿಕೆ ಮಾಡಬಹುದು. ಆದ್ದರಿಂದ ಇದನ್ನು ವ್ಯಕ್ತಿಯ ಸೆಳವು ಸ್ವಚ್ಛಗೊಳಿಸಲು ಬಳಸಲಾಗುತ್ತದೆ. ಇದು ಉತ್ತಮ ನೀರು ಶುದ್ಧೀಕರಣ ಮತ್ತು ನಂಜುನಿರೋಧಕವಾಗಿದೆ.

ಹಿಂದೂ ಮಹಿಳೆಯರಿಗೆ ಮಾತ್ರವಲ್ಲದೆ ಮುಸ್ಲಿಂ ಮಹಿಳೆಯರಿಗೂ ಕಾಲುಂಗುರ ತೊಡುವ ಸಂಪ್ರದಾಯ ಇರುತ್ತದೆ. ತ್ರೇತಾಯುಗದಿಂದಲೂ ಬೆಳ್ಳಿಯ ಆಭರಣಗಳನ್ನು ಧರಿಸುವ ಈ ಪದ್ಧತಿ ಚಾಲ್ತಿಯಲ್ಲಿದೆ. ಪ್ರಾಚೀನ ಕಾಲದಿಂದಲೂ, ಪ್ರತಿ ಧರ್ಮವು ಬೆಳ್ಳಿಯನ್ನು ದೇವರ ಲೋಹ ಎಂದು ಪ್ರತಿಪಾದಿಸಿದೆ. ಆದ್ದರಿಂದ, ಇದು ದುಷ್ಟಶಕ್ತಿಗಳನ್ನು ಹಿಮ್ಮೆಟ್ಟಿಸುತ್ತದೆ. ಪ್ರವಾದಿ ಮುಹಮ್ಮದರು ಬೆಳ್ಳಿ ಉಂಗುರಗಳನ್ನು ಮಾತ್ರ ಧರಿಸುತ್ತಿದ್ದರು. ಪುರಾಣದ ಪ್ರಕಾರ, ಸೀತಾದೇವಿಯು ಮದುವೆಯ ನಂತರ ತನ್ನ ಪಾದಗಳಲ್ಲಿ ಕಾಲುಂಗುರ ಧರಿಸಿದ್ದಳು ಎನ್ನುವ ಉಲ್ಲೇಖ ಇದೆ.

ಆದರೆ ಇತ್ತೀಚೆಗೆ ಕಾಲುಂಗುರಗಳನ್ನು ಇತ್ತೀಚಿನ ದಿನಗಳಲ್ಲಿ ಅನೇಕ ಮಹಿಳೆಯರಿಗೆ ಫ್ಯಾಷನ್ ಪರಿಕರಗಳಾಗಿ ಮಾರ್ಪಟ್ಟಿವೆ. ಕಾಲೇಜಿನ ಹೆಣ್ಮಕ್ಕಳು ವಿವಾಹವಾಗದಿದ್ದರೂ ಇದನ್ನು ಧರಿಸುತ್ತಾರೆ. ಜೊತೆಗೆ ಬೀದಿ ಕಾಮಣ್ಣರಿಂದ ತಮ್ಮನ್ನು ರಕ್ಷಿಸಿಕೊಳ್ಳಲು ಕೆಲವರು ಕಾಲುಂಗರ ಧರಿಸುತ್ತಾರೆ. ವಿವಾಹಿತ ಮಹಿಳೆಯರು ಯಾವಾಗಲೂ ಬೆಳ್ಳಿಯ ಕಾಲುಂಗುರವನ್ನೇ ಧರಿಸಬೇಕು. ಅದಕ್ಕೆ ಜೀವನದಲ್ಲಿ ನಕಾರಾತ್ಮಕ ಶಕ್ತಿಗಳನ್ನು ಹೋಗಲಾಡಿಸುವ ಶಕ್ತಿ ಇದೆ. ಹಾಗಾಗಿ ಬೇರೆ ಯಾವುದೇ ಲೋಹಕ್ಕಿಂತ ಬೆಳ್ಳಿಯಿಂದ ಮಾಡಿದ ಕಾಲುಂಗುರಗಳನ್ನು ಧರಿಸುವುದು ಮುಖ್ಯ.



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,